ಬೆಂಗಳೂರು ಸಂಪುಟ: 16 ಸಂಚಿಕೆ: 38 ಪುಟ: 06 ಮಂಗಳವಾರ 31-12-2024


Mail:mussanje2010@gmail.com

www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)
Executive Editor: L P Babu
Honourary Editor: Venkatesh




2024ರಲ್ಲಿ ಯಶಸ್ಸಿನ ಶಿಖರವೇರಿದ ಜೈಸ್ವಾಲ್

'ಟಾಕ್ಸಿಕ್' ಚಿತ್ರದ ದೃಶ್ಯ ಲೀಕ್ ಪುಟ 6

## ಡ್ರಂಕ್ ಡ್ರೈವ್‌ಗಿಲ್ಲ ಅವಕಾಶ; ಕುಡಿದು ವಾಹನ ಚಲಾಯಿಸಿದ್ರೆ ಬೀಳುತ್ತೆ ಕೇಸ್

# ಸರ್ಪಗಾವಲಿನಲ್ಲಿ ವರ್ಷಾಚರಣೆ

**ಬೆಂಗಳೂರು:** ಕೊರೊನಾ ಆತಂಕದ ಬಳಿಕ ಇದೇ ಮೊದಲ ಬಾರಿಗೆ ಜನರು ಮುಕ್ತವಾಗಿ ಹೊರಬಂದು ಹೊಸ ವರ್ಷ ಸ್ವಾಗತಕ್ಕೆ, ಆಚರಣೆಗೆ ಭರ್ಜರಿಯಾಗಿ ಸಿದ್ಧರಾಗಿದ್ದಾರೆ. ನಗರವೂ ಸೇರಿದಂತೆ ಮಂಗಳೂರು, ಮೈಸೂರು, ಹುಬ್ಬಳ್ಳಿ, ಬೆಳಗಾವಿ ಮುಂತಾದ ರಾಜ್ಯದ ಪ್ರಮುಖ ನಗರಗಳಲ್ಲಿ ಹಾಗೂ ಪ್ರವಾಸಿ ತಾಣಗಳಲ್ಲಿ ಭರದಿಂದ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.

ಆದರೆ ಭದ್ರತೆ ಬಗ್ಗೆ ಕಟ್ಟುನಿಟ್ಟಿನ ನಿಯಮಗಳನ್ನು ವಿಧಿಸಿರುವ ರಾಜ್ಯ ಪೊಲೀಸರು ಹೊಸ ವರ್ಷಾಚರಣೆಯ ಬಗ್ಗೆ ಕಟ್ಟೆಚ್ಚರ ವಹಿಸಲಿದ್ದಾರೆ. ಹೊಟೇಲ್‌ಗಳು, ಬಾರ್‌ಗಳು, ಪಬ್‌ಗಳು, ಕ್ಲಬ್‌ಗಳು, ರಿಸೋರ್ಟ್‌ಗಳು ಹಾಗೂ ಇನ್ನಿತರ ಆಚರಣಾ ಸ್ಥಳಗಳ ಪುಟ 2




## ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಭದ್ರತೆ



**ಬೆಂಗಳೂರು:** ಹೊಸ ವರ್ಷಾಚರಣೆಗೆ ಬೆಂಗಳೂರಿನಲ್ಲಿ ಎಚ್ಚರಿಕೆ ಕ್ರಮ ಕೈಗೊಂಡಿದ್ದೇವೆ. ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತೆ ಹೆಚ್ಚಳ ಮಾಡಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಪರಮೇಶ್ವರ್, ಹೊಸ ವರ್ಷಾಚರಣೆ ವೇಳೆಯಲ್ಲಿ ಅಹಿತಕರ ಘಟನೆ ಆಗಬಾರದು ಅನ್ನೋದೇ ನಮ್ಮ ಉದ್ದೇಶ. ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತೆ ಹೆಚ್ಚಿಸಿದ್ದೇವೆ. ಹೆಚ್ಚು ಜನ ಸೇರುವ ಕಡೆ ಹೆಚ್ಚಿನ ಭದ್ರತೆ ವ್ಯವಸ್ಥೆ ಮಾಡಲಾಗುತ್ತದೆ. ಪುಟ 2




ಸಚಿವ ಜಮೀರ್ ಅಹಮದ್ ಖಾನ್ ಅವರು ಸ್ಲಂ ಬೋರ್ಡ್ ನಲ್ಲಿ ದಲಿತ ಸಂಘಟನೆ ಗಳ ಜತೆ ಕೊಳಗೇರಿ ವಾಸಿಗಳ ಸಮಸ್ಯೆ ಬಗ್ಗೆ ಸಮಾಲೋಚನೆ ನಡೆಸಿದರು. ಆಯುಕ್ತ ಅಶೋಕ್, ಪ್ರಧಾನ ಅಭಿಯಂತರ ಸುಧೀರ್, ತಾಂತ್ರಿಕ ಸಲಹೆ ಗಾರ ಬಾಲರಾಜ್, ಬಿಡಿಎ, ಬಿಬಿಎಂಪಿ, ಕಂದಾಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಚಾ.ನಗರ ಬಂದ್‌ಗೆ ಮಿಶ್ರಪ್ರತಿಕ್ರಿಯೆ

ಚಾಮರಾಜನಗರ: ರಾಜ್ಯಸಭೆಯಲ್ಲಿ ಅಂಬೇಡ್ಕರ್ ವಿರುದ್ಧ ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿದ್ದ ಹೇಳಿಕೆ ಖಂಡಿಸಿ ಜಿಲ್ಲೆಯ ದಲಿತ ಹಾಗೂ ಪ್ರಗತಿಪರ ಸಂಘಟನೆಗಳು ಇಂದು ಚಾಮರಾಜನಗರ ಜಿಲ್ಲಾ ಬಂದ್‌ಗೆ ಕರೆ ನೀಡಿದ್ದು, ಜಿಲ್ಲಾ ಕೇಂದ್ರ ಬಹುತೇಕ ಸ್ತಬ್ಧಗೊಂಡಿದೆ.

ದಲಿತ ಮುಖಂಡ ವೆಂಕಟರಮಣಸ್ವಾಮಿ ಪಾಪು ನೇತೃತ್ವದಲ್ಲಿ ದಲಿತ ಸಂಘಟನೆಗಳು, ಅಹಿಂದ, ಬಿಎಸ್ಪಿ, ಎಸ್ಡಿಪಿಐ, ಕನ್ನಡಪರ ಸಂಘಟನೆಗಳು ಹಾಗೂ ವಿದ್ಯಾರ್ಥಿ ಸಂಘಟನೆಗಳು ಇಂದು ಬೆಳಗ್ಗೆ 8 ರಿಂದಲೇ ಪ್ರತಿಭಟನೆ ಆರಂಭಿಸಿದ್ದು, ಜಿಲ್ಲಾ ಎಲ್ಲಾ ವೃತ್ತಗಳಲ್ಲಿ ಕೆಲ ಕಾಲ ಧರಣಿ ನಡೆಸಿ ಆಕ್ರೋಶ ಹೊರಹಾಕಿದರು. ನಗರದ ಭುವನೇಶ್ವರಿ ವೃತ್ತದಲ್ಲಿ ಪ್ರತಿಭಟನಾಕಾರರು ಶಾಮಿಯಾನ ಹಾಕಲು ಮತ್ತು ಟೈರ್ ಸುಡಲು ಮುಂದಾದರು. ಈ ವೇಳೆ, ಪೊಲೀಸರು ಅಡ್ಡಿಪಡಿಸಿದ್ದರಿಂದ ಪೊಲೀಸರ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಕಿಡಿಕಾರಿದರು.

ಬಂದ್ ಹಿನ್ನಲೆ ನಗರದಲ್ಲಿ ಬಹುತೇಕ ಹೋಟೆಲ್‌ಗಳು, ಅಂಗಡಿಗಳು, ವಾಣಿಜ್ಯ ಮಳಿಗೆಗಳನ್ನು ಮುಚ್ಚಲಾಗಿದೆ.



ಆದರೆ, ನಗರದಲ್ಲಿ ಸಾರಿಗೆ ಸಂಸ್ಥೆ ಬಸ್‌ಗಳು ಸಂಚಾರ ಮಾಡುತ್ತಿದ್ದರಿಂದ ಆಕ್ರೋಶ ಹೊರಹಾಕಿದ ಪ್ರತಿಭಟನಾಕಾರರು, ಚಾಲಕರ ಮುಷ್ಕರದ ಸಮಯದಲ್ಲಿ ನಿಮಗೆ ಬೆಂಬಲ ಕೊಟ್ಟಿದ್ದೆವು ಆದರೀಗ, ನೀವು ಇಂದು ನಮ್ಮ ಬಂದ್‌ಗೆ ಸಹಕಾರ ನೀಡುತ್ತಿಲ್ಲ ಎಂದು ಅಸಮಾಧಾನ ಹೊರ ಹಾಕಿದರು. ಇದಾದ ಬಳಿಕ, ಅಧಿಕಾರಿಗಳು ತಾತ್ಕಾಲಿಕವಾಗಿ ಸಾರಿಗೆ ಸಂಚಾರ ನಿಲ್ಲಿಸಿದರು.

ಭುವನೇಶ್ವರಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿದ ಪ್ರತಿಭಟನಾಕಾರರು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಘೋಷಣೆ ಕೂಗಿ ಕಿಡಿಕಾರಿದರು. ಪುಟ 2

## 2.50 ಕೋಟಿ ಮೌಲ್ಯದ ಮಾದಕ ಜಪ್ತಿ

ಬೆಂಗಳೂರು : ಹೊಸ ವರ್ಷಾಚರಣೆ ಸಮಯದಲ್ಲಿ ಸರಬರಾಜು ಮಾಡಲು ಮಾದಕ ಪದಾರ್ಥಗಳನ್ನ ಸಂಗ್ರಹಿಸಿಟ್ಟುಕೊಂಡಿದ್ದ ಆರೋಪಿಯನ್ನ ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ದಾವಣಗೆರೆ ಮೂಲದ ರಕ್ಷಿತ್ ಆರ್.ಎಂ (30 ) ಬಂಧಿತ.

ಆರೋಪಿಯು ಸಂಪಿಗೆಹಳ್ಳಿ ಠಾಣೆ ವ್ಯಾಪ್ತಿಯ ಚೊಕ್ಕನಹಳ್ಳಿಯ ಅಪಾರ್ಟ್‌ಮೆಂಟ್‌ನಲ್ಲಿ ಸಂಗ್ರಹಿಸಿಟ್ಟುಕೊಂಡಿದ್ದ 2.50 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದ್ದಾರೆ.



ಬೆಂಗಳೂರಿನಲ್ಲಿ ವಾಸವಿದ್ದ ಬಂಧಿತ ಆರೋಪಿಯು ಟ್ಯಾಟೂ ಆರ್ಟಿಸ್ಟ್ ಆಗಿ ಕೆಲಸ ಮಾಡಿಕೊಂಡಿದ್ದ. ಗೋವಾದಿಂದ ಎಲ್‌ಎಸ್‌ಡಿ, ಥೈಲ್ಯಾಂಡ್‌ನಿಂದ ಹೈಡ್ರೋ ಗಾಂಜಾ, ಹಿಮಾಚಲ ಪ್ರದೇಶದಿಂದ ಚರಸ್ ಹಾಗೂ ಆಂಧ್ರಪ್ರದೇಶದಿಂದ ಗಾಂಜಾ ತರಿಸಿಕೊಂಡು ಸಂಗ್ರಹಿಸಿಟ್ಟುಕೊಂಡಿದ್ದ.

ಆತನ ವಶದಲ್ಲಿದ್ದ 3.55 ಕೆಜಿ ಹೈಡ್ರೋ ಗಾಂಜಾ, 16.65 ಕೆಜಿ ಗಾಂಜಾ, 40 ಎಲ್‌ಎಸ್‌ಡಿ, ಸ್ಟ್ರಿಪ್ಸ್, 130 ಗ್ರಾಂ ಚರಸ್, 2.3 ಗ್ರಾಂ ಎಂಡಿಎಂಎ ಕ್ರಿಸ್ಟಲ್, 1.30 ಲಕ್ಷ ನಗದು ವಶಪಡಿಸಿಕೊಳ್ಳಲಾಗಿದೆ. ಮತ್ತೋರ್ವ ಆರೋಪಿ ತಲೆಮರೆಸಿಕೊಂಡಿದ್ದು, ಆತನ ಪತ್ತೆ ಕಾರ್ಯಪುಟ 2

## ಕುಟುಂಬ ಸಮೇತ ವಿದೇಶಕ್ಕೆ ಹಾರಿದ ಡಿಸಿಎಂ

ಬೆಂಗಳೂರು: ಹೊಸ ವರ್ಷದ ಸಂಭ್ರಮಾಚರಣೆಗೆ ಕ್ಷಣಗಣನೆ ಆರಂಭವಾಗಿದ್ದು, 2025ನೇ ವರ್ಷವನ್ನು ಸ್ವಾಗತಿಸಲು ಇಡೀ ಪ್ರಪಂಚ ಸಜ್ಜಾಗಿದೆ. ರಾಜ್ಯ ರಾಜಧಾನಿ ನಗರದಲ್ಲಿ ಹೊಸ ವರ್ಷವನ್ನು ಬರ ಮಾಡಿಕೊಳ್ಳಲು ಸಕಲ ಸಿದ್ಧತೆ ಭರದಿಂದ ಸಾಗಿದೆ.

ಈ ನಡುವೆ ಹೊಸ ವರ್ಷದ



ಸಂಭ್ರಮಾಚರಣೆಗಾಗಿ ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಕುಟುಂಬ ಸಮೇತ ವಿದೇಶಕ್ಕೆ ಹಾರಿದ್ದಾರೆ.

ಡಿ. ಕೆ. ಶಿವಕುಮಾರ್ ಇಂದು ಬೆಳಿಗ್ಗೆಯೇ ಕುಟುಂಬದವರೊಂದಿಗೆ ಕೆನಡಾ, ಟರ್ಕಿ ಪ್ರವಾಸಕ್ಕಾಗಿ ವಿಮಾನ ಏರಿದರು. ನಾಲ್ಕು ದಿನಗಳ ಕಾಲ ವಿದೇಶದಲ್ಲಿರಲಿರುವ ಶಿವಕುಮಾರ್ ಜನವರಿ 4 ರಂದು ನಗರಕ್ಕೆ ಹಿಂತಿರುಗಲಿದ್ದಾರೆ.

## ಬಿಜೆಪಿ ದಾಖಲೆ ಇಟ್ಟುಕೊಂಡು ಮಾತನಾಡಲಿ

ಬೆಂಗಳೂರು: ಭಾರತೀಯ ಜನತಾ ಪಾರ್ಟಿ ಅವರು ದಾಖಲೆ ಇಟ್ಟುಕೊಂಡು ಮಾತನಾಡಲಿ. ಲಾಜಿಕ್ ಇದ್ದರೆ ನಾವು ಉತ್ತರ ಕೊಡಬಹುದು. ನಮ್ಮ ಸಿದ್ದಾಂತವೇ ಬೇರೆ. ಅವರ ಸಿದ್ದಾಂತವೇ ಬೇರೆ . ನಾನು ಮೊದಲಿನಿಂದಲೂ ಅವರ ಸಿದ್ದಾಂತದ ವಿರುದ್ದವೇ ಇದ್ದೇವೆ. ಅದಕ್ಕೆ ಈ ರೀತಿ ಅರೋಪ ಮಾಡುತ್ತಾರೆ ಎಂದು ಗ್ರಾಮೀಣಾಭಿವೃದ್ಧಿ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.



ತಮ್ಮ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ನಾಯಕರು ನಡೆಸಿದ ಪೋಸ್ಟರ್ ಅಭಿಯಾನಕ್ಕೆ ತಿರುಗೇಟು ನೀಡಿರುವ ಅವರು, ಬಿಜೆಪಿಯವರು ಯಾವ ಚಳವಳಿಯನ್ನಾದರೂ ಮಾಡಿಕೊಳ್ಳಲಿ. ಬಟ್ಟೆಯನ್ನಾದರೂ ಹರಿದುಕೊಳ್ಳಲಿ. ಬಿಜೆಪಿಯವರು ದಾಖಲೆ ಇಟ್ಟುಕೊಂಡು ಮಾತನಾಡಲಿ ಎಂದು ಹೇಳಿದರು.

ಲಾಜಿಕ್ ಇಲ್ಲದೇ ಮಾತನಾಡುತ್ತಿರುವ, ಆರೋಪ ಮಾಡುತ್ತಿರುವವರಿಗೆ ಉತ್ತರ ಕೊಡುವ ಅವಶ್ಯಕತೆಯಿಲ್ಲ. ನಮ್ಮ ಸಿದ್ದಾಂತವೇ ಬೇರೆ. ಅವರ ಸಿದ್ದಾಂತವೇ ಬೇರೆ . ನಾನು ಮೊದಲಿನಿಂದಲೂ ಅವರ ಸಿದ್ದಾಂತವನ್ನು ವಿರೋಧಿಸುತ್ತಾ ಬಂದಿದ್ದೇನೆ. ಅವರಿಗೆ ನನ್ನ ಕಂಡರೆ ಆಗುವುದಿಲ್ಲ ಪುಟ 2

## ಬಿಜೆಪಿಯಿಂದ ಪೋಸ್ಟರ್ ಅಭಿಯಾನ




ಬೆಂಗಳೂರು: ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಹೋರಾಟ ತೀವ್ರಗೊಳಿಸಿರುವ ಬಿಜೆಪಿ ಇದೀಗ ಪೋಸ್ಟರ್ ಅಭಿಯಾನ ನಡೆಸಿ ಆಕ್ರೋಶ ವ್ಯಕ್ತಪಡಿಸಿದೆ. ಪ್ರಿಯಾಂಕ್ ಖರ್ಗೆ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಬಿಜೆಪಿ ನಾಯಕರು ಪೋಸ್ಟರ್ ಅಭಿಯಾನ ನಡೆಸಿದ್ದಾರೆ. ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಎಂಎಲ್‌ಸಿಗಳಾದ ಸಿ. ಟಿ. ರವಿ, ರವಿಕುಮಾರ್ ಅವರು ಪ್ರತಿಭಟನೆ ಪಾಲ್ಗೊಂಡಿದ್ದು, ಬಿಜೆಪಿ ಕಾರ್ಯಕರ್ತರು ರೇಸ್‌ಕೋರ್ಸ್ ರಸ್ತೆಯಲ್ಲಿ ಪೋಸ್ಟರ್ ಅಂಟಿಸಿ ಸಚಿವ ಖರ್ಗೆ ರಾಜೀನಾಮೆಗೆ ಆಗ್ರಹಿಸಿದ್ದಾರೆ. 'ಖರ್ಗೆ ಪ್ರಾಯೋಜಿತ ಸುಪಾರಿ', 'ಸುಪಾರಿ ಸ್ಪಾನ್ಸರ್ ಖರ್ಗೆ' ಎಂಬ ಪೋಸ್ಟರ್ ಹಿಡಿದ ಪುಟ 2

## ಡಿಜಿಪಿಗೆ ಬಿಜೆಪಿ ನಿಯೋಗ ದೂರು

ಬೆಂಗಳೂರು: ಬೆಳಗಾವಿಯಲ್ಲಿ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರನ್ನು ಅಕ್ರಮವಾಗಿ ಬಂಧಿಸಿ ಇಡೀ ರಾತ್ರಿ ನಿರ್ಜನ ಪ್ರದೇಶಗಳಲ್ಲಿ ಸುತ್ತಾಡಿಸಿದ ಪೊಲೀಸ್ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಬಿಜೆಪಿ ಮುಖಂಡರ ನಿಯೋಗ ಇಂದು ಪೊಲೀಸ್ ಮಹಾನಿರ್ದೇಶಕರಿಗೆ ದೂರು ನೀಡಿದೆ.

ಮಾಜಿ ಸಚಿವ ಸಿ.ಟಿ. ರವಿ, ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಸೇರಿದಂತೆ ಬಿಜೆಪಿ ಮುಖಂಡರ ನಿಯೋಗ ಇಂದು ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ರವರನ್ನು ಭೇಟಿ ಮಾಡಿ ಸಿ.ಟಿ. ರವಿಯವರನ್ನು ಅಕ್ರಮವಾಗಿ ಬಂಧಿಸಿ ಕಾನೂನು ಉಲ್ಲಂಘಿಸಿರುವ ಪೊಲೀಸ್ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರು ಸಲ್ಲಿಸಿತು.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ




ಟ್ವೀಟ್ ಮಾಡಿರುವ ಸಿ.ಟಿ. ರವಿ ಅವರು, ನನ್ನನ್ನು ಅಕ್ರಮವಾಗಿ ಬಂಧಿಸಿ ದೂರು ಕೊಟ್ಟ ಬಳಿಕವೂ ಎಫ್‌ಐಆರ್ ಹಾಕದೆ ನನ್ನ ಮೇಲೆ ದೌರ್ಜನ್ಯ ಎಸಗಿ ಕೆಲ ಪ್ರಭಾವಿ ವ್ಯಕ್ತಿಗಳ ನಿರ್ದೇಶನದಂತೆ ರಾತ್ರಿಯಿಡೀ ನಿರ್ಜನ ಪ್ರದೇಶದಲ್ಲಿ ಸುತ್ತಾಡಿಸಿ ಕಾನೂನು ಉಲ್ಲಂಘನೆ ಮಾಡಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಪೊಲೀಸ್ ಮಹಾನಿರ್ದೇಶಕ ಪುಟ 2

## ಐಟಿ ಪಾವತಿ; ಜ.31ರವರೆಗೆ ವಿಸ್ತರಣೆ

**ನವದೆಹಲಿ:** ಕೇಂದ್ರ ಆದಾಯ ತೆರಿಗೆ ಇಲಾಖೆಯು ತೆರಿಗೆ ಪಾವತಿಯ ಅಂತಿಮ ದಿನಾಂಕವನ್ನು ಜನವರಿ 31, 2025 ರವರೆಗೆ ವಿಸ್ತರಿಸಿದೆ.

ತೆರಿಗೆ ಪಾವತಿ ಮೊತ್ತ ನಿಗದಿಗೆ ಇಂದು ಕೊನೆಯ ದಿನವಾಗಿದ್ದು, ತೆರಿಗೆ ಪಾವತಿಯ ಅಂತಿಮ ದಿನಾಂಕವನ್ನು ಜನವರಿ 31, 2025 ರವರೆಗೆ ವಿಸ್ತರಿಸಲಾಗಿದೆ.

ನೇರ ತೆರಿಗೆ ವಿವಾದ ಸೆ ವಿಶ್ವಾಸ್ ಯೋಜನೆ, 2024 ರ ಸೆಕ್ಷನ್ 90 ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಕೋಷ್ಟಕದ ಕಾಲಮ್ (3) ರ ಪ್ರಕಾರ ಪಾವತಿಸಬೇಕಾದ ಮೊತ್ತವನ್ನು ನಿರ್ಧರಿಸುವ ದಿನಾಂಕವನ್ನು ಡಿಸೆಂಬರ್ 31, 2024 ರಿಂದ ಜನವರಿ 31, 2025 ರವರೆಗೆ ವಿಸ್ತರಿಸಲಾಗಿದೆ ಎಂದು ಸಿಬಿಡಿಟಿ ಮಾಹಿತಿ ನೀಡಿದೆ.

## ಸುಪಾರಿ, ಹನಿಟ್ರ್ಯಾಪ್; ಸಿಬಿಐ ತನಿಖೆ ಅನಿವಾರ್ಯ

**ಬೆಂಗಳೂರು:** ಸಚಿನ್ ಪ್ರಾಣತ್ಯಾಗ ಯಾಕಾಗಿದೆ ಎಂದು ತನಿಖೆ ಮಾಡುವವರು ಹೇಳಬೇಕಿದೆ. ಸುಪಾರಿ ಕೊಟ್ಟ ವಿಷಯ, ಹನಿಟ್ರ್ಯಾಪ್ ವಿಷಯವೂ ಇದರ ಜೊತೆಗಿದ್ದು, ಇದು ಗಂಭೀರ ಸ್ವರೂಪದ್ದು. ಸುಪಾರಿಯಲ್ಲಿ ಮಹಾರಾಷ್ಟ್ರದ ಸೋಲಾಪುರದವರ ಹೆಸರುಗಳಿವೆ. ಇದು ಅಂತರರಾಜ್ಯ ವಿಚಾರವಾಗಿದ್ದು, ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಗ್ರಹಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ವಿಷಯವನ್ನು ವೈಯಕ್ತಿಕವಾಗಿ ತೆಗೆದುಕೊಂಡು ಪ್ರಿಯಾಂಕ್ ಖರ್ಗೆಯವರು ಬಿಜೆಪಿ ಮತ್ತು ನಮ್ಮ




ನಾಯಕರಿಗೆ ಸವಾಲು ಹಾಕಿದ್ದಾರೆ. ಬಟ್ಟೆ ಹರಿದುಕೊಂಡರೂ ರಾಜೀನಾಮೆ ಕೊಡುವುದಿಲ್ಲ ಎಂದಿದ್ದಾರೆ. ಇದರರ್ಥ ಏನು? ಹೋರಾಟಕ್ಕೆ ಬೆಲೆ ಇಲ್ಲವೇ? ನ್ಯಾಯ ಕೇಳುವುದು ತಪ್ಪೇ ಎಂದು ಪ್ರಶ್ನಿಸಿದರು.

ಪ್ರಕರಣದ ಹಿಂದೆ ಎಲ್ಲ ಪ್ರಿಯಾಂಕ್ ಖರ್ಗೆಯವರ ಎಡಗೈ (ಲೆಫ್ಟ್ ಹ್ಯಾಂಡ್) ಬಲಗೈ (ರೈಟ್ ಹ್ಯಾಂಡ್) ಪುಟ 2

## ಅತ್ಯಾಚಾರ: ಆರೋಪಿ ಬಂಧನಕ್ಕೆ ಪೊಲೀಸರಿಂದ ಶೋಧ

ಚಾಮರಾಜನಗರ: ಕೂಲಿ ಕೆಲಸಕ್ಕೆ ಬಂದಿದ್ದವನ ಮಗಳ ಮೇಲೆ ಕಾಮುಕನೋರ್ವ ಅತ್ಯಾಚಾರ ಎಸಗಿರುವ ಘಟನೆ ಹನೂರು ತಾಲೂಕಿನಲ್ಲಿ ನಡೆದಿದೆ. ತಮಿಳುನಾಡಿನ ತಾರಮಂಗಲ ಗ್ರಾಮದ ವೆಟ್ರಿವಲ್(28) ಅತ್ಯಾಚಾರ ಎಸಗಿರುವ ಆರೋಪಿ.

ಬಾಲಕಿ ತೀವ್ರ ಅಸ್ವಸ್ಥಗೊಂಡಿದ್ದು, ಕೊಳ್ಳೇಗಾಲ ಉಪ ವಿಭಾಗ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಬಾವಿ ತೋಡುವ ಕೆಲಸಕ್ಕಾಗಿ ವ್ಯಕ್ತಿಯೋರ್ವನನ್ನು ವೆಟ್ರಿವಲ್ ಕರೆತಂದಿದ್ದ. ಬಾವಿ ತೋಡಲು ಕಾರ್ಮಿಕರು ಕೆಲಸದಲ್ಲಿ ತೊಡಗಿದ್ದಾಗ ಬಾಲಕಿಯನ್ನು ವೆಟ್ರಿವಲ್ ಪುಸಲಾಯಿಸಿ ಕರೆದೊಯ್ದು ಅತ್ಯಾಚಾರ ಎಸಗಿದ್ದಾನೆ ಎಂದು ಆರೋಪಿಸಲಾಗಿದೆ.

ಬಾಲಕಿಯನ್ನು ಹುಡುಕಿಕೊಂಡು ತಂದೆ ಬರುವುದನ್ನು ಕಂಡ ವೆಟ್ರಿವಲ್, ಪರಾರಿಯಾಗಿದ್ದು ತೀವ್ರ ಅಸ್ವಸ್ಥಗೊಂಡಿದ್ದ ಬಾಲಕಿಯನ್ನು ಕೊಳ್ಳೇಗಾಲ ಉಪ ವಿಭಾಗ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಈ ಸಂಬಂಧ ಹನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಪತ್ತೆಗೆ ಬಲೆ ಬೀಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಬಡವರಿಗೆ ಮನೆ ನೀಡಲು ಮುಂದಾದ ಮೋದಿ

**ನವದೆಹಲಿ:** ಸೂರಿಲ್ಲದ ದೇಶದ ಜನರಿಗೆ ಸೂರು ಒದಗಿಸುವ ನಿಟ್ಟಿನಲ್ಲಿ ಹೊಸ ವರ್ಷದ ಉಡುಗೊರೆ ಎಂಬಂತೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರವು ದೇಶದ ಬಡವರಿಗೆ ಇನ್ನೂ 2 ಕೋಟಿ ಮನೆಗಳನ್ನು ನೀಡಲು ಮನೆಮನೆ ಸಮೀಕ್ಷೆ ನಡೆಸಲು ನಿರ್ಧರಿಸಿದೆ. ಮುಂದಿನ ಮೂರು ತಿಂಗಳೊಳಗೆ ಅಂದರೆ 2025ರ ಮಾರ್ಚ್ 31ರೊಳಗೆ ಮನೆಮನೆ ಸಮೀಕ್ಷೆ ಪೂರ್ಣ ಗೊಳಿಸಲಿದೆ. ಇದು 2024ರಲ್ಲಿ ಬಿಜೆಪಿಯ ಚುನಾವಣಾ ಭರವಸೆಗಳಲ್ಲಿ ಪ್ರಮುಖವಾಗಿತ್ತು.

ಈ ಬಗ್ಗೆ ಕೇಂದ್ರ ಸರ್ಕಾರವು ಎಲ್ಲಾ ರಾಜ್ಯಗಳಿಗೆ ಕಳುಹಿಸಿರುವ ಸಂವಹನಾ ಪತ್ರವು ಲಭ್ಯವಾಗಿದ್ದು, ಅರ್ಹ ಕುಟುಂಬಗಳನ್ನು ಗುರುತಿಸಲು ಆವಾಸ್ + 2024 ಅಪ್ಲಿಕೇಶನ್ ಅನ್ನು ಬಳಸಿಕೊಂಡು ಸಮೀಕ್ಷೆಯನ್ನು ಪ್ರಾರಂಭಿಸಲು ನಿರ್ಧರಿಸಲಾಗಿದೆ. ರಾಜ್ಯ, ಕೇಂದ್ರಾಡಳಿತ ಪ್ರದೇಶದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಆದ್ಯತೆಯ ಮೇರೆಗೆ ಮನೆ ಸಮೀಕ್ಷೆಯನ್ನು ಪ್ರಾರಂಭಿಸಲು ಮತ್ತು ಮಾರ್ಚ್ 31, 2025 ರೊಳಗೆ ಇದು ಪೂರ್ಣಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲು



ಸೂಚಿಸಲಾಗಿದೆ. ಯಾವುದೇ ಅರ್ಹ ಕುಟುಂಬಗಳನ್ನು ಹೊರಗಿಡಬಾರದು ಎಂದು ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಿಗೆ ಕಳುಹಿಸಿರುವ ಪತ್ರದಲ್ಲಿ ನಿರ್ದೇಶಿಸಿದೆ.

ಪ್ರಧಾನ ಮಂತ್ರಿ ಆವಾಸ್ (ನಗರ) ಯೋಜನೆಯಡಿ ಇನ್ನೂ ಒಂದು ಕೋಟಿ ಮನೆಗಳ ಸಮೀಕ್ಷೆಯು ಈಗಾಗಲೇ ಪ್ರಾರಂಭವಾಗಿದೆ ಎಂದು ಉನ್ನತಾಧಿಕಾರಿಗಳು ತಿಳಿಸಿದ್ದಾರೆ. 2024ರ ಲೋಕಸಭಾ ಚುನಾವಣೆಯ ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮೂರು ಕೋಟಿ ಮನೆಗಳು, ದೇಶದ ಗ್ರಾಮೀಣ ಭಾಗದಲ್ಲಿ ಎರಡು ಕೋಟಿ ಮತ್ತು ನಗರ ಪ್ರದೇಶಗಳಲ್ಲಿ ಒಂದು ಕೋಟಿ ಮನೆಗಳನ್ನು ನಿರ್ಮಿಸುವ ಭರವಸೆ ನೀಡಿತ್ತು.

ಮೊದಲ ಎರಡು ಅವಧಿಯಲ್ಲಿ ಈ ಯೋಜನೆಯಡಿ ಈಗಾಗಲೇ ನಾಲ್ಕು ಕೋಟಿ ಮನೆಗಳನ್ನು ಪೂರ್ಣಗೊಳಿಸಿರುವುದಾಗಿ ಮೋದಿ ಸರ್ಕಾರ ಪ್ರಣಾಳಿಕೆಯಲ್ಲಿ ಹೇಳಿತ್ತು. 2016 ರಿಂದ ಪ್ರಧಾನಮಂತ್ರಿ ಆವಾಸ್ ಯೋಜನೆಯು ಬಿಜೆಪಿಗೆ ದೊಡ್ಡ ಬದಲಾವಣೆಯಾಗಿದೆ. ಮೂರು ಕೋಟಿ ಹೆಚ್ಚುವರಿ ಮನೆಗಳನ್ನು 2029ರ ಮಾರ್ಚ್ 31ರ ವೇಳೆಗೆ ಪೂರ್ಣಗೊಳಿಸುವ ಗುರಿ ಇದೆ. ಸರ್ವೇ ಕಾರ್ಯ: ಸಮೀಕ್ಷೆಯನ್ನು ಸರ್ವೇಯರ್ಗಳು ಮತ್ತು ಜನರೂ ಕೂಡ ಮಾಡಲು ಅವಕಾಶವಿದೆ. ಆವಾಸ್ + 2024 ಮೊಬೈಲ್ ಅಪ್ಲಿಕೇಶನ್ನಲ್ಲಿ ಮುಖ ದೃಢೀಕರಣವನ್ನು ಬಳಸಿಕೊಂಡು ಸ್ವಯಂ-ಸಮೀಕ್ಷೆಯನ್ನು ಮಾಡಲು ಜನರಿಗೆ ಒಂದು ಆಯ್ಕೆಯನ್ನು ನೀಡಲಾಗುತ್ತದೆ.

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಈಗಾಗಲೇ ಸರ್ವೇಯರ್ಗಳನ್ನು ನೋಂದಾಯಿಸಿವೆ. ಆವಾಸ್ + 2024 ಮೊಬೈಲ್ ಅಪ್ಲಿಕೇಶನ್ ಬಳಸಿಕೊಂಡು ಗ್ರಾಮ ಪಂಚಾಯತ್ಗಳಿಗೆ ಮ್ಯಾಪ್ ಮಾಡಲಾಗಿದೆ. ಹೆಚ್ಚುವರಿಯಾಗಿ, ಎಲ್ಲಾ ಅರ್ಹ ಫಲಾನುಭವಿಗಳ ಸಮಗ್ರವಾಗಿ ಸೇರ್ಪಡೆಯನ್ನು ಖಚಿತಪಡಿಸಿಕೊಳ್ಳಲು, ಅಪ್ಲಿಕೇಶನ್ ಮುಖಾಧಾರಿತ ದೃಢೀಕರಣವನ್ನು ಬಳಸಿಕೊಂಡು ಸ್ವಯಂ ಸಮೀಕ್ಷೆಯನ್ನು ಮಾಡಲು ನಾಗರಿಕರಿಗೆ ಅನುವು ಮಾಡಿಕೊಡುತ್ತದೆ ಎಂದು ರಾಜ್ಯಗಳಿಗೆ ರವಾನಿಸಿರುವ ಕೇಂದ್ರದ ಪತ್ರದಲ್ಲಿ ತಿಳಿಸಲಾಗಿದೆ.

ಆವಾಸ್ + ಮೊಬೈಲ್ ಅಪ್ಲಿಕೇಶನ್ನು ಪ್ರಧಾನಿ ಮೋದಿ ಅವರು ಕಳೆದ ಸೆಪ್ಟೆಂಬರ್ 17 ರಂದು ಭುವನೇಶ್ವರದಲ್ಲಿ ಪ್ರಾರಂಭಿಸಿದರು. ಈ ಅಪ್ಲಿಕೇಶನ್ ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಮಾರ್ಗಸೂಚಿಗಳ ಆಧಾರದ ಮೇಲೆ ಯೋಜನೆಯ ಅಡಿಯಲ್ಲಿ ಪ್ರಯೋಜನಗಳಿಗೆ ಅರ್ಹರಾಗಿರುವ ಹೆಚ್ಚುವರಿ ಗ್ರಾಮೀಣ ಕುಟುಂಬಗಳನ್ನು ಗುರುತಿಸುವ ಗುರಿಯನ್ನು ಹೊಂದಿದೆ.


# ದರ್ಶನ್‌ಗೂ ನಂಗೂ ಯಾವುದೇ ಸಮಸ್ಯೆಯಿಲ್ಲ

ಕನ್ನಡ ಚಿತ್ರರಂಗದ ಅಭಿನಯ ಚಕ್ರವರ್ತಿ ಖ್ಯಾತಿಯ ಸುದೀಪ್ ತಮ್ಮ ಇತ್ತೀಚಿನ 'ಮ್ಯಾಕ್ಸ್' ಸಿನಿಮಾದ ಯಶಸ್ಸಿನಲೆಯಲ್ಲಿ ತೇಲುತ್ತಿದ್ದಾರೆ. ಸಿನಿಮಾ ಬಹುತೇಕ ಮೆಚ್ಚುಗೆ ಸ್ವೀಕರಿಸಿದ್ದು, ಬಾಕ್ಸ್ ಆಫೀಸ್‌ನಲ್ಲೂ ಕಮಾಲ್ ಮಾಡಿದೆ. ಇದರ ನಡುವೆ ಸಕ್ಸಸ್ ಸೆಲೆಬ್ರೇಶನ್‌ನ ಕೇಕ್‌ಗೆ ಸಂಬಂಧಿಸಿದಂತೆ ಹಲವು ಅಂತೆಕಂತೆಗಳು ಹುಟ್ಟಿಕೊಂಡಿದ್ದವು. ಇದಕ್ಕೆ ಸಂಬಂಧಿಸಿದಂತೆ ಇದೀಗ ಸ್ವತಃ ಕಿಚ್ಚ ಸುದೀಪ್ ಅವರೇ ಸ್ಪಷ್ಟನೆ ನೀಡಿದ್ದಾರೆ.

ತಮ್ಮ ಸಿನಿಮಾ ಸಂಭ್ರಮದಲ್ಲಿ ಸುದೀಪ್ ಅವರು ಪತ್ನಿ ಮತ್ತು ತಮ್ಮವರೊಂದಿಗೆ ಸೇರಿ ಕೇಕ್ ಕತ್ತರಿಸಿದ್ದರು. ಆ ಕೇಕ್ ಮೇಲೆ 'ಃಘುಟ ಕಾಲ ಮುಗೀತು, ಒಚಿಘುಟಣಾಟ ಒಛಿ ಕಾಲ ಶುರುವಾಯ್ತು' ಎಂದು ಬರೆಯಲಾಗಿತ್ತು. ಕೇಕ್ ಮತ್ತು ಸೆಲೆಬ್ರೇಶನ್‌ನ ಫೋಟೋ ವಿಡಿಯೋಗಳು ವೈರಲ್ ಆದ ಬೆನ್ನಲ್ಲೇ ಆನ್‌ಲೈನ್‌ನಲ್ಲಿ ಅಭಿಪ್ರಾಯಗಳು ವ್ಯಕ್ತವಾಗಲು ಶುರುವಾಯಿತು. ಪರ ವಿರೋಧ ಚರ್ಚೆ ನಡೆಯಿತು. ಇದೀಗ ಮಾಧ್ಯಮದವರೊಂದಿಗಿನ ಸಂವಾದದಲ್ಲಿ ಸ್ವತಃ ಕಿಚ್ಚ ಸುದೀಪ್ ಅವರೇ ಈ ಬಗ್ಗೆ ಸ್ಪಷ್ಟನೆ ಕೊಟ್ಟಿದ್ದಾರೆ.

"ಯಶ್, ಶಿವಣ್ಣ, ಧ್ರುವ ಇವರಿಗೆಲ್ಲರಿಗೂ ಅವರವರ ಫ್ಯಾನ್ಸ್ ಬಾಸ್ ಅಂತಾನೆ ಕರೆಯುತ್ತಾರೆ. ದರ್ಶನ್ ಅವರಿಗೂ ನಂಗೂ ಏನೂ ಇಲ್ಲ ಸರ್. ಬಹಳ ಕಷ್ಟಪಟ್ಟು ಅವರು ಮೇಲೆ ಬಂದಿದ್ದಾರೆ. ಕನ್ನಡ ಚಿತ್ರರಂಗ ಬೆಳೆಯಬೇಕು. ಇವೆಲ್ಲಾ ಸಮಸ್ಯೆಗಳು ಬೇಡ" ಎಂದು ಸುದೀಪ್ ಮನವಿ ಮಾಡಿಕೊಂಡಿದ್ದಾರೆ.

ಆ ವಾಹಿನಿಯಲ್ಲಿ ಒಂದು ಕಲಾವಿದನ ಹೆಸರು ತೆಗೆದುಕೊಂಡು ಟಾಂಟ್ ಅಂತಾ ಹೇಳಿದ್ರು. ಹಾಗೆಲ್ಲಾ ಏನೂ ಇಲ್ಲ. ತಮ್ಮ ಮೆಚ್ಚಿನ ತಾರೆಯರಿಗೆ ಅಭಿಮಾನಿಗಳು ಬಾಸ್ ಅಂತಾನೆ ಉಲ್ಲೇಖಿಸುತ್ತಾರೆ ಎಂದು ತಿಳಿಸಿದ್ರು.




ನನ್ನ ಒಬ್ಬ ಸ್ನೇಹಿತ, ನನ್ನ ಹುಡುಗ ಬೆಳಗ್ಗೆ ಚಿತ್ರಮಂದಿರಕ್ಕೆ ಹೋಗ್ತಾರೆ. ಈಗ ಈ ಮಾತನ್ನು ಏಕೆ ಹೇಳುತ್ತಿದ್ದೇನಂದ್ರೆ ನನ್ ಹುಡುಗ ಸರ್. ಅವನಿಗೇನಾದ್ರು ಆದ್ರೆ ಮೊದ್ಲು ಎದೆ ಕೊಟ್ಟು ನಿಲ್ಲೋನು ನಾನು. ಅವನು ಒಂದು ಮಾತು ಹೇಳ್ತಾನೆ, ಇವತ್ತಿಂದ ಕಿಚ್ಚ ಬಾಸ್ ಅಂತಾ ಕರೆಯೋದನ್ನು ನಿಲ್ಲಿಸಿ, ಕಿಚ್ಚ ಮಾಸ್ ಅನ್ನೋಣ ಅಂತಾನೆ. ಅದನ್ನೇ ಕೇಕ್ ಮೇಲೆ ಬರೆಸಿಕೊಂಡು ಬರ್ತಾನೆ. ಅದನ್ನೇ ಹಿಡಿದು 'ಯಾರಿಗೋ ಟಾಂಟ್ ಕೊಟ್ರಾ ಕಿಚ್ಚ' ಅಂತಾ ಹೇಳಲು ಶುರುವಾಗುತ್ತೆ. ಇದಾದ ಮೇಲೆ ಯಾರದ್ದೋ ಫ್ಯಾನ್ಸ್, ಆ ಹುಡುಗನಿಗೆ ಬೆದರಿಕೆ ಹಾಕೋದೋ ಅಥವಾ ಏನಾದ್ರು ಹೆಚ್ಚು ಕಡಿಮೆ ಮಾಡಿದ್ರು ಅಂದ್ಕೊಳೋಣ....!! ಅದಕ್ಕೆ ನಾನು ಬಿಡೋದಿಲ್ಲ. ಮಾಡಿದ್ರು ಅಂದುಕೊಳ್ಳೋಣ.. ಹಾಗೆ ಹೇಳಿದವರು ಅಥವಾ ಸುದ್ದಿ ಹಬ್ಬಿಸಿದವರು ಜವಾಬ್ದಾರಿ ತೆಗೊಳ್ತಾರಾ ಸರ್ ಎಂದು ಸುದೀಪ್ ಪ್ರಶ್ನಿಸಿದ್ದಾರೆ. ಯಾರು ಸುದ್ದಿಯನ್ನು ಶುರು ಮಾಡಿದ್ರೋ ಅವರು ಅವರ ಯಜಮಾನ್ರಿಗೆ ಕರಿಯೋದು ಬಾಸ್ ಅಂತಾನೇ ಅಲ್ವಾ? ಹಾಗಾದ್ರೆ ನಾನ್ ಅವ್ರ ಬಾಸ್‌ಗೆ ಮಾಡಿಸಿದ್ನಾ ಕೇಕ್? ಎಂದು ಪ್ರಶ್ನಿಸಿದ ಸುದೀಪ್, ನಾನು ನನ್ನ ತಂದೆಗೆ ಬಾಸ್ ಅಂತಾ ಕರೆಯುತ್ತೇನೆ ಎಂದು ಇದೇ ವೇಳೆ ತಿಳಿಸಿದರು.

ಯಶ್, ದರ್ಶನ್, ಧ್ರುವ, ಉಪ್ಪಿ, ಶಿವಣ್ಣ ಹೀಗೆ ಎಲ್ಲಾ ಸೇರಿದ್ರೇನೆ ಒಂದು ಕನ್ನಡ ಚಿತ್ರರಂಗ ಸರ್. ಇದೇ ಒಂದು ವಾಹಿನಿಯಲ್ಲಿ ದರ್ಶನ್ ಫ್ಯಾನ್ಸ್ ವಿಷಯ ಬಂದಾಗ ನಾನ್ ಹೇಳಿದ್ದೆ, ಫ್ಯಾನ್ಸ್‌ಗೆ ಬೈಯೋಕೆ ಹೋಗ್ಬೇಡಿ, ಅವ್ರಿಗೆ ಗೊತ್ತಾಗ್ತಿಲ್ಲ ಏನು ಮಾಡ್ಬೇಕು ಅನ್ನೋದು. ನೋವಲ್ಲಿ ಇದ್ದಾರೆ ಅವ್ರು ಅನ್ನೋದನ್ನ ತಿಳಿಸಿದ್ದೆ. ಹೀಗೆ ನಾನೇ ನನ್ನ ಬಾಯಲ್ಲಿ ಹೇಳಿದ್ಮೇಲೆ ಅವರಿಗೇಕೆ ಟಾಂಟ್ ಕೊಡಲಿ? ಎಂದು ಕಿಚ್ಚ ಪ್ರಶ್ನಿಸಿದರು.

ನಮ್ಮ ಹಿರಿಯರು ಚಿತ್ರರಂಗವನ್ನು ಅದ್ಭುತವಾಗಿ ಬೆಳೆಸಿ, ಅದನ್ನು ನಮ್ಮ ಕೈಗೆ ಕೊಟ್ಟು ಹೋಗಿದ್ದಾರೆ. ಅದನ್ನು ನೀವು ಇನ್ನಷ್ಟು ಬೆಳೆಸಿ ಅಂತಾ ನಮಗೆ ಜವಾಬ್ದಾರಿ ವಹಿಸಿದ್ದಾರೆ. ನಾವಿದನ್ನು ಬೆಳೆಸಿ ನಮ್ಮ ಮುಂದಿನ ಪೀಳಿಗೆಗೆ ಜವಾಬ್ದಾರಿ ವಹಿಸಬೇಕಿದೆ. ತಮ್ಮಂದಿರೇ ನೀವಿದನ್ನು ಬೆಳೆಸಿ ಎಂದು ನಾವು ಹೇಳಬೇಕಿದೆ. ಇದೊಂದು ಕುಟುಂಬ. ನಾನು ನನ್ನ ತಂದೆಗೆ ಬಾಸ್ ಅಂತಾ ಕರೆಯೋದು. ಆ ಕೇಕ್ ಮಾಡಿಸಿದ ಹುಡುಗನ ಮನಸ್ಸು ಕೂಡಾ ನನಗೆ ಗೊತ್ತು. ಸುದ್ದಿ ಹಬ್ಬಿಸಿದವರಲ್ಲಿ ನಾನು ಕೇಳಿಕೊಳ್ಳೋದು ಇಷ್ಟೇನೆ, ನಾವು ನೀವು ಪ್ರತಿದಿನ ಮುಖ ನೋಡಿಕೊಳ್ಳಬೇಕು. ಪ್ರೀತಿಯಿಂದ ಮಾತನಾಡಿಕೊಳ್ಳಬೇಕಾಗುತ್ತೆ. ನಿಮ್ಮಲ್ಲೂ ಆ ಬೇಧಭಾವ ಬೇಡ, ನಮ್ಮಲ್ಲೂ ಬೇಡ. ಬಹಳ ವರ್ಷಗಳಿಂದ ನಾವು ಪ್ರಯಾಣ ಮಾಡಿಕೊಂಡು ಇಲ್ಲಿವರೆಗೂ ಬಂದಿದ್ದೀವಿ ಅಂದ್ಮೇಲೆ, ನಿಮ್ಮ ಬಗ್ಗೆ ನನಗೆ ಮತ್ತು ನನ್ನ ಬಗ್ಗೆ ನಿಮಗೆ ಗೊತ್ತಿದೆ. ಇಂತಹ ಕ್ಷುಲ್ಲಕ ವಿಷಯಗಳನ್ನು ಅಲ್ಲಲ್ಲೇ ಬಿಟ್ಟು ಮುನ್ನಡೆಯಬೇಕು ಎಂದು ಸಲಹೆ ನೀಡಿದರು.

## ನಂದಿಗಿರಿಧಾಮದಲ್ಲಿ ಹೊಸ ವರ್ಷ ಆಚರಣೆಗೆ ಬ್ರೇಕ್



**ಚಿಕ್ಕಬಳ್ಳಾಪುರ:** ಹೊಸ ವರ್ಷಾಚರಣೆಗೂ ನಂದಿಬೆಟ್ಟಕ್ಕೂ ಅದೇನೊ ಒಂಥರ ನಂಟು– ಪ್ರಕೃತಿ

ಮಡಿಲಲ್ಲಿ ಕುಡಿದು ಕುಣಿದು ಕುಪ್ಪಳಿಸಿ ಹೊಸ ವರ್ಷ 2025ನ್ನು ಸ್ವಾಗತಿಸೋಣ ಅಂತ ಕೆಲ ಪಾರ್ಟಿ ಪ್ರಿಯರು ಅಂದುಕೊಂಡಿದ್ರೆ ?ಈಗಲೇ ನಿಮ್ಮ ಪ್ಲಾನ್ ಬದಲಾಯಿಸಿಕೊಳ್ಳಿ, ಯಾಕಂದ್ರೆ ನಂದಿಗಿರಿಧಾಮದಲ್ಲಿ ಹೊಸ ವರ್ಷಾಚರಣೆಗೆ ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಸಂಪೂರ್ಣ ನಿಷೇಧವಿರಿದೆ.

ಚಿಕ್ಕಬಳ್ಳಾಪುರ ತಾಲೂಕಿನ ನಂದಿಗಿರಿಧಾಮ ಅಂದ್ರೆ ತಂಪಾದ ಹವಾಗುಣ,ತುಂತುರು ಮಳೆ,ಗಿಡ, ಮರ, ಬಳ್ಳಿಗಳ ಸೊಬಗು,ನಕ್ಕು ನಲಿಯುವ ತರಹೆವಾರು ಹೂಗಳ ವಯ್ಯಾರ, ಮಿಗಿಲಾಗಿ ಸಮುದ್ರಮಟ್ಟದಿಂದ 1,478 ಮೀಟರ್ ಎತ್ತರದಲ್ಲಿ ನಿಂತು ಸೂರ್ಯೋದಯ ಹಾಗೂ ಸೂರ್ಯಾಸ್ತ ವಿಹಂಗಮ ನೋಟ ನೋಡುವುದಕ್ಕೆ ತುಂಬಾ ಫೇಮಸ್, ಇನ್ನೂ ನಂದಿಗಿರಿಧಾಮದಲ್ಲಿಕ ಾಣಸಿಗುವ ಬೆಳ್ಳಿಮೋಡ, ಇಬ್ಬನಿ, ಸುತ್ತಲೂ ಎತ್ತ ನೋಡಿದರೂ ಮುತ್ತಿಕ್ಕುವ ಮಂಜು, ಇಂಥ ಪ್ರಕೃತಿ ಸೊಬಗಿನಲ್ಲಿ ಕುಳಿತು ಹೊಸ ವರ್ಷ2025ನ್ನು ಸ್ವಾಗತಿಸೋಣ ಅಂತ ಕೆಲವು ಪಾರ್ಟಿ ಪ್ರಿಯರು ಅಂದುಕೊಂಡಿದ್ರು,

ಆದ್ರೆಚಿಕ್ಕಬಳ್ಳಾಪುರ ಜಿಲ್ಲಾಡಳಿತ ಪಾರ್ಟಿ ಪ್ರಿಯರ ಕನಸಿಗೆ ತಣ್ಣೀರು ಎರಚಿದೆ. ಗಿರಿಧಾಮದಲ್ಲಿ ಹೊಸ ವರ್ಷಾಚರಣೆಗೆ ನಿರ್ಬಂಧ ವಿಧಿಸಿದೆ.

ಡಿಸೆಂಬರ್ 31ರ ಸಂಜೆ 6 ಗಂಟೆಯಿಂದ 2025 ಜನವರಿ 1 ರ ರಾತ್ರಿ 11ಗಂಟೆ ವರೆಗೂ ಸಾರ್ವಜನಿಕ ಪ್ರವೇಶ ನಿರ್ಬಂಧಿಸಿದ್ದು,ಜೊತೆಗೆ ಅತಿಥಿ ಗೃಹಗಳಿಗೆ ಪ್ರವೇಶವನ್ನೂ ಬಂದ್ ಮಾಡಲಾಗಿದೆ.

ಇದ್ರಿಂದ ಪ್ರವಾಸೋದ್ಯಮ ಇಲಾಖೆಗೂ ನಿರ್ಬಂಧದ ಬಿಸಿ ಮುಟ್ಟಿದೆ. ಹೊಸ ವರ್ಷ ಆಚರಣೆಗೆ ಬೆಂಗಳೂರಿನ ಪಬ್ ರೆಸಾರ್ಟ್ ಗಳ ಬದಲು ಪ್ರಕೃತಿಯ ಮಡಿಲಲ್ಲಿ ಹೊಸ ವರ್ಷಾಚರಣೆಯ ಕನಸು ಕಂಡಿದ್ದ ಯುವ ಸಮುದಾಯಕ್ಕೆ ನಿರಾಸೆಯಾಗಿದೆ.

ಮೊದಲ ಪುಟದಿಂದ

## ಸರ್ಪಗಾವಲಿನಲ್ಲಿ ವರ್ಷಾಚರಣೆ

ಮೇಲೆ ಹದ್ದಿನ ಕಣ್ಣಿಟ್ಟಿರುವ ಪೊಲೀಸರು ಯಾವುದೇ ರೀತಿಯ ಅಕ್ರಮ, ಕಾನೂನುಬಾಹಿರ ಚಟುವಟಿಕೆ ಕಂಡುಬಂದಲ್ಲಿ, ಅಹಿತಕರ ಘಟನೆ ನಡೆದಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಿದ್ದಾರೆ.

ಇತ್ತೀಚೆಗೆ ಹೆಚ್ಚಾಗಿದ್ದ ಮಾದಕದ್ರವ್ಯ ಸಾಗಣೆ ಮತ್ತು ಸೇವನೆಯನ್ನು ಪೊಲೀಸರು ನಿಯಂತ್ರಿಸಿರುವ ಹಿನ್ನೆಲೆಯಲ್ಲಿ ಸೇವನೆಯ ಬಗ್ಗೆ ಹೆಚ್ಚಿನ ನಿಗಾ ವಹಿಸುವಂತೆ ಪೊಲೀಸರಿಗೆ ಸರಕಾರ ಸೂಚನೆ ನೀಡಿದೆ. ಇದರಿಂದಾಗಿ ಎಲ್ಲಡೆ ಸಿಸಿ ಕ್ಯಾಮೆರಗಳನ್ನು ಅಳವಡಿಸಲಾಗಿದೆ. ಒಟ್ಟಾರೆಯಾಗಿ ಪೊಲೀಸರ ಸರ್ಪಗಾವಲಿನಲ್ಲಿ ಹೊಸ ವರ್ಷಾಚರಣೆ ನಡೆಯಲಿದೆ.

ಪ್ರಮುಖವಾಗಿ ನಗರದಲ್ಲೇ ಹತ್ತು ಲಕ್ಷಕ್ಕೂ ಹೆಚ್ಚು ಜನ ಹೊಸ ವರ್ಷಾಚರಣೆಗೆ ಜಮಾಯಿಸಲಿದ್ದಾರೆಂದು ಅಂದಾಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ನಗರದಲ್ಲಿ ಭಾರೀ ಬಂದೋಬಸ್ತ್ ಏರ್ಪಡಿಸಲಾಗಿದೆ. ಮದ್ಯಪಾನ ಮಾಡಿ ವಾಹನ ಚಲಾಯಿಸುವಂತಿಲ್ಲ, ಎಲ್ಲೆಂದರಲ್ಲಿ ಹುಚ್ಚಾಟ ಪ್ರದರ್ಶಿಸುವಂತಿಲ್ಲ. ಇದರೊಂದಿಗೆ ಪಟಾಕಿ ಸಿಡಿಸುವುದು, ಬ್ಯಾಂಡ್ ಬಾಜಾ ನಿಷೇಧಿಸಲಾಗಿದೆ; 1 ಗಂಟೆಯವರೆಗಷ್ಟೆ ಆಚರಣೆಗೆ ಅವಕಾಶ. ನಗರದ ಎಂ. ಜಿ. ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಕೋರಮಂಗಲ, ಎಲೆಕ್ಟ್ರಾನಿಕ್ ಸಿಟಿ, ಜಿಗಣಿ, ಮುಂತಾದ ಸ್ಥಳಗಳಲ್ಲಿ ಹೊಸ ವರ್ಷಾಚರಣೆಗೆ ಅನುಮತಿ ನೀಡಲಾಗಿದೆ... ಆದರೆ 1 ಗಂಟೆಯವರೆಗೆ ಮಾತ್ರ. ಯಾರೇ ಮದ್ಯಪಾನ ಮಾಡಿ ವಾಹನ ಚಲಾಯಿಸಿದರೆ ಈ ಬಾರಿ ದಂಡ ವಿಧಿಸುವುದಿಲ್ಲ; ನೇರವಾಗಿ ಪ್ರಕರಣ ದಾಖಲಿಸಲಾಗುತ್ತದೆ.

ಆಶೋಕನಗರ ಪೊಲೀಸ್ ಠಾಣಾ ವ್ಯಾಪ್ತಿಯ ಎಂ. ಈ. ರಸ್ತೆಯಲ್ಲಿ 160 ಸಿಸಿ ಕ್ಯಾಮೆರ, ಕಬ್ಬನ್ ಪಾರ್ಕ್ ಠಾಣಾ ವ್ಯಾಪ್ತಿಯಲ್ಲಿ 150, ಹಾಗೂ ಈ ಎರಡು ವ್ಯಾಪ್ತಿಯಲ್ಲೇ 2000ಕ್ಕೂ ಹೆಚ್ಚು ಪೊಲೀಸರ ನಿಯೋಜನೆಯಾಗಿದೆ. ಪುರುಷ ಹಾಗೂ ಮಹಿಳೆಯರಿಗೆ ಪ್ರತ್ಯೇಕ ಸಾಲು, ಹಾಗೂ ವಾಚ್ ಟವರ್ ಗಳನ್ನು ನಿರ್ಮಿಸಲಾಗಿದೆ. ಇವುಗಳ ಮೂಲಕ ಪೊಲೀಸ್ ಸಿಬ್ಬಂದಿ ಜನಸಂದಣಿಯ ಮೇಲೆ ನಿಗಾ ಇಡಲಿದ್ದಾರೆ. ಇದರೊಂದಿಗೆ ಅಂಬ್ಯುಲೆನ್ಸ್ ವ್ಯವಸ್ಥೆಯನ್ನೂ ಕೂಡ ಮಾಡಲಾಗಿದೆ. ನಗರಕ್ಕೆ ಬರುವ ನಾಲ್ಕೂ ದಿಕ್ಕುಗಳ ಮೇಲ್ಸೆತುವೆಗಳನ್ನು **ಮುಚ್ಚಲಾಗಿದೆ.**

ನಗರದ ಬಂದೋಬಸ್ತಿನ ಉಸ್ತುವಾರಿಯನ್ನು ಪೊಲೀಸ್ ಆಯುಕ್ತ ಬಿ. ದಯಾನಂದ್ ಸ್ವತಃ ವಹಿಸಿಕೊಂಡಿದ್ದಾರೆ.

ಬಿಎಂಟಿಸಿ ಬಸ್‌ಗಳು ರಾತ್ರಿ 2 ಗಂಟೆಯವರೆಗೂ ಸಂಚರಿಸಲಿವೆ. ಮೆಟ್ರೋ ರೈಲುಗಳು 2 ಗಂಟೆ 45 ನಿಮಿಷದವರೆಗೂ ಸಂಚರಿಸಲಿವೆ. ಈ ಸೌಲಭ್ಯ ಬಳಸಿಕೊಳ್ಳುವಂತೆ ಪೊಲೀಸ್ ಆಯುಕ್ತರು ಮನವಿ ಮಾಡಿಕೊಂಡಿದ್ದಾರೆ. ಆದರೆ ಎಂ. ಜಿ. ರಸ್ತೆ ನಿಲ್ದಾಣ ಬಂದ್ ಆಗಿರಲಿದೆ.

ರಾಜ್ಯದ ಇತರೆಡೆ ಕೂಡ ಇದೇ ನಿಯಮಗಳು ಅನ್ವಯಿಸುತ್ತವೆ.

## ಸುಪಾರಿ, ಹನಿಟ್ರ್ಯಾಪ್; ಸಿಬಿಐ ತನಿಖೆ ಅನಿವಾರ್ಯ

ಜನರೇ ಇದ್ದಾರೆ. ಆ ಕಾರಣದಿಂದ ನೀವು ವೈಯಕ್ತಿಕವಾಗಿ ಇದನ್ನು ತೆಗೆದುಕೊಳ್ಳದಿರಿ. ನನ್ನ ಮೇಲೆ ಆಪಾದನೆ ಬಂದುದು ಹಿಡಿಸಿಲ್ಲ; ಆದ್ದರಿಂದ ಯಾವುದೇ ರೀತಿಯ ತನಿಖೆಗೆ ಕೊಡಿ; ನಾನದನ್ನು ಎದುರಿಸುವೆ ಎಂಬ ಧೈರ್ಯ ನಿಮಗೆ ಇರಬೇಕು ಎಂದು ತಿಳಿಸಿದರು.

ಹೆದರಿಕೆಯಿಂದಿರುವ ಪ್ರಿಯಾಂಕ್, ಮುತ್ತಿಗೆ ಹಾಕುವವರ ಅಡ್ರೆಸ್ ಕೊಡಿ; ಎಷ್ಟು ಜನ ಬರುವುದಾಗಿ ಹೇಳಿ ಕಳಿಸಿ, ನಾನು ಕಾಫಿ ಟೀ ವ್ಯವಸ್ಥೆ ಮಾಡುತ್ತೇನೆ ಎನ್ನುತ್ತಾರೆ. ಇದು ಉದ್ಧಟತನವಲ್ಲದೇ ಬೇರೇನು ಎಂದು ಕೇಳಿದರು. ನಿಮ್ಮ ಮನೆಯಲ್ಲಿ ಸಂಬಂಧ ಮಾಡಲು ಯಾರಾದರೂ ಬರುತ್ತಾರಾ ಎಂದು ಪ್ರಶ್ನಿಸಿದರು.

ನಾವು ಸಂಬಂಧ ಮಾಡಲು ಮುಂದಾಗಿಲ್ಲ; ವಿಪಕ್ಷದಲ್ಲಿದ್ದಾಗ ತಪ್ಪು ಮಾಡಿದ್ದನ್ನು ಕೇಳುವುದು ನಮ್ಮ ಅಧಿಕಾರ ಮತ್ತು ಹಕ್ಕು. ಉತ್ತರ ಹೇಗೆ ಕೊಡಬೇಕೆಂದು ಗೊತ್ತಾಗದೆ ಇದ್ದರೆ ಬೇರೆಯವರನ್ನು ಕೇಳಿ ತಿಳಿದುಕೊಳ್ಳಿ ಎಂದು ಆಕ್ಷೇಪಿಸಿದರು. ಎಲ್ಲದರಲ್ಲೂ ಬಾಯಿ ಹಾಕಲು ಗೊತ್ತಾಗುವ ಅವರಿಗೆ ಇದು ಗೊತ್ತಾಗುವುದಿಲ್ಲವೇ ಎಂದು ಕೇಳಿದರು.

ಮಾನ್ಯ ಸಚಿವರೇ ನಿಮ್ಮ ಉದ್ಧಟತನ ಬದಿಗಿಡಿ; ಸ್ವಪ್ರತಿಷ್ಠೆ ಇಲ್ಲಿಲ್ಲ; ನಿಮ್ಮನ್ನು ಟಾರ್ಗೆಟ್ ಮಾಡಿ ಬಿಜೆಪಿಗೆ ಏನೂ ಆಗಬೇಕಾಗಿಲ್ಲ. ಬಟ್ಟೆ ಹರಿದುಕೊಳ್ಳುವ ಕೆಲಸವನ್ನು ನೀವು ಮಾಡಿದ್ದೀರಿ. ನಿಮ್ಮ ಬಟ್ಟೆ ಹರಿಯಲು ನಾವು ಬರುವುದಿಲ್ಲ; ನಾವೂ ಬಟ್ಟೆ ಹರಿದುಕೊಳ್ಳುವುದಿಲ್ಲ. ಇದೆಲ್ಲವನ್ನು ಸಮಾಜದ ಹಿತದೃಷ್ಟಿಯಿಂದ ಮಾಡುತ್ತೇವೆ. ಆಪಾದನೆ ಬಂದಾಗ ಯಾವ ರೀತಿ ಎದುರಿಸಬೇಕೆಂದು ತಾವು ಕಲಿತುಕೊಳ್ಳಬೇಕು. ನಾವು ನ್ಯಾಯ ಕೇಳುತ್ತಿದ್ದೇವೆ. ನೀವು ಭಿತ್ತಿಪತ್ರ ಅಂಟಿಸಿದ ಮಾದರಿಯಲ್ಲೇ ನಾವು ನಿಮ್ಮ ರಾಜೀನಾಮೆಗೆ ಆಗ್ರಹಿಸಿ ಭಿತ್ತಿಪತ್ರ ಅಂಟಿಸಿದ್ದೇವೆ ಎಂದು ತಿಳಿಸಿದರು. ತೀರ್ಮಾನ ನಿಮಗೆ ಬಿಟ್ಟದ್ದು. ಆದರೆ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಸಿದರು.

ಬೀದ□□□ನ ಸಚಿನ್ ಅವರ ಆತ್ಮಹತ್ಯೆ ಪ್ರಕರಣ ರಾಜ್ಯಾದ್ಯಂತ ಸದ್ದು ಮಾಡುತ್ತಿದೆ. ಈ ವಿಚಾರ ಈಗಾಗಲೇ ತಮ್ಮ ಮೂಲಕ ಜನರನ್ನು ತಲುಪಿದೆ ಎಂದರು. ಈ ವಿಷಯದಲ್ಲಿ ಸಚಿವ ಪ್ರಿಯಾಂಕ ಖರ್ಗೆಯವರ ಹೆಸರು ಪ್ರಸ್ತಾಪ ಆಗಿದ್ದು, ಬಿಜೆಪಿ ಮಾತ್ರವಲ್ಲದೆ, ಆ ಕುಟುಂಬ ಈ ವಿಚಾರವನ್ನು ತನಿಖೆಗೆ ಸಿಬಿಐಗೆ ಕೊಡುವಂತೆ ಒತ್ತಾಯಿಸುತ್ತಿದೆ ಎಂದು ವಿವರಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರರವರು, ನಾನು ಮತ್ತು ಎಂಎ□□□ಸಿ ರವಿಕುಮಾರ್ ಅವರು ಆ ಕುಟುಂಬದವರನ್ನು ಭೇಟಿ ಮಾಡಿದ್ದೇವೆ. ಸ್ಥಳೀಯ ಮುಖಂಡರು ಮತ್ತು ಶಾಸಕರೆಲ್ಲರೂ ಅವತ್ತು ಸೇರಿದಾಗ ಕಾಂಗ್ರೆಸ್ಸಿನ ಸಚಿವ ಈಶ್ವರ ಖಂಡ್ರೆಯವರು ಮತ್ತು ಪೊಲೀಸರು ಬಂದಾಗ ಆ ಕುಟುಂಬ ಯಾರನ್ನೂ ಕೂಡ ತಮ್ಮ ಮನೆಯ ಒಳಗೆ ಬಿಡಲಿಲ್ಲ ಎಂಬ ವಿಷಯ ತಿಳಿಯಿತು ಎಂದು ತಿಳಿಸಿದರು.

ಒತ್ತಾಯದ ಮೇರೆಗೆ ಸಚಿವರು ಒಳಗೆ ಹೋಗಿ ಮಾತುಕತೆ ನಡೆಸಿ ಬಂದಿದ್ದಾರೆ. ನಾವು ಹೋದಾಗ ಇಡೀ ಕುಟುಂಬ ನಮ್ಮನ್ನು ಸ್ವಾಗತಿಸಿತು. ಅದು ರಾಜಕೀಯ ಮಾಡುವ ಕುಟುಂಬವಲ್ಲ; ಅವರಿಗೆ ನ್ಯಾಯ ಸಿಗಬೇಕಿತ್ತು ಹೊರತು, ಬೇರೇನೂ ಬೇಕಿರಲಿಲ್ಲ ಎಂದು ಹೇಳಿದರು. ನಮ್ಮ ಕಾರ್ಯಕರ್ತರು ಮತ್ತು ಮುಖಂಡರು ಸೇರಿ 10 ಲಕ್ಷ ರೂ. ಹಣ ಜೋಡಿಸಿ ಅವರಿಗೆ ಕೊಡಲು ಹೋಗಿದ್ದೆವು. ಅವರು ಕೈಮುಗಿದು 'ನಮಗೆ ಹಣ ಬೇಡ; ನ್ಯಾಯ ಬೇಕು' ಎಂದು ತಿಳಿಸಿದರು ಎಂದರು.

ನಮ್ಮ ಕಣ್ಣ ಮುಂದೆ ಅವನ ಹೆಣ ಬಿದ್ದಾಗ 3 ರೈಲುಗಳು ಹಾದುಹೋಗಿವೆ. ನಮಗೆ ಕರುಳು ಕಿತ್ತು ಬಂದಿದೆ. ಪೊಲೀಸರು ನ್ಯಾಯ ಕೊಡಿಸುವ ಭರವಸೆ ಇಲ್ಲ; ಸಿಐಡಿ ತನಿಖೆ ಬೇಕಾಗಿಲ್ಲ. ಸಿಬಿಐಗೆ ಒಪ್ಪಿಸಿ ನ್ಯಾಯ ಕೊಡಿಸಿ ಎಂದು ಮೃತರ ಸೋದರಿಯರು ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

## ಮೌಲ್ಯದ ಮಾದಕ ಜಪ್ತಿ

ಮುಂದುವರೆದಿದೆ ಎಂದು ಪೊಲೀಸರು ತಿಳಿಸಿದರು. ಅದೇ ರೀತಿ ನಗರದ ವಿವಿಧ ಠಾಣಾ ವ್ಯಾಪ್ತಿಯಲ್ಲಿ ಪ್ರತ್ಯೇಕ ಕಾರ್ಯಾಚರಣೆ ಕೈಗೊಂಡಿದ್ದ ಪೊಲೀಸರು 11 ಜನ ಆರೋಪಿಗಳನ್ನ ಬಂಧಿಸಿದ್ದು ಒಟ್ಟು 13 ಲಕ್ಷ ಮೌಲ್ಯದ ಗಾಂಜಾ ವಶಕ್ಕೆ ಪಡೆದಿದ್ದಾರೆ. ಹಾಗೂ ಆರು ಆರೋಪಿಗಳನ್ನ ಬಂಧಿಸಿ 12.70 ಲಕ್ಷ ಮೌಲ್ಯದ ಎಂಡಿಎಂಎ ವಶಕ್ಕೆ ಪಡೆದಿರುವುದಾಗಿ ತಿಳಿಸಿದರು.

ಶಿವಮೊಗ್ಗದಲ್ಲಿ ಗೋವಾ ಮದ್ಯ ವಶ: ಹೊಸ ವರ್ಷಕ್ಕೆ ಮದ್ಯ ಮಾರಾಟ ಮಾಡುತ್ತಿದ್ದ ಇಬ್ಬರು ಯುವಕರನ್ನು ಇಲ್ಲಿನ ಪೊಲೀಸರು ಬಂಧಿಸಿದ್ದಾರೆ. ಬೈಕ್‌ನನಲ್ಲಿ ಮದ್ಯ ಸಾಗಿಸುತ್ತಿದ್ದ ಆರೋಪಿಗಳನ್ನು ಬಂಧಿಸಿರುವ ಪೊಲೀಸರು, ಅವರಿಂದ ಒಟ್ಟು 30.600 ಲೀಟರ್ ಗೋವಾ ಮದ್ಯವನ್ನು ವಶ ಪಡಿಸಿಕೊಂಡಿದ್ದಾರೆ. ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲೂಕಿನ ಹರೀಶ್ ಮತ್ತು ಗಿರೀಶ್ ಬಂಧಿತ ಆರೋಪಿಗಳು. ಅಕ್ರಮವಾಗಿ ಗೋವಾ ಮದ್ಯವನ್ನು ಸಾಗಿಸುತ್ತಿರುವ ಕುರಿತು ಖಚಿತ ಮಾಹಿತಿ ಮೇರೆಗೆ ಅಬಕಾರಿ ಇಲಾಖೆಯ ನಿರೀಕ್ಷಕ ಹನುಮಂತಪ್ಪನವರು ತಮ್ಮ ತಂಡದೊಂದಿದೆ ದಾಳಿ ನಡೆಸಿದ್ದಾರೆ. ಅಕ್ರಮ ಮದ್ಯವನ್ನು ಶಿವಮೊಗ್ಗದ ನವಲೆ ಭಾಗದಿಂದ ಫ್ಲೈವರ್ ಬ್ರಿಡ್ಜ್ ಕೆಳಗಿನ ಅಂಡರ್ ಪಾಸ್‌ನಲ್ಲಿ ಸಾಗಿಸುತ್ತಿದ್ದಾಗ ದಾಳಿ ನಡೆಸಲಾಗಿದೆ.

## ದೂರು

ಅಲೋಕ್ ಮೋಹನ್‌ರವರಿಗೆ ದೂರು ನೀಡಿರುವುದಾಗಿ ಹೇಳಿದ್ದಾರೆ.ನಿನ್ನೆ ರಾಜ್ಯಪಾಲರಿಗೂ ಈ ಬಗ್ಗೆ ಬಿಜೆಪಿ ನಿಯೋಗ ತೆರಳಿ ದೂರು ಸಲ್ಲಿಸಲಾಗಿದೆ ಎಂದು ಅವರು ಟ್ವೀಟ್‌ನಲ್ಲಿ ಹೇಳಿದ್ದಾರೆ. ಹಾಗೆಯೇ ಪೊಲೀಸ್ ಮಹಾನಿರ್ದೇಶದರಿಗೆ ನೀಡಿರುವ ದೂರಿನ ಪ್ರತಿಯನ್ನು ಪೋಸ್ಟ್ ಮಾಡಿದ್ದಾರೆ.

## ದಾಖಲೆ ಇಟ್ಟು ಕೊಂಡು ಮಾತನಾಡಲಿ

ಹಾಗಾಗಿ ಈ ರೀತಿ ಅರೋಪ ಮಾಡುತ್ತಿದ್ದಾರೆ ಎಂದು ದೂರಿದರು. ಅಶೋಕ್ ಕೇಸ್ ಏನಾಯ್ತು? ಬಿಎಸ್ ವೈ ಕೇಸ್ ಏನಾಯ್ತು? ಪೇಸಿಎಂ ವಿಚಾರ ಮಾಧ್ಯಮದಲ್ಲೇ ಬಂತು ಅದನ್ನು ನಾವು ಮಾಡಿದ್ದು. ಸತ್ಯ ಹೇಳುವುದಕ್ಕೆ ತಾಕತ್ ಧಮ್ ಇಲ್ಲ ಎಂದು ವಾಗ್ದಾಳಿ ನಡೆಸಿದರು. ಬಿಜೆಪಿಯರವರು ಕಲಬುರಗಿಗೆ ಬರಲಿ ಎಳನೀರು ಟೀ, ಕಾಫಿ ಕೊಡುತ್ತೇವೆ. ಗುತ್ತಿಗೆದಾರ ಸಚಿನ್ ಕುಟುಂಬ ನ್ಯಾಯ ಒದಗಿಸಬೇಕು ಅಂತ ಹೇಳಿದೆ. ಅದಕ್ಕೆ ನಾವು ಬದ್ಧರಾಗಿದ್ದೇವೆ ಎಂದರು.

## ಅಭಿಯಾನ

ಬಿಜೆಪಿ ನಾಯಕರು, ಪ್ರಿಯಾಂಕ್ ಖರ್ಗೆ, ಕಾಂಗ್ರೆಸ್ ಸರ್ಕಾರದ ವಿರುದ್ಧ

ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಿಜೆಪಿ ಪೋಸ್ಟರ್ ಅಭಿಯಾನ ಹಿನ್ನೆಲೆಯಲ್ಲಿ ಸದಾಶಿವನಗರದಲ್ಲಿರುವ ಸಚಿವ ಪ್ರಿಯಾಂಕ್ ಖರ್ಗೆ ನಿವಾಸಕ್ಕೆ ಭದ್ರತೆ ವಹಿಸಲಾಗಿದೆ.

## ಪ್ರದೇಶಗಳಲ್ಲಿ ಹೆಚ್ಚಿನ ಭದ್ರತೆ

ನಗರದಲ್ಲಿ 7500 ಸಿಸಿ ಕ್ಯಾಮರಾ ಅಳವಡಿಸಲಾಗಿದ್ದು, ಏನೇ ಘಟನೆ ಆದರೂ ಕೂಡಲೆ ಗೊತ್ತಾಗುತ್ತೆ. ಕೂಡಲೇ ಕ್ರಮ ಪೊಲೀಸರು ಕೈಗೊಳ್ಳುತ್ತಾರೆ ಎಂದರು.

## ಮಿಶ್ರಪ್ರತಿಕ್ರಿಯೆ

ಕೂಡಲೇ ಸಚಿವ ಸ್ಥಾನದಿಂದ ಅಮಿತ್ ಶಾ ಅವರನ್ನು ವಜಾ ಮಾಡಬೇಕು. ಅಮಿತ್ ಶಾ ದೇಶದ ಜನರ ಕ್ಷಮೆ ಕೇಳಬೇಕು. ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

# ಚಾಮುಂಡಿಬೆಟ್ಟದಲ್ಲಿ ಹೊಸ ವರ್ಷಾಚರಣೆಗೆ ಬ್ರೇಕ್: ಹೈ ಅಲರ್ಟ್


**ಮೈಸೂರು: ಹೊಸ ವರ್ಷಾಚರಣೆ ಸ್ವಾಗತಕ್ಕೆ ಸಜ್ಜಾಗಿದ್ದು ಸಾಂಸ್ಕೃತಿಕ** ನಗರಿ ಮೈಸೂರಿನಲ್ಲಿ ಯಾವುದೇ ಅಹಿತಕರ ಘಟನೆ ಸಂಭವಿಸದ ರೀತಿಯಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.

ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಹೊಸ ವರ್ಷಾಚರಣೆಗೆ ಬ್ರೇಕ್ ಹಾಕಲಾಗಿದ್ದು, ಚಾಮುಂಡಿಬೆಟ್ಟಕ್ಕೆ ರಾತ್ರಿ ಸಂಚಾರ ಬಂದ್ ಮಾಡಲಾಗಿದೆ. ಚಾಮುಂಡಿಬೆಟ್ಟಕ್ಕೆ ಪ್ರವಾಸಿಗರು, ಭಕ್ತರಿಗೆ ರಾತ್ರಿ ಪ್ರವೇಶವಿರುವುದಿಲ್ಲ. ಇಂದು ರಾತ್ರಿ ಚಾಮುಂಡಿಬೆಟ್ಟಕ್ಕೆ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದ್ದು, ರಾತ್ರಿ 8 ರಿಂದ ಜನವರಿ1 ರ ಬೆಳಗ್ಗೆ 6 ರವರೆಗೆ ನಿರ್ಬಂಧವಿರಲಿದೆ.

ಈ ಕುರಿತು ಆದೇಶ ಹೊರಡಿಸಿರುವ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ರಾತ್ರಿ 9ರ ಬಳಿಕ ಚಾಮುಂಡಿಬೆಟ್ಟದಲ್ಲಿರುವವರೆಲ್ಲ ಖಾಲಿ ಮಾಡಿ ಕೆಳಕ್ಕೆ ಬರಬೇಕು. ಚಾಮುಂಡಿಬೆಟ್ಟಕ್ಕೆ ಊಟ, ಮದ್ಯ ತೆಗೆದುಕೊಂಡು ಹೋಗುವಂತಿಲ್ಲ. ತಾವರೆಕಟ್ಟೆ ಮಾರ್ಗದ ಮೂಲಕ ಬೆಟ್ಟದಿಂದ ನಿರ್ಗಮಿಸಬೇಕು. ಬೆಟ್ಟದ ನಿವಾಸಿಗಳನ್ನ ಹೊರತುಪಡಿಸಿ ಯಾರೇ ಇದ್ದರೂ ಬೆಟ್ಟದಿಂದ ಕೆಳಗೆ ಇಳಿಯಬೇಕು. ಹೊಸ ವರ್ಷದ ದಿನ ದೇವಿ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗುತ್ತದೆ ಎಂದು ತಿಳಿಸಿದ್ದಾರೆ.

**ಅರಮನೆಯ ಮುಂಭಾಗ ಹೊಸ ವರ್ಷಾಚರಣೆ ಇಲ್ಲ..!**

ಇನ್ನು ಪ್ರತಿವರ್ಷ ಮೈಸೂರು ಅರಮನೆ ಮುಂಭಾಗ ಹೊಸ ವರ್ಷ ಆಚರಣೆ ಮಾಡಲಾಗುತ್ತಿತ್ತು. ಆದರೆ ಈ ಬಾರಿ ಅರಮನೆಯ ಮುಂಭಾಗ ಹೊಸ ವರ್ಷಾಚರಣೆ ಇರುವುದಿಲ್ಲ. ಮಾಗಿ ಉತ್ಸವದ ಹಿನ್ನೆಲೆ ಸಿಡಿಮದ್ದಿನ ಪ್ರದರ್ಶನ ಏರ್ಪಡಿಸಲಾಗುತ್ತಿತ್ತು. ರಾತ್ರಿ 12 ಗಂಟೆಗೆ ದೀಪಾಲಂಕಾರದ ವ್ಯವಸ್ಥೆ ಮಾಡಲಾಗುತ್ತಿತ್ತು. ಆದರೆ ಮಾಜಿ ಪ್ರಧಾನಿ ಮನ ಮೋಹನ್ ಸಿಂಗ್ ನಿಧನ ಹಿನ್ನೆಲೆ ಕಾರ್ಯಕ್ರಮಗಳು



ರದ್ದಾಗಿವೆ. ಫಲಪುಷ್ಪ ಪ್ರದರ್ಶನ, ಸಂಗೀತ ಕಾರ್ಯಕ್ರಮಗಳನ್ನ ಏರ್ಪಡಿಸಲಾಗಿತ್ತು. ಕನ್ನಡ, ಇಂಗ್ಲಿಷ್ ಪೊಲೀಸ್ ಬ್ಯಾಂಡ್ ಕೂಡ ರದ್ದಾಗಿದೆ.

**ಮೈಸೂರಲ್ಲಿ ಹೈ ಅಲರ್ಟ್, ಖಾಕಿ ಕಟ್ಟೆಚ್ಚರ**

ಹಾಗೆಯೇ ಹೊಸ ವರ್ಷಾಚರಣೆಗೆ ಮೈಸೂರುಲ್ಲಿ ಪೊಲೀಸರು ಹೈ ಅಲರ್ಟ್ ಆಗಿದ್ದು, ಯಾವುದೇ ಅಹಿತಕರ ಘಟನೆ ಸಂಭವಿಸದ ರೀತಿ ಕಟ್ಟೆಚ್ಚರ ವಹಿಸಿದ್ದಾರೆ. ಬಾಂಬ್ ಪತ್ತೆದಳ, ಶ್ವಾನದಳದಿಂದ ಅರಮನೆ, ಚಾಮುಂಡಿಬೆಟ್ಟ ,ಮೃಗಾಲಯ, ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ ಸೇರಿ ಹಲವೆಡೆ ತೀವ್ರ ತಪಾಸಣೆ ನಡೆಸಲಾಗಿದೆ.

ಶ್ವಾನದಳ, ಬಾಂಬ್ ಪತ್ತೆದಳದ ಸಿಬ್ಬಂದಿ ನಗರದ ಹಲವೆಡೆ ಇಂಚಿಂಚೂ ಶೋಧ ನಡೆಸಿದ್ದು, ಅನುಮಾನಸ್ಪದ ವಸ್ತು, ವ್ಯಕ್ತಿಗಳನ್ನು ತಪಾಸಣಾ ಕಾರ್ಯ ಮಾಡಲಾಗುತ್ತಿದೆ.

# ರೈತರ ಹಿತ ಕಾಪಾಡಿದರೆ ದೇಶ ಸಮೃದ್ಧಿಯಾಗಿರಲು ಸಾಧ್ಯ



**ನಾಗಮಂಗಲ:** ರೈತರ ಹಿತ ಕಾಪಾಡಿದರೆ ದೇಶ ಸಮೃದ್ಧಿಯ ಹಸಿರು ಕ್ರಾಂತಿಯ ನಾಡಾಗಿ ಬೆಳೆಯಲು ಸಾಧ್ಯವಾಗುತ್ತಿದೆ ಎಂದು ಕೃಷಿ ಇಲಾಖೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಹರೀಶ್ ತಿಳಿಸಿದರು.

ಅವರು ನಾಗಮಂಗಲ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ಕರ್ನಾಟಕ ರೈತ ಕೃಷಿ ಸಂವರ್ಧನಾಕೇಂದ್ರ ಪತ್ರಕರ್ತರ ಸಂಘದಲ್ಲಿ ಆಯೋಜನೆ ಮಾಡಿದ್ದ ರಾಷ್ಟ್ರೀಯ ರೈತ ದಿನಾಚರಣೆ ಹಾಗೂ ರಾ?ಕವಿ ಕುವೆಂಪು ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಕುವೆಂಪು ಭಾವಚಿತ್ರಕ್ಕೆ ಪು?ರ್ಚನೆ ಮಾಡುವ ಮುಖಾಂತರ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ನಮ್ಮದೇಶದಬೆನ್ನೆಲುಬಾಗಿರುವ ರೈತರನ್ನು ಗುರುತಿಸಿ, ಗೌರವಿಸುವ ಉದ್ದೇಶದಿಂದ ಪ್ರತಿವ?ರ್ ಡಿಸೆಂಬರ್ 23ರಂದು ರಾಷ್ಟ್ರೀಯ ರೈತರ ದಿನವನ್ನು ಆಚರಿಸಲಾಗುತ್ತದೆ. ದೇಶದಅಭಿವೃದ್ಧಿಗಾಗಿಅವಿರತವಾಗಿ ಶ್ರಮಿಸುವವರಲ್ಲಿ ರೈತರ ಪಾತ್ರವು ದೊಡ್ಡದು. ಭಾರತವು ಕೃಷಿ ಪ್ರಧಾನ ದೇಶ. ನಮ್ಮ ದೇಶದಲ್ಲಿ ಕೃಷಿಗೆ ವಿಶೇ? ಪ್ರಾಧಾನ್ಯವಿದೆ. ಭಾರತವು ರೈತರನ್ನು ದೇಶದ ಬೆನ್ನೆಲುಬು ಎಂದು ಕರೆಯುತ್ತದೆ. ದೇಶದ ಅಭಿವೃದ್ಧಿಯಲ್ಲಿ ರೈತರ ಪಾಲು ಮಹತ್ತರವಾದದ್ದು. ದೇಶದ ಏಳಿಗೆಗಾಗಿ ನಿರಂತರವಾಗಿ, ಅವಿರತವಾಗಿರುವ ಶ್ರಮಿಸುವ ರೈತರನ್ನು ಗೌರವಿಸಿ, ಆಧರಿಸುವ ಸಲುವಾಗಿ ಒಂದು ದಿನವನ್ನು ಆಚರಿಸಲಾಗುತ್ತದೆ.

ಭಾರತದಲ್ಲಿ ಪ್ರತಿವ?ರ್ ಡಿಸೆಂಬರ್ 23ರಂದು ರಾಷ್ಟ್ರೀಯ ರೈತರ ದಿನ ಎಂದು ಆಚರಿಸಲಾಗುತ್ತದೆ. ಈ ದಿನ ರೈತರನ್ನು ಗೌರವಿಸುವ, ಆದರಿಸುವ, ರೈತರಿಗೆ ಸಂಬಂಧಪಟ್ಟ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ.

ಈದಿನವುರೈತಸಮುದಾಯವನ್ನು ಉನ್ನತೀಕರಿಸುವ ಕೃಷಿ ಸುಧಾರಣೆಗಳು ಮತ್ತು ನೀತಿಗಳನ್ನು ಪ್ರತಿಪಾದಿಸಿದ ಮಾಜಿ ಪ್ರಧಾನಿ ಮತ್ತು ಪ್ರಮುಖ ರೈತ ನಾಯಕ ಚೌಧರಿ ಚರಣ್ ಸಿಂಗ್ ಅವರ ಜನ್ಮ ವಾರ್ಷಿಕೋತ್ಸವವನ್ನು ಸ್ಮರಿಸುತ್ತದೆ. ಚರಣ್ ಸಿಂಗ್ ಅವರು ಭಾರತದ 5ನೇ ಪ್ರಧಾನಮಂತ್ರಿಯಾಗಿದ್ದರು. ರಾಷ್ಟ್ರೀಯ ರೈತರ ದಿನವನ್ನು ಕಿಸಾನ್ ದಿವಸ್ ಎಂದೂ ಕೂಡ ಕರೆಯಲಾಗುತ್ತದೆ.

ರಾಷ್ಟ್ರೀಯ ರೈತರ ದಿನದ ಇತಿಹಾಸ1979 ರಿಂದ 1980ರವರೆಗೆ ಭಾರತದ ಪ್ರಧಾನಿಯಾಗಿದ್ದ, ರೈತರ ಸುಧಾರಣೆಗಳಿಗೆ ಹಲವು ನೀತಿಗಳನ್ನು ಜಾರಿಗೊಳಿಸಿದ್ದ ಚೌಧರಿ ಚರಣ್ ಸಿಂಗ್ ಅವರ ಜೀವನ ಮತ್ತು ಸಾಧನೆಗಳನ್ನು ಗೌರವಿಸಲು ಕಿಸಾನ್ ದಿವಸ್ ಅನ್ನು ಸ್ಥಾಪಿಸಲಾಯಿತು. ಅವರ ಅಧಿಕಾರಾವಧಿಯಲ್ಲಿ ಅವರು ಭೂ ಸುಧಾರಣೆಗಳು ಮತ್ತು ಕೃಷಿಯನ್ನು ಉತ್ತೇಜಿಸುವ ಉಪಕ್ರಮಗಳು ಸೇರಿದಂತೆ ರೈತರ ಜೀವನವನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ನೀತಿಗಳಿಗೆ ಆದ್ಯತೆ ನೀಡಿದರು. ರೈತರ ಸಮುದಾಯದ ಕಲ್ಯಾಣಕ್ಕಾಗಿ ಶ್ರಮಿಸಿದ ಆ ಮಹಾನ್ ವ್ಯಕ್ತಿಯ ಜನ್ಮದಿನದ ಹಿನ್ನೆಲೆಯಲ್ಲಿ ಡಿಸೆಂಬರ್ 23ರನ್ನು ರಾಷ್ಟ್ರೀಯ ರೈತರ ದಿನ ಎಂದು ಆಚರಿಸಲಾಗುತ್ತದೆ. ಎಂದು ತಿಳಿಸಿದರು.

ರೈತ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ನೀಡಿ ಎನ್ನುವ ಕೂಗು ಇಂದು ನಿನ್ನೆಯ ದಲ್ಲ. ರೈತ ತನ್ನ ಯಾವುದೇ ಉತ್ಪನ್ನಗಳಿಗೆ ಬೆಲೆ ನಿರ್ಧರಿಸುವ ಹಕ್ಕನ್ನು ಯಾವುದೇ ಸರಕಾರಗಳು ಇವತ್ತಿನವರೆಗೆ ನೀಡದಿರುವುದು ವಿ?ದನೀಯ.

ರೈತ ಮುಖಂಡರಾದ ಸತೀಶ್ ಟಿಂಣಟಿಂತಿ, ರೈತರು ಕೃಷಿಯಿಂದ ವಿಮುಖರಾಗುವ ಜತೆಗೆ ತಮ್ಮ ಮಕ್ಕಳನ್ನು ಕೃಷಿಯೇತರ ಚಟುವಟಿಕೆಗೆ ಹೋಗುವ ಒತ್ತಾಯವನ್ನು ಮಾಡುತ್ತಾರೆ. ಕೃಷಿ ಅಭಿವೃದ್ಧಿಗೆ ಬೆಳೆಗಳ ಇಳುವರಿ ಅಧಿಕಗೊಳಿಸುವುದು ಮಾತ್ರವಲ್ಲದೆ ರೈತರ ಬೆಳೆಗಳಿಗೆ ಲಾಭದಾಯಕ ಬೆಲೆ ಕೂಡ ದೊರಕುವಂತಾಗಬೇಕು. ಈ ಲಾಭದಾಯಕ ಬೆಲೆ ಎಲ್ಲಿಯವರೆಗೆ ದೊರಕುವುದಿಲ್ಲವೋ ಅಲ್ಲಿಯವರೆಗೆ ಕೃಷಿ ಅಭಿವೃದ್ಧಿಯ ಪಥ ಹಿಡಿಯಲು ಸಾಧ್ಯವಿಲ್ಲ ಎಂದು ಹೇಳಿದರು.

ಬೆಲೆ ನಿರ್ಧಾರದ ಹಕ್ಕನ್ನು ರೈತನ ಹೊರತಾಗಿ ಮತ್ತಾವುದೇ ಉತ್ಪಾ ದಕ ವರ್ಗಕ್ಕೆ ಇದುವರೆಗೆ ಕಂಟಕವಾಗಿ ಪರಿಣಾಮ ಬೀರಲಿಲ್ಲ. ಈ ಬಗ್ಗೆ ಎಲ್ಲರೂ ಆಲೋಚಿಸಬೇಕಾದ ಅನಿವಾರ್ಯತೆ ಇದೆ. ಎಂದು ರೈತ ಮುಖಂಡರಾದ ರಂಗೇಗೌಡರು ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ಪತ್ರಕರ್ತರ ಸಂಘದ ಅಧ್ಯಕ್ಷರಾದ ಸೀತಾರಾಮು ವಹಿಸಿದ್ದು ರಾಜ್ಯ ಪತ್ರಕರ್ತರ ಸಂಘದ ನಿರ್ದೇಶಕರಾದ ಸಿಎನ್ ಮಂಜುನಾಥ್ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ತಾಲೂಕಿನ ಶೆಟ್ಟಹಳ್ಳಿ ಗ್ರಾಮದ ಎಸ್ ಬಿ ರಾಮು ಎಂಬವರಿಗೆ ರೈತ ಕಾಯಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಮಹಾಬಲೇಶ್ ಪುಟ್ಟರಾಜು ಕಾಯಕ ಪ್ರಶಸ್ತಿ ರೈತರಾದ ಎಸ್ ಪಿ ಎಸ್ ಬಿ ರಾಮರವರು ಹಾಜರಿದ್ದು ಖಜಾಂಚಿ ಮಹೇಶ್ ಸ್ವಾಗತಿಸಿ ಕಾರ್ಯಕ್ರಮವನ್ನು ದೇ. ರಾ.ಜಗದೀಶ್ ನಿರೂಪಿಸಿ ಕಾರ್ಯದರ್ಶಿ ವಸಂತ ವಂದನಾರ್ಪಣೆ ಮಾಡಿದರು

# ಬಸ್‌ಪಾಸ್ ನವೀಕರಣಕ್ಕೆ ಅರ್ಜಿ ಆಹ್ವಾನ

**ಚಾಮರಾಜನಗರ:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಚಾಮರಾಜನಗರ ವಿಭಾಗದಲ್ಲಿ ಜಿಲ್ಲೆಯ ಎಲ್ಲಾ ತಾಲೂಕಿನ ವಿಕಲಚೇತನ ಫಲಾನುಭವಿಗಳಿಗೆ 2025ನೇ ಸಾಲಿನ ವಿಕಲಚೇತನರ ರಿಯಾಯಿತಿ ದರದ ಬಸ್ ಪಾಸ್‌ಗಳನ್ನು ನವೀಕರಿಸಲು ಅರ್ಜಿ ಆಹ್ವಾನಿಸಲಾಗಿದೆ.

ಚಾಮರಾಜನಗರ ಹಾಗೂ ಯಳಂದೂರು ತಾಲೂಕಿನ ವಿಕಲಚೇತನ ಫಲಾನುಭವಿಗಳು ಚಾಮರಾಜನಗರ ಬಸ್ ನಿಲ್ದಾಣ, ಇಮೇಲ್ ಐ.ಡಿ dmcjr@ksrtc.org, ಗುಂಡ್ಲುಪೇಟೆ ತಾಲೂಕಿಗೆ ಸಂಬಂಧಿಸಿದಂತೆ ಗುಂಡ್ಲುಪೇಟೆ ಬಸ್ ನಿಲ್ದಾಣ, ಇಮೇಲ್ ಐ.ಡಿ dmgdp@ksrtc.org, ಕೊಳ್ಳೇಗಾಲ ಹಾಗೂ ಹನೂರು ತಾಲೂಕಿನ ವಿಕಲಚೇತನರು ಕೊಳ್ಳೇಗಾಲ ಘಟಕ, ಇಮೇಲ್ ಐ.ಡಿ dmklg@ksrtc.org ಸ್ಥಳಗಳಲ್ಲಿ ಬಸ್ ಪಾಸ್‌ಗಳನ್ನು ನವೀಕರಿಸಿಕೊಳ್ಳಬಹುದು.

ವಿಕಲಚೇತನರ ಬಸ್ ಪಾಸುಗಳನ್ನು ನವೀಕರಿಸಿಕೊಳ್ಳಲು ಇಚ್ಛಿಸುವ ಫಲಾನುಭವಿಗಳು ಆನ್‌ಲೈನ್ ಮೂಲಕ ಸೇವಾಸಿಂಧು ತಂತ್ರಾಂಶದಲ್ಲಿ ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕು. ಬಸ್‌ಪಾಸ್ ಪಡೆಯಲು 2024ನೇ ಸಾಲಿನಲ್ಲಿ ಪಡೆದಿರುವ ಹಳೆಯ ಪಾಸ್, ಯು.ಡಿ.ಐ.ಡಿ ಕಾರ್ಡ್, ಇತ್ತೀಚಿನ ಎರಡು ಭಾವಚಿತ್ರ, ಆಧಾರ್ ಕಾರ್ಡ್ ನಕಲು, ಜಾತಿ ಪ್ರಮಾಣ ಪತ್ರ ಹಾಗೂ 660 ರೂ. ಮೊತ್ತವನ್ನು ನಗದಾಗಿ ಪಾವತಿಸಿ ನಿಗದಿತ ಬಸ್ ಘಟಕಗಳಲ್ಲಿ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಖುದ್ದು ಹಾಜರಿದ್ದು ನವೀಕರಿಸಿಕೊಳ್ಳಬಹುದು.

ಪ್ರಸ್ತುತ 2024ನೇ ಸಾಲಿನಲ್ಲಿ ವಿಕಲಚೇತನರ ಬಸ್‌ಪಾಸ್ ಹೊಂದಿರುವ ಪಲಾನುಭವಿಗಳಿಗೆ ದಿನಾಂಕ 28–02–2025 ರವರೆಗೆ ಮಾತ್ರ ಬಸ್‌ಗಳಲ್ಲಿ ಪ್ರಯಾಣಿಸಲು ಅವಕಾಶ ನೀಡಲಾಗಿದ್ದು, ನವೀಕರಣವನ್ನು ಸಹ ದಿನಾಂಕ 28–02–2025 ರವರೆಗೆ ಮಾತ್ರ ಮಾಡಲಾಗುತ್ತದೆ. ನಂತರ ಬಸ್‌ಪಾಸ್ ನವೀಕರಣಕ್ಕೆ ಅವಕಾಶವಿರುವುದಿಲ್ಲ ಎಂದು ಚಾಮರಾಜನಗರ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ತರಬೇತಿಗಳಿಗೆ ಅರ್ಜಿ ಆಹ್ವಾನ

ಚಾಮರಾಜನಗರ: ಗುಂಡ್ಲುಪೇಟೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಕೌಶಲಾಭಿವೃದ್ಧಿ ಇಲಾಖೆ ಪ್ರಾಯೋಜನೆಯಡಿ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ, ವಿಶೇ? ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಉಚಿತವಾಗಿ ವಿವಿಧ ತರಬೇತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಟೂಲ್ ರೂಂ ಮೆಷಿನಿ?ಟ್, ಸಿ.ಎನ್.ಸಿ ಟೆಕ್ನಾಲಜಿಸ್ಟ್ ಕ್ಯಾಡ್/ಕ್ಯಾಮ್ ಸ್ಪೆ?ಲಿಸ್ಟ್, ಟರ್ನರ್, ಮಿಲ್ಲರ್, ಟೂಲ್ ಅಂಡ್ ಡೈ ಟೆಕ್ನಿಷಿಯನ್ ಕೋರ್ಸುಗಳ ವಿ?ಯದಲ್ಲಿ ಅಲ್ಪಾವಧಿ ತರಬೇತಿಯನ್ನು ನೀಡುತ್ತಿದ್ದು, ಆಸಕ್ತ ಅಭ್ಯರ್ಥಿಗಳು ಜನವರಿ 20 ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ 08229–297344 ಅಥವಾ ಮೊ.ಸಂ 9164261642 ಸಂಪರ್ಕಿಸುವಂತೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಶಾಲೆ ವಿದ್ಯಾರ್ಥಿಗಳೂ ಕರ್ಸಿವ್ ಬರವಣಿಗೆ ಕಲಿಯಬೇಕು



**ಶಿಡ್ಲಘಟ್ಟ:** ಕಳೆದ ಮೂರು ವ?ರ್ಗಳಿಂದ ವಿವಿಧ ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿ? ಕರ್ಸಿವ್ ಬರವಣಿಗೆ ಉತ್ತೇಜನ ಯೋಜನೆ ಜಾರಿಗೆ ತಂದಿದ್ದೇವೆ ಈ ಪ್ರಯತ್ನ ವಿದ್ಯಾರ್ಥಿಗಳ ಬರವಣಿಗೆಯಲ್ಲಿ ವಿಶೇಷ್ ಸುಧಾರಣೆ ತಂದುಕೊಟ್ಟಿದೆ ಗ್ರಾಮೀಣ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳೂ ಕಾನ್ವೆಂಟ್ ಶಾಲಾ ಮಕ್ಕಳಂತೆ ಇಂಗ್ಲಿಷ್ ಕರ್ಸಿವ್ ಬರವಣಿಗೆಯಲ್ಲಿ ಪ್ರಗತಿಸಬೇಕು ಎನ್ನುವುದು ನಮ್ಮ ಮುಖ್ಯ ಉದ್ದೇಶವಾಗಿದೆ ಎಂದು ಭಾವೈಕ್ಯ ಯುವಜನ ಸಂಘದ ಸಂಸ್ಥಾಪಕ ಕಾರ್ಯದರ್ಶಿ ಕೆ.ವಿ. ಪ್ರಜ್ವಲ್ ತಿಳಿಸಿದರು.

ಭಾವೈಕ್ಯ ಯುವಜನ ಸಂಘ ಮತ್ತು ಗ್ರಾಮಾಂತರ ಟ್ರಸ್ಟ್ ಸಹಯೋಗದಡಿ ಇಂಗ್ಲಿಷ್ ಬರವಣಿಗೆಯ ಕೌಶಲ್ಯವನ್ನು ಅಭಿವೃದ್ಧಿಪಡಿಸಲು 'ಇಂಗ್ಲಿ? ಕರ್ಸಿವ್ ಡ್ರೈವ್ ಸ್ಕಿಮ್' ಮೂಲಕ ನಗರದಲ್ಲಿರುವ ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆ ದರ್ಗಾ ಮೊಹಲ್ಲಾ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಕರ್ಸಿವ್ ಬರವಣಿಗೆ ಪುಸ್ತಕಗಳನ್ನು ವಿತರಿಸಿ ಅವರು ಮಾತನಾಡಿದರು.

ಈ ಬಾರಿ ತಾಲ್ಲೂಕಿನ ಮುತ್ತೂರು, ಬಂಡಹಳ್ಳಿ ಮತ್ತು ದರ್ಗಾ ಮೊಹಲ್ಲಾ ಶಾಲೆಗಳಿಗೆ ಸೇರಿ 14 ಸರ್ಕಾರಿ ಶಾಲೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಮಾರ್ಚ್ ತಿಂಗಳಲ್ಲಿ ಶಾಲಾ ಮಟ್ಟದ ಬರವಣಿಗೆ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು.ಈ ವೇಳೆ ಭಾವೈಕ್ಯ ಯುವಜನ ಸಂಘದ ಅಧ್ಯಕ್ಷ ಪವನ್ ಕಲ್ಯಾಣ್, ಉಪಾಧ್ಯಕ್ಷೆ ಮಧುಶ್ರೀ, ಗ್ರಾಮಾಂತರ ಟ್ರಸ್ಟ್‌ನ ಉಷಾಶೆಟ್ಟಿ ಮುಂತಾದವರು ಹಾಜರಿದ್ದರು.

# ದೌರ್ಜನ್ಯ ಪ್ರಕರಣ ತಡೆಗೆ ವ್ಯಾಪಕ ಅರಿವು ಮೂಡಿಸಿ: ತಿಮ್ಮಯ್ಯ



**ಚಾಮರಾಜನಗರ:** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸಮುದಾಯದವರ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಯಲು ದೌರ್ಜನ್ಯ ತಡೆ ಕಾಯ್ದೆಯ ಕುರಿತು ವ್ಯಾಪಕ ಅರಿವು ಮೂಡಿಸುವಂತೆ ವಿಧಾನಪರಿಷತ್ ಸದಸ್ಯರಾದ ಡಾ. ಡಿ. ತಿಮ್ಮಯ್ಯ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ 4ನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಪುರಸ್ಕೃತ ಯೋಜನಾ ಕಾರ್ಯಕ್ರಮವಾದ 1955ರ ನಾಗರಿಕ ಹಕ್ಕು ಸಂರಕ್ಷಣಾ ಕಾಯ್ದೆ ಹಾಗೂ 1989ರ ಪರಿಶಿ? ಜಾತಿ, ಪರಿಶಿಷ್ಟ ವರ್ಗಗಳ ದೌರ್ಜನ್ಯ ಪ್ರತಿಬಂಧಕ ಅಧಿನಿಯಮದ ಬಗ್ಗೆ ಎಲ್ಲರಿಗೂ ಹೆಚ್ಚಿನ ಜಾಗೃತಿ ಮೂಡಿಸಬೇಕು. ದೌರ್ಜನ್ಯ ಪ್ರಕರಣಗಳು ನಡೆಯದಂತೆ ಕಟ್ಟೆಚ್ಚರ ವಹಿಸಬೇಕು. ಪ್ರಮುಖವಾಗಿ ಜಿಲ್ಲಾಮಟ್ಟದ ಅಧಿಕಾರಿಗಳು ಕಾಯ್ದೆಯ ಮಹತ್ವವನ್ನು ಅರಿಯಬೇಕು. ಇತರರಿಗೂ ಮನವರಿಕೆ ಮಾಡಬೇಕು ಎಂದರು.

ಗ್ರಾಮೀಣ ಭಾಗದ ಜನರಿಗೆ ದೌರ್ಜನ್ಯ ತಡೆ ಕಾಯ್ದೆಯ ಅರಿವಿನ ಕೊರತೆ ಇದೆ. ಅಸ್ಪೃಶ್ಯತೆ ಆಚರಣೆ, ಜಾತಿನಿಂದನೆ, ಇತರೆ ದೌರ್ಜನ್ಯ ಪ್ರಕರಣಗಳು ಜರುಗದಂತೆ ಅರಿವು ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಜನಜಾಗೃತಿ ಮೂಡಿಸುವ ಬೀದಿನಾಟಕ ಏರ್ಪಡಿಸಬೇಕು. ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು. ಕಾಯ್ದೆಯ ಸಂಪೂರ್ಣ ಅರಿವು ಪರಿಶಿಷ್ಟರನ್ನು ಹೊರತುಪಡಿಸಿ ಇತರೆ ವರ್ಗದ ಜನರನ್ನು ಹೆಚ್ಚಾಗಿ ತಲುಪುವಂತೆ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ದೌರ್ಜನ್ಯ ಪ್ರಕರಣಗಳನ್ನು ಇತ್ಯರ್ಥ ಪಡಿಸುವಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲ. ಪ್ರಕರಣಗಳನ್ನು ಆದಷ್ಟು ಬೇಗನೆ ಪರಿಹರಿಸಿ ನೊಂದವರಿಗೆ ನ್ಯಾಯ ಒದಗಿಸಲು ವಿಶೇಷ ಅಭಿಯೋಜಕರು ಮುಂದಾಗಬೇಕು. ಸಂತ್ರಸ್ತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ವಿಶೇಷ ಅಭಿಯೋಜಕರಿಗೆ ಇದೆ. ಈ ನಿಟ್ಟಿನಲ್ಲಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಎಲ್ಲಾ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ದೌರ್ಜನ್ಯ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಮುಂದಾಗಬೇಕು ಎಂದು ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಚಾಮರಾಜನಗರ ತಾಲೂಕಿನ ತಿಮ್ಮೆಗೌಡನಪಾಳ್ಯ ಗ್ರಾಮದ ಸರ್ವೇ ನಂಬರ್ 55ರಲ್ಲಿ ಇರಸವಾಡಿ ಮತ್ತು ಸುತ್ತೂರಿನ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಸಮುದಾಯದವರಿಗೆ ಮಂಜೂರಾಗಿರುವ ಜಮೀನು ಸಂಬಂಧ ಅರಣ್ಯ ಹಾಗೂ ಭೂ ದಾಖಲೆಗಳ ಇಲಾಖೆಗಳು ಜಂಟಿ ಸರ್ವೇ ನಡೆಸಿ ಶೀಘ್ರವಾಗಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ಮಾತನಾಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ದೌರ್ಜನ್ಯ ಪ್ರತಿಬಂಧಕ ಕಾಯ್ದೆಯನ್ನು ಜಿಲ್ಲೆಯಾದ್ಯಂತ ಸಮರ್ಪಕ ಅನು?ನಗೊಳಿಸಲಾಗುತ್ತಿದೆ. ಜಿಲ್ಲೆಯ ಯಾವುದೇ ಭಾಗದಲ್ಲಿ ದೌರ್ಜನ್ಯ ಪ್ರಕರಣಗಳು ಮರುಕಳಿಸಿದರೆ ಕಟ್ಟುನಿಟ್ಟಿನ ಕ್ರಮ ವಹಿಸಲಾಗುವುದು. ಸಂತ್ರಸ್ತರಿಗೆ ನ್ಯಾಯ ದೊರಕಿಸಲು ಇಲಾಖೆ ಮುಂದಾಗಿದೆ ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮುನಿರಾಜು, ತಹಶೀಲ್ದಾರರಾದ ಗಿರಿಜಾ, ಬಸವರಾಜು, ಜಯಪ್ರಕಾಶ್, ರಮೇಶ್‌ಬಾಬು, ಸಮಾಜ ಕಲ್ಯಾಣ ಇಲಾಖೆ ಎಲ್ಲಾ ತಾಲೂಕು ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಸಿದ್ದರಾಜು, ಸೋಮೇಶ್ವರ್, ಮುದ್ದಯ್ಯ, ಆಸಿಫ್ ಉಲ್ಲಾ, ಆರ್. ಸಿದ್ದರಾಜು, ವಿಶೇ? ಅಭಿಯೋಜಕರಾದ ಶಿವಕುಮಾರ್, ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಮಾಲಲ ಮಹಾ ಘರ್ಜನೆ ಸಮ್ಮೇಳನಕ್ಕೆ ಜೈ

**ಮುಳಬಾಗಿಲು:** ಹಲೋ ಮಾಲ ಚಲೋ ಪುಂಗನೂರ್ ಮಾಲಲ ಮಹಾ ಘರ್ಜನ ಸಮ್ಮೇಳನ ಕಾರ್ಯಕ್ರಮಕ್ಕೆ ಗೌರವ ಅತಿಥಿಯಾಗಿ ಆಗಮಿಸುತ್ತಿರುವ ದಲಿತ ಪರ ಹೋರಾಟಗಾರ ಪ್ರಗತಿಪರಚಿಂತಕ ಸಾಯಿತಿ ಹಾಡುಗಾರಾದ ?ನ್ ರೇಂಜರ್ಲಾ ರಾಜೇಶ್ ಆಗುಮಿಸುತ್ತಿದ್ದು ಅವರಿಗೆ ಮುಳಬಾಗಿಲು ತಾಲ್ಲೂಕಿನ ಬಲಗೈ ಹಾಗೂ ದಲಿತ ಪರ ಸಂಘಟನೆಗಳಿಂದ ಸ್ವಾಗತ ಕೋರಲು ನೂರಾರು ಸಂಖ್ಯೆಯಲ್ಲಿ ಜನರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಬೈಕ್ ರ‍್ಯಾಲಿಗೆ ಚಾಲನೆ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದ ಕೋಲಾರ ಜಿಲ್ಲೆ ಹಾಗೂ ಆಂಧ್ರ ಗಡಿ ಭಾಗದಲ್ಲಿರುವಂತಹ ಮುಳಬಾಗಿಲು ತಾಲ್ಲೂಕಿನ ಜನತೆ ಹೋರಾಟಗಾರರು ಬಂಗಾರದಂತ ಮನು?ರು ಜಾತಿಭೇದ ಇಲ್ಲದೆ ಎಲ್ಲಾ ಶೋಷಿತರ ಪರವಾಗಿ ಹೋರಾಟ ಮಾಡುವಂತಹ ನಾಯಕರು ಎಂದು ಪ್ರೀತಿಯನ್ನು ವ್ಯಕ್ತಪಡಿಸಿದರು ಈ ಸಂದರ್ಭದಲ್ಲಿ ದಸಂಸ ಸಂ ಜಿಲ್ಲಾ ಸಂಘಟನಾ ಸಂಯೋಜಕದ ಮೆಕಾನಿಕ್ ಶ್ರೀನಿವಾಸ್, ಎ.ಪಿ.ಎಂ.ಸಿ ಮಾಜಿ ಅಧ್ಯಕ್ಷರಾದ ಗೋಲ್ಲಹಳ್ಳಿ ವೆಂಕಟೇಶ್, ಹಂಗೊಂಡಹಳ್ಳಿ ಸೀನಪ್ಪ, ಉಪಾಧ್ಯಾಯರು ರಾಮಕೃ?, ಕರಡು ಗುರು ವೆಂಕಟೇಶಪ್ಪ, ಸಂಗಸಂದ್ರ ವಿಜಯ್ ಕುಮಾರ್, ಕೀಲುಹೊಳಲಿ ಸತೀಶ್, ವರದಗಾನಹಳ್ಳಿ ಮುನಿವೆಂಕಟಪ್ಪ , ಅಂಗೊಂಡಳ್ಳಿ ಮುನಿಚೌಡಪ್ಪ, ನಗರಸಭಾ ಸದಸ್ಯರಾದ ನೇತಾಜಿ ನಗರ ವಿಜಿ ಕುಮಾರ್, ಮಂಜುನಾಥ್, ಸುರೇಶ್, ಗುಜ್ಜಮಾರಂಡಹಳ್ಳಿ ಜಗದೀಶ್, ಗಣೇಶ್ ಪಾಳ್ಯ ಕಿಟ್ಟಿ, ಎಂ.ವಿ. ಬಾಲಕೃ?, ಕಪ್ಪಲಮುಡುಗು ಅಶೋಕ್, ಬಂಡಹಳ್ಳಿ ಶ್ರೀರಾಮ್, ರೆಡ್ಡಿ ಹಳ್ಳಿ ಅಭಿ, ವಾಣಿಗನಹಳ್ಳಿ ವೆಂಕಟೇಶಪ್ಪ, ಮಿನಿ ಗದ್ದರ್ ಶ್ರೀನಿವಾಸ್, ಯುವ ಮುಖಂಡ ಗೋವಿಂದ್‌ರಾಜ್, ಕಪ್ಪಲಮಾಡುವ ಶಂಕರ್, ತಾತಿಘಟ್ಟ ಮುನಿರತ್ನಪ್ಪ, ಇ..ಸಂಜಪ್ಪ, ಕುರುಡುಮಲೆ ಗಣೇಶ್, ಮತ್ತಿತರರು ಭಾಗವಹಿಸಿದ್ದರು

# ಬೀದಿ ನಾಯಿಗಳ ಹಾವಳಿ ತುರ್ತು ಕ್ರಮಕ್ಕೆ ಮನವಿ



**ಶಿಡ್ಲಘಟ್ಟ:** ನಗರದಲ್ಲಿ ಬೀದಿ ನಾಯಿಗಳ ಹಾವಳಿಯಿಂದ ಸಾರ್ವಜನಿಕರು, ಮಹಿಳೆಯರು ಮತ್ತು ಮಕ್ಕಳ ಮೇಲೆ ದಾಳಿಗಳು ನಡೆದಿವೆ ಇವುಗಳ ಪರಿಣಾಮವಾಗಿ ಗಂಭೀರ ಗಾಯಗಳು ಸಂಭವಿಸಿದ್ದು ಈ ಬಗ್ಗೆ ತುರ್ತು ಕ್ರಮ ತೆಗದುಕೊಳ್ಳಬೇಕೆಂದು ನಗರಸಭೆ ಆಯುಕ್ತರಾದ ಮಂಜುನಾಥ್ ಅವರಿಗೆ ಕನ್ನಡಪರ ಸಂಘಟನೆಗಳ ಒಕ್ಕೂಟದಿಂದ ಮನವಿಯನ್ನು ಸಲ್ಲಿಸಿದರು.

ಇತ್ತೀಚೆಗೆ ನಾಯಿಗಳ ದಾಳಿಯಿಂದ ಒಂದು ಪುಟ್ಟ ಮಗು ಸಾವಿಗೀಡಾಗಿದ್ದ ಘಟನೆ ನಡೆದಿದ್ದು ರಸ್ತೆಗಳಲ್ಲಿ ಓಡಾಡದ ಪರಿಸ್ಥಿತಿ ಬಂದಿದೆ,ಸಾಮಾನ್ಯವಾಗಿ ಬೀದಿ ನಾಯಿಗಳು ಹೆಚ್ಚಾದ ಕಾರಣ ಸಾರ್ವಜನಿಕ ಸ್ಥಳಗಳಲ್ಲಿ ಇಂತಹ ಪರಿಸ್ಥಿತಿಗಳು ಉಂಟಾಗುತ್ತಿವೆ ಈ ರೀತಿಯ ದಾಳಿಗಳು ಹೆಚ್ಚು ಮಹಿಳೆಯರಿಗೂ, ಮಕ್ಕಳಿಗೂ ಹಾನಿಯುಂಟು ಮಾಡುತ್ತಿವೆ ಹಾಗು ಸಾರ್ವಜನಿಕರಲ್ಲಿ ಭಯ ಮತ್ತು ಆತಂಕ ಉಂಟುಮಾಡಿದೆ,ಆದ್ದರಿಂದ ನಾಗರಿಕರ ಹಿತರಕ್ಷಣೆಗಾಗಿ ನಾವು ಈ ದಾಳಿಗಳ ಬಗ್ಗೆ ಸೂಕ್ತ ಜಾಗೃತಿಯನ್ನು ವಹಿಸುವುದರ ಜೊತೆಗೆ, ನಗರದ ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿಗಳ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು ನಾಯಿಗಳ ದಾಳಿಗಳನ್ನು ತಡೆಹಿಡಿಯಲು ಮುಂಜಾಗ್ರತ ನಿಯಮಗಳನ್ನು ಜಾರಿಗೆ ತಂದು ಸಾರ್ವಜನಿಕರ ಸುರಕ್ಷತೆಯನ್ನು ಕಾಪಾಡಬೇಕು ಮತ್ತು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಮನವಿ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ಆಯುಕ್ತ ಮಂಜುನಾಥ್ ಪ್ರಾಣಿಗಳ ದಯಾ ಸಂಘದ ಆಕ್ಷೇಪಣೆ ಇರುವುದರಿಂದ ಪ್ರಾಣಿಗಳಿಗೆ ಪ್ರಾಣಹಾನಿ ಮಾಡುವ ಹಾಗಿಲ್ಲ ಆದ್ದರಿಂದ ನಾಯಿಗಳ ಸಂತಾನಹರಣ ಚಿಕಿತ್ಸೆಯೊಂದೇ ದಾರಿ ಈ ಬಗ್ಗೆ ಸಂಬಂಧಿಸಿದ ಸಂಸ್ಥೆಗಳ ಮೂಲಕ ಟೆಂಡರ್ ಕರೆಯಲು ಮೇಲಾಧಿಕಾರಿಗಳ ಬಳಿ ಮಾತನಾಡಿ ತ್ವರಿತಗತಿಯಲ್ಲಿ ಸಮಸ್ಯೆ ಪರಿಹರಿಸಲಾಗುವುದೆಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಶ್ರಮಿಕ ಕರ್ನಾಟಕ ರಾಜ್ಯ ಅಸಂಘಟಿತ ಕಟ್ಟಡ ಕಾರ್ಮಿಕರ ಸಂಘದ ರಾಜ್ಯ ಕಾರ್ಯದರ್ಶಿ ಜೆ.ಎಸ್.ಭರತ್ ಕುಮಾರ್,ಸುವರ್ಣ ಜನಶಕ್ತಿ ವೇದಿಕೆಯ ತಾಲ್ಲೂಕು ಅಧ್ಯಕ್ಷ ಸುರೇಶ್,ಕನ್ನಡ ಪರ ಸಂಘಟನೆಗಳ ಒಕ್ಕೂಟದ ಪದಾಧಿಕಾರಿಗಳಾದ ಚೆಲುವರಾಜ್, ಬುಜ್ಜಿನಾಯಕ್,ಕೃ?ಪ್ಪ,ಆಸೀಪ್, ಮಧು, ಶ್ರೀರಾಮ್, ವೇಣು,ದಿನೇಶ್ ಬಾಬು ,ಜನಾರ್ಧನ್, ಲೋಕೇಶ್ ಮುಂತಾದವರು ಪಾಲ್ಗೊಂಡಿದ್ದರು.

# ಸದಸ್ಯರು ಹಾಜರಾಗದ ಕಾರಣ ಅವಿಶ್ವಾಸ ನಿರ್ಣಯ ಸಭೆ ರದ್ದು



**ಮಾಲೂರು:** ತಾಲ್ಲೂಕಿನ ತೊರ್ನಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ಅಶ್ವಥಮ್ಮ ವಿರುದ್ಧ 15 ಮಂದಿ ಸದಸ್ಯರು ಅವಿಶ್ವಾಸ ಮಂಡಿಸಿದ ಸಭೆಗೆ ಯಾವೊಬ್ಬ ಸದಸ್ಯರು ಹಾಜರಾಗದ ಕಾರಣ ಜಿಲ್ಲಾ ಉಪ ವಿಭಾಗಾಧಿಕಾರಿಗಳಾದ .ಡಾ.ಮೈತ್ರಿ, ಹೆಚ್.ಪಿ.ಎಸ್ ರವರು ಅವಿಶ್ವಾಸ ನಿರ್ಣಯ ಸಭೆಯನ್ನು ರದ್ದು ಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇಲ್ಲಿನ ತೊರ್ನಹಳ್ಳಿ ಗ್ರಾಮ ಪಂಚಾಯಿತಿಯ 15 ಮಂದಿ ಸದಸ್ಯರು ಸಹಿ ಮಾಡಿ ಅಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಸಭೆ ನಡೆಸಲು ಮನವಿ ಸಲ್ಲಿಸಿದ್ದರು. ಅದರಂತೆ ಡಿಸೆಂಬರ್ 30ರ ಸೋಮವಾರ ಸಂಜೆ 4 ಗಂಟೆಗೆ ತೊರ್ನಹಳ್ಳಿ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಅವಿಶ್ವಾಸ ಸಭೆಯನ್ನು ಕರೆಯಲಾಗಿತ್ತು. ಒಂದು ಗಂಟೆ ಕಾದರೂ ಸಹ ಅವಿಶ್ವಾಸ ಮಂಡಿಸಲು ಸಹಿ ಮಾಡಿ ಮನವಿ ಸಲ್ಲಿಸಿದ್ದ 15 ಮಂದಿ ಸದಸ್ಯರಲ್ಲಿ ಯಾವೊಬ್ಬ ಸದಸ್ಯರು ಸಭೆಗೆ ಹಾಜರಾಗದ ಹಿನ್ನೆಲೆಯಲ್ಲಿ ಸಭೆಯನ್ನು ರದ್ದುಪಡಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪ ವಿಭಾಗಾಧಿಕಾರಿಗಳಾದ ಡಾ.ಮೈತ್ರಿ, ಹೆಚ್.ಪಿ.ಎಸ್, ಕಂದಾಯ ಇಲಾಖೆಯ ಶಿರಸ್ತೆದಾರ್ ರವಿಕುಮಾರ್, ಕಂದಾಯ ಅಧಿಕಾರಿ ನಾರಾಯಣಸ್ವಾಮಿ, ಗ್ರಾಮಾಡಳಿತ ಅಧಿಕಾರಿ ಶಿವಕುಮಾರ್, ಪಿಡಿಒ ಸಿ ಆರ್ ಗೌಡ ಹಾಗೂ ಇತರರು ಹಾಜರಿದ್ದರು.

# ಅಂಬೇಡ್ಕರ್ ಭವನ ನಿರ್ಮಾಣಕ್ಕೆ 2 ಕೋಟಿ ರೂ. ಮಂಜೂರು

**ಶಿಡ್ಲಘಟ್ಟ:** ನಗರದಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ರಾಜ್ಯ ಸರ್ಕಾರ 2 ಕೋಟಿ ರೂ. ಮಂಜೂರಾತಿ ನೀಡಿದ್ದು, ಈಗಾಗಲೇ 75 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಿರುವುದಾಗಿ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ ಎಂದು ಶಾಸಕರಾದ ಬಿ.ಎನ್.ರವಿಕುಮಾರ್ ಹೇಳಿದರು.

ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ ವಿಧಾನಸಭೆ ಅಧಿವೇಶನದಲ್ಲಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಿವಿಧ ಸಚಿವರಿಂದ ಸಿಕ್ಕ ಉತ್ತರಗಳ ಬಗ್ಗೆ ಪತ್ರಿಕೆಗೆ ಅವರು ಮಾಹಿತಿ ನೀಡಿದರು.



ಸರ್ಕಾರಿ ಕಾರ್ಯಕ್ರಮ ಹಾಗೂ ಇತರೆ ಕಾರ್ಯಕ್ರಮಗಳನ್ನು ಮಾಡಲು ಹಾಗು ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ಅನುದಾನದ ಬಿಡುಗಡೆಗೆ ಕೋರಿದೆ,ಅದಕ್ಕೆ ಸಮಾಜ ಕಲ್ಯಾಣ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ,ಅನುದಾನ ಲಭ್ಯತೆಗೆ ಅನುಗುಣವಾಗಿ ಬಾಕಿ ಅನುದಾನ ಬಿಡುಗಡೆ ಮಾಡುವ ಮೂಲಕ ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮವಹಿಸುವುದಾಗಿ ತಿಳಿಸಿದ್ದಾರೆ ಎಂದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಗ್ರಾಮೀಣ ರಸ್ತೆ ಅಭಿವೃದ್ಧಿ ಮತ್ತು ನಿರ್ವಹಣೆಗೆ ಅನುದಾನ ಮಂಜೂರಾತಿ ಮಾಡಿ ಹಾಳಾಗಿರುವ ರಸ್ತೆ ದುರಸ್ತಿ ಪಡಿಸಲು ಕ್ರಮವಹಿಸಲಾಗುತ್ತಿದೆ ಎಂದು ಲಿಖಿತ ಉತ್ತರ ಕೊಟ್ಟಿದ್ದಾರೆ ಎಂದು ಹೇಳಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಹೊಸದಾಗಿ ಅಂಗನವಾಡಿ ಕೇಂದ್ರ ತೆರೆಯಲು ಅಗತ್ಯಕ್ಕೆ ತಕ್ಕಂತೆ ಹೊಸ ಅಂಗನವಾಡಿ ಕೇಂದ್ರ ಸ್ಥಾಪಿಸಲು, ಕೇಂದ್ರ ಸರ್ಕಾರದ ಅನುಮೋದನೆ ಪಡೆದು ಕ್ರಮವಹಿಸುವುದಾಗಿ ಭರವಸೆ ನೀಡಿದ್ದಾರೆ ಎಂದರು.

# ತ್ವರಿತಗತಿಯಲ್ಲಿ ರೈತರ ಪಂಪ್ ಸೆಟ್‌ಗಳಿಗೆ ವಿದ್ಯುತ್ ಪೂರೈಕೆ

**ಶಿರಾ:** ಕುಸುಮ್–ಸಿ ಯೋಜನೆಯ ಮೊದಲ ಹಂತದಲ್ಲಿ ರಾಜ್ಯಾದ್ಯಂತ ವಿವಿಧ ಫೀಡರ್ ವ್ಯಾಪ್ತಿಗಳಲ್ಲಿ 3,000 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲು ನಿರ್ಧರಿಸಲಾಗಿದೆ. ಈ ಪೈಕಿ ಮಾರ್ಚ್ 15ರೊಳಗೆ 1,300 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಿ ರೈತರ ಪಂಪ್ ಸೆಟ್‌ಗಳಿಗೆ ಪೂರೈಸಲಾಗುವುದು. ಕಾಮಗಾರಿಗಳು ತ್ವರಿತಗತಿಯಲ್ಲಿ ನಡೆಯುತ್ತಿವೆ", ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದರು

ಅವರು ಶಿರಾ ತಾಲ್ಲೂಕಿನ ಚಾಂಗವರ ಬಳಿ ಮತ್ತು ಚಿಕ್ಕಬಾಣಗೆರೆ ಬಳಿ ನಿರ್ಮಿಸಿರುವ ಸೋಲಾರ್ ಪಾರ್ಕ್ ಗಳು ಹಾಗೂ ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲೂಕಿನ ನೀರಗುಂದ ಗೇಟ್ ಬಳಿ ಸ್ಥಾಪಿಸಿರುವ ಸೋಲಾರ್ ಪಾರ್ಕ್ ಗೆ ಸೋಮವಾರ ಅಧಿಕಾರಿಗಳೊಂದಿಗೆ ಭೇಟಿನೀಡಿ ಪರಿಶೀಲಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಫೀಡರ್ ಮಟ್ಟದ ಸೌರೀಕರಣ ಮೂಲಕ ರೈತರ ಪಂಪ್‌ಸೆಟ್‌ಗಳಿಗೆ ಸೌರ ಶಕ್ತಿಯಿಂದ ವಿದ್ಯುತ್ ಸರಬರಾಜು ಮಾಡುವ ಕುಸುಮ್– ಸಿ ಯೋಜನೆಯ ಮೊದಲ ಹಂತದಲ್ಲಿ ಮಾರ್ಚ್ 15ರೊಳಗೆ 1,300 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಿ ರೈತರ ಪಂಪ್ ಸೆಟ್ ಗಳಿಗೆ ಪೂರೈಸಲಾಗುವುದು

ಕುಸುಮ್–ಸಿ ಯೋಜನೆಯ ಮೊದಲ ಹಂತದಲ್ಲಿ ರಾಜ್ಯಾದ್ಯಂತ ವಿವಿಧ ಫೀಡರ್ ವ್ಯಾಪ್ತಿಗಳಲ್ಲಿ 3,000 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲು ನಿರ್ಧರಿಸಲಾಗಿದೆ. ಈ ಪೈಕಿ ಮಾರ್ಚ್ 15ರೊಳಗೆ 1,300 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಿ ರೈತರ ಪಂಪ್ ಸೆಟ್ ಗಳಿಗೆ ಪೂರೈಸಲಾಗುವುದು. ಕಾಗಾರಿಗಳು ತ್ವರಿತಗತಿಯಲ್ಲಿ ನಡೆಯುತ್ತಿವೆ", ಎಂದು ಹೇಳಿದರು.

"ಕುಸುಮ್–ಬಿ ಯೋಜನೆಯಡಿ ರೈತರಿಗೆ ಸೋಲಾರ್ ಪಂಪ್ ಸೆಟ್ ಗಳನ್ನು ಒದಗಿಸಲಾಗುತ್ತಿದೆ. ಕುಸುಮ್–ಸಿ ಯೋಜನೆಯಡಿ ಫೀಡರ್ ಮಟ್ಟದ ಸೌರೀಕರಣ ಮೂಲಕ ರೈತರ ಪಂಪಸೆಟ್‌ಗಳಿಗೆ ಸೌರ ಶಕ್ತಿಯಿಂದ ವಿದ್ಯುತ್ ಸರಬರಾಜು ಮಾಡಲಾಗುವುದು. ಹಗಲು ವೇಳೆ ನಿರಂತರ 7 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಪೂರೈಸಲಾಗುವುದು", ಎಂದು ಮಾಹಿತಿ ನೀಡಿದರು

ಫೀಡರ್ ಮಟ್ಟದ ಸೌರೀಕರಣಕ್ಕೆ ಸೋಲಾರ್ ಪಾರ್ಕ್ ಗಳನ್ನು ಸ್ಥಾಪಿಸಲು ಸರ್ಕಾರಿ ಭೂಮಿ ಇದ್ದರೆ ಅದನ್ನು ಉಚಿತವಾಗಿ ಇಂಧನ ಇಲಾಖೆಗೆ ಪಡೆದು ಗುತ್ತಿಗೆದಾರರಿಗೆ ನೀಡಲಾಗುತ್ತದೆ. ಗುತ್ತಿಗೆದಾರರು ಪ್ರತಿ ಎಕರೆ ಭೂಮಿಗೆ ವಾರ್ಷಿಕ 25 ಸಾವಿರ ರೂ. ಪಾವತಿಸಬೇಕು. ಈ ಹಣವನ್ನು ಜಿಲ್ಲಾಧಿಕಾರಿಗಳ ಖಾತೆಯಲ್ಲಿ ಇಡಲಾಗುವುದು. ಜಿಲ್ಲಾ ಉಸ್ತುವಾರಿ ಸಚಿವರು, ಸ್ಥಳೀಯ ಶಾಸಕರು ಮತ್ತು ಜಿಲ್ಲಾಧಿಕಾರಿಗಳು ಚರ್ಚಿಸಿ, ಈ ಹಣವನ್ನು ಸೋಲಾರ್ ಪಾರ್ಕ್ ಇರುವ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿನ ಸರ್ಕಾರಿ ಶಾಲೆ, ಅಂಗನವಾಡಿಗಳ ಅಭಿವೃದ್ಧಿ, ಕುಡಿಯುವ ನೀರಿನ ಯೋಜನೆಗೆ ವೆಚ್ಚ ಮಾಡಲಿದ್ದಾರೆ. ಸರ್ಕಾರಿ ಭೂಮಿ ಲಭ್ಯವಿಲ್ಲದೇ ಇದ್ದರೆ ಖಾಸಗಿ ಭೂಮಿ ಪಡೆಯಲಾಗುವುದು. ಈ ಭೂಮಿಗೆ ಪ್ರತಿ ಎಕರೆಗೆ 25,000 ರೂ.ಅನ್ನು ಗುತ್ತಿಗೆದಾರರು ಭೂಮಾಲೀಕರಿಗೆ ಪಾವತಿ ಮಾಡಲಿದ್ದಾರೆ", ಎಂದು ಹೇಳಿದರು.

ರಾಜ್ಯ ಸಚಿವ ಸಂಪುಟ ವಿಸ್ತರಣೆ ವಿಚಾರ ಇದೀಗ ಮತ್ತೆ ಸದ್ದು ಮಾಡುತ್ತಿದೆ. ಸಂಕ್ರಾಂತಿ ಬಳಿಕ ಸಂಪುಟ ವಿಸ್ತರಣೆಯಾಗುತ್ತಾ ಎನ್ನುವ ಪ್ರಶ್ನೆಗಳು ಹುಟ್ಟಿಕೊಂಡಿವೆ. ಹಲವು ಸಚಿವರಿಗೆ ಕೊಕ್ ಕೊಟ್ಟು, ಕೆಲ ಶಾಸಕರಿಗೆ ಮಂತ್ರಿಗಿರಿ ನೀಡಲಾಗುತ್ತದೆ ಎಂಬ ಮಾತು ಕೇಳಿ ಬರುತ್ತಿವೆ.




**ಸದ್ಯದಲ್ಲೇ ಕ್ಯಾಬಿನೆಟ್ ಪುನರಚನೆ ಆಗಲಿದ್ಯಾ?**

ಉಪ ಚುನಾವಣೆ ಮುಗಿಯುತ್ತಿದ್ದಂತೆ ಗೆಲುವಿನ ಸುದ್ದಿ ತೆಗೆದುಕೊಂಡು ದೆಹಲಿಗೆ ಹೋಗಿದ್ದ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಕಾಂಗ್ರೆಸ್ ಹೈಕಮಾಂಡ್ ಭೇಟಿಯಾಗಿದ್ದರು. ಈ ವೇಳೆ ಹಲವು ಮಹತ್ವದ ವಿಚಾರಗಳ ಬಗ್ಗೆ ಚರ್ಚೆ ನಡೆದಿದ್ದು, ಸಂಪುಟ ವಿಸ್ತರಣೆ ಬಗ್ಗೆ ಹಾಗೂ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆಯೂ ಚರ್ಚೆ ನಡೆದಿತ್ತು. ಆದರೆ ಅಂದು ಹೈಕಮಾಂಡ್ ಇವೆರಡಕ್ಕೂ ಬ್ರೇಕ್ ಹಾಕಿತ್ತು. ಆದರೆ ಇದೀಗ ಸದ್ಯದಲ್ಲೇ ಕ್ಯಾಬಿನೆಟ್ ಪುನರಚನೆ ಆಗಲಿದ್ಯಾ ಪ್ರಮುಖ ಮಂತ್ರಿಗಳಿಗೆ ಸಂಪುಟದಿಂದ ಕೋಕ್ ಆಗಲಿದೆಯಾ ಎನ್ನುವ ಪ್ರಶ್ನೆ ಹುಟ್ಟಿಕೊಂಡಿವೆ

ಟಿ ಬಿ ಜಯಚಂದ್ರ ಸಂಪುಟ ಸೇರ್ಪಡೆ ಪಕ್ಕಾ

ಈ ವಿಚಾರವಾಗಿ ಇಂಧನ ಸಚಿವ ಕೆಜೆ ಜಾರ್ಜ್ ಅವರು ಮಾತನಾಡಿದ್ದು, ಶಿರಾ ಕ್ಷೇತ್ರದ ಹಿರಿಯ ಶಾಸಕ ಟಿ ಬಿ ಜಯಚಂದ್ರ ಸಂಪುಟ ಸೇರ್ಪಡೆ ಪಕ್ಕಾ ಎಂದು ಹೇಳುವ ಮೂಲಕ ಸಧ್ಯದಲ್ಲೇ ಸಂಪುಟ ಪುನಾರಚನೆ ಸುಳಿವನ್ನು ಜಾರ್ಜ್ ಬಿಟ್ಟುಕೊಟ್ಟಿದ್ದಾರೆ.

ಮಾಧ್ಯಮದವರ ಪ್ರಶ್ನೆಗೆ ಅವರು ಉಲ್ಟಾ ಹೊಡೆದ ಜಾರ್ಜ್‌ಬಶಿರಾ ತಾಲೂಕಿನ ಚೆಂಗಾವರದಲ್ಲಿನ ಸೋಲಾರ್ ಪ್ಲಾಂಟ್ ಪರಿಶೀಲನೆ ವೇಳೆ ಜಾರ್ಜ್ ಅವರು ಕಾರ್ಯಕರ್ತೆಯೊಬ್ಬರ ಬಳಿ ಮಾತನಾಡುವ ವೇಳೆ, ಸಾಹೆಬ್ರು ಸೀನಿಯರು, ಅವರು ಮುಂದೆ ಕ್ಯಾಬಿನೆಟ್ ಗೆ ಬರಬಹುದು ಎಂದು ಹೇಳಿದರು. ಆದರೆ ಆಬಳಿಕ ಮಾಧ್ಯಮದವರ ಪ್ರಶ್ನೆಗೆ ಅವರು ಉಲ್ಟಾ ಹೊಡೆದರು.

ಜಯಚಂದ್ರರನ್ನು ಸಂಪುಟಕ್ಕೆ ಸೇರಿಸೋದು ಬಿಡೋದು ಹೈ ಕಮಾಂಡ್ ತೀರ್ಮಾನವಾಗಿರುತ್ತದೆ. ಅವರು ಕ್ಯಾಬಿನೆಟ್ ಗೆ ಸೇರಬೇಕು ಅನ್ನೊದು ನನ್ನ ಶಿಪಾರಸ್ಸು... ಅದರ ತೀರ್ಮಾನ ಹೈ ಕಮಾಂಡ್ ಮಾಡಲಿದೆ ಎಂದು ಜಾರ್ಜ್ ಹೇಳಿದರು.

ನಾನು ಸಚಿವ ಸ್ಥಾನದ ಆಕಾಂಕ್ಷಿಯೇ... ನನಗೂ ಆಸೆ ಆಕಾಂಕ್ಷೆಗಳಿವೆ ಇನ್ನೊಂದು ಕಡೆ ತಾನು ಕ್ಯಾಬಿನೆಟ್ ಸೇರುವ ಇಂಗಿತ ವ್ಯಕ್ತಪಡಿಸಿರುವ ಟಿ.ಬಿ.ಜಯಚಂದ್ರ ಅವರು, ಹೌದು ನಾನು ಸಚಿವ ಸ್ಥಾನದ ಆಕಾಂಕ್ಷಿಯೇ... ನನಗೂ ಆಸೆ ಆಕಾಂಕ್ಷೆಗಳಿವೆ. ಆದರೆ ತೀರ್ಮಾನ ಹೈ ಕಮಾಂಡ್ ಗೆ ಬಿಟ್ಟಿದ್ದು ಎಂದು ಸರ್ಕಾರದ ದೆಹಲಿ ವಿಶೇ? ಪ್ರತಿನಿಧಿ ಟಿ.ಬಿ.ಜಯಚಂದ್ರ ಪ್ರತಿಕ್ರಿಯಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸರ್ಕಾರದ ವಿಶೇ? ಪ್ರತಿನಿಧಿ ಶಿರಾ ಕ್ಷೇತ್ರದ ಶಾಸಕಟಿ.ಬಿ.ಜಯಚಂದ್ರ, ಹೊಸದುರ್ಗದ ಕ್ಷೇತ್ರದ ಶಾಸಕ ಬಿ.ಜಿ.ಗೋವಿಂದಪ್ಪ, ಇಂಧನ ಇಲಾಖೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಮತ್ತಿತರರು ಇದ್ದರು.

# ಜಿಲ್ಲಾ ವಿಶೇಷ ದಳದವರಿಂದ ಕ್ಲಬ್ ಮೇಲೆ ದಾಳಿ: 18 ಜನರ ಬಂಧನ

**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

ಚಾಮರಾಜನಗರ: ಜಿಲ್ಲಾ ಪೊಲೀಸ್ ವಿಶೇಷ ದಳದವರಿಂದ ಸತ್ತಿ ರಸ್ತೆಯಲ್ಲಿರುವ ಕ್ಲಬ್ ವೊಂದರ ಮೇಲೆ ದಾಳಿ ನಡೆಸಿ ಪಣಕ್ಕಿಟ್ಟಿದ್ದ ಹಣ ಹಾಗೂ 18 ಜನರನ್ನ ವಶಪಡೆದಿದ್ದಾರೆ. ಪೊಲೀಸ್ ವಿಶೇಷ ದಳದ ಇನ್ಸ್ ಪೆಕ್ಟರ್ ಶ್ರೀದರ್ ನೇತೃತ್ವದ ತಂಡ ಕಳೆದ ರಾತ್ರಿ 9.30 ರ ಸಮಯದಲ್ಲಿ ಖಚಿತ ವರ್ತಮಾನದ ಮೇರೆಗೆ ಸ್ಟಾರ್ ಸ್ಪೋರ್ಟ್ಸ್ ಕ್ಲಬ್ ಅಲ್ಲಿ ಅಂದರ್ ವಾಹರ್ ಜೂಜಾಟದಲ್ಲಿ ತೊಡಗಿದ್ದನ್ನ ಖಚಿತಪಡಿಸಿಕೊಂಡು ಕಾರ್ಯಚರಣೆ ನಡೆಸಿದ್ದಾರೆ.

ಚಾಮರಾಜನಗರದ ಮಹೇಶ್,ಕೆ .ಟಿ. ನಾಗರಾಜು, ಬಂಗಾರು, ಅರಕಲವಾಡಿಯ ಮಲ್ಲುಚಾರಿ ಮಲ್ಲಾರಾದ್ಯ,ಮಾದಪ್ಪ, ತೆರಕಣಾಂಬಿಯ ಹರೀಶ, ಹರವೆ ನಾಗರಾಜಪ್ಪ, ಲಿಂಗರಾಜಪುರದಬಸವಣ್ಣ, ಹೊಸೂರಿನ ಸುನೀಲ್, ಹೆಗ್ಗವಾಡಿಯ ಲಲಿಂಗಸ್ವಾಮಿ,ಕರಿಯನಕಟ್ಟೆ ಮಹೇಶ, ಮರಿಯಾಲದ ಸಿದ್ದವೀರಪ್ಪ, ಹೊಂಗನೂರಿನ ಜಯಸಿದ್ದ, ಚೆನ್ನುಪುರದ ಕುಮಾರ, ಹನೂರು ಮೀಣ್ಯಂನ ಜಯಚಂದ್ರ, ಯಳಂದೂರು ಗುಂಬಳ್ಳಿಯ ಶ್ರೀದರ್, ಕೃಷ್ಣ. ಎಂಬುವವರನ್ನ ವಶಕ್ಕೆ ಪಡೆದು ಪಣಕ್ಕಿಟ್ಟಿದ್ದ 3300 ರೂ ವಶಪಡೆದು ಪಟ್ಟಣ ಠಾಣೆಯ ಸುಪರ್ದಿಗೆ ನೀಡಿದ್ದಾರೆ.

ವಿಶೇಷ ದಳದ ಪ್ರಭುಸ್ವಾಮಿ, ಜಯಪ್ರಕಾಶ್, ಪ್ರಸನ್ನ ಮೂರ್ತಿ, ಗುರುಪ್ರಸಾದ್, ಸಿದ್ದರಾಜು, ಮದುಸೂದನ್ ಕಾರ್ಯಚರಣೆಯಲ್ಲಿ ಭಾಗವಹಿಸಿದ್ದರು. ಇತ್ತಿಚೆಗೆ ಪಟ್ಟಣದಲ್ಲಿ ಕ್ಲಬ್ ಗಳಲ್ಲಿ ಅನುಮತಿ ಪಡೆಯೊದೆ ಬೇರೆ ಆದರೆ ಜೂಜಾಡಿಸೊದೆ ಬೇರೆ..ಸ್ಪೋರ್ಟ್ಸ್ ಕ್ಲಬ್ ಜೂಜಾಟದ ಕೇಂದ್ರಗಳಾಗಿದೆ ಅಂತ ಕೆಲವರು ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದ್ಧರು.

ಸಹಕಾರ ಸಂಘ & ನೊಂದಾಣಾದಿಕಾರಿಗಳ ನಿರ್ಲ್ಯಕ್ಷ: ಸ್ಪೋರ್ಟ್ಸ್ ಕ್ಲಬ್ ಹೆಸರಲ್ಲಿ ಅನುಮತಿ ಪಡೆದು ಜೂಜಾಟದಲ್ಲಿ ತೊಡಗಿದರೂ ಜಿಲ್ಲಾಡಳಿತ ಯಾವ್ದೆ ಕ್ರಮ ವಹಿಸದಿರುವುದು ಶೋಚನೀಯವಾಗಿದೆ

## ಇಲಾಖೆಯೊಳಗಿನ ಅಸಹಕಾರ ಸ್ಫೋಟ!

**ಚಾಮರಾಜನಗರ:** ಪಟ್ಟಣದೊಳಗೆ ಜೂಜಿನ ಕೇಂದ್ರವಾಗಿದ್ದ ಕ್ಲಬ್ ಗಳ ಮೇಲೆ ದಾಳಿ ನಡೆಸಲು ಪಟ್ಟಣ ಪೊಲೀಸರು ದಾಳಿ ನಡೆಸಿ ಕ್ರಮ ಕೈಗೊಳ್ಳಲು ವಿಫಲರಾಗಿದ್ದರು. ಜಿಲ್ಲಾ ಎಸ್ಪಿ ಕಛೇರಿಯ ವಿಶೇ? ದಳದ ಇನ್ಸ್ ಪೆಕ್ಟರ್ ಶ್ರೀದರ್ ಅವರ ನೇತೃತ್ವದಲ್ಲಿ ದಾಳಿ ನಡೆಸಿ ಆರೋಪಿತರನ್ನ ಪಟ್ಟಣ ಠಾಣೆಗೆ ಕರೆತರಲಾಯಿತು.

ಕಾರ್ಯಚರಣೆ ನಡೆಸಿದ ಇನ್ಸ್ ಪೆಕ್ಟರ್ ಅವರು ಠಾಣೆಗೆ 18 ಜನರನ್ನ ಕರೆ ತಂದರೂ ಹಾಗೂ ಪಂಚನಾಮೆ ಮಾಡಲು ತಿಳಿಸಿದರು ಯಾವ್ದೆ ರೀತಿಯ ಸಹಕಾರ ದೊರೆಯದೆ ಸ್ವಲ್ಪ ಕಾಲ ಸಮಯ ಕೂಡ ವ್ಯರ್ಥವಾಗಿ ಎಸ್ಪಿ ಅವರಿಗೆ ಮಾಹಿತಿ ನೀಡಿದ ಮೇಲೆ ಎಸ್ಪಿ ಅವರ ಸೂಚನೆ ಮೇರೆಗೆ ಪ್ರಕರಣ ದಾಖಲಾಯಿಸಲಾಯಿತು.

ಒಟ್ಟಾರೆ ಪಟ್ಟಣದೊಳಗೆ ಕ್ಲಬಲ್ಲಿ ಜೂಜು ನಡೆಯುತ್ತಿದ್ದರೂಮೌನ ವಹಿಸಿ ಈಗ ವಿಶೇ? ದಳದ ದಾಳಿಯಿಂದ ಪಟ್ಟಣ ಠಾಣೆಯ ಇನ್ಸ್ ಪೆಕ್ಟರ್ ಅವರಿಗೆ ಮುಜುಗರ ತಂದಿದ್ದಾದರೂ ವಿಶೇ? ದಳದವರ ಕಾರ್ಯವನ್ನು ಸಾರ್ವಜನಿಕರು ಶ್ಲಾಘೀಸಿದ್ದಾರೆ.

# ಸಹಕಾರಿ ರಂಗದಲ್ಲಿ ರಾಜಕೀಯ ಚದುರಂಗ ರಾಯರಡ್ಡಿ ವಿರುದ್ಧ ಬಿಜೆಪಿ, ಜೆಡಿಎಸ್ ಆಕ್ರೋಶ

ಕುಕನೂರು: ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯ ಫಲಿತಾಂಶ ಘೋ?ಣೆ ಮಾಡಬೇಕೆಂದು ಒತ್ತಾಯಿಸಿ ನಡೆದ ಪ್ರತಿಭಟನೆಯಲ್ಲಿ ಬಿಜೆಪಿ ಜೆಡಿಎಸ್ ಮುಖಂಡರಿಂದ ಶಾಸಕ ರಾಯರಡ್ಡಿ ವಿರುದ್ದ ಆಕ್ರೋಶ ವ್ಯಕ್ತವಾಯಿತು. ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಆರ್ ಡಿ ಸಿ ಸಿ ಬ್ಯಾಂಕ್ ಮುಂದೆ ಮಾಜಿ ಸಚಿವ ಹಾಲಪ್ಪ ಆಚಾರ್ ಮತ್ತು ಜಿಲ್ಲಾ ಬಿಜೆಪಿ ಅಧ್ಯಕ್ಷ ನವೀನ್ ಕುಮಾರ್ ಗುಳಗಣ್ಣನವರ್ ನೇತೃತ್ವದಲ್ಲಿ ಸೋಮವಾರ ಬ್ರಹತ್ ಪ್ರತಿಭಟನೆ ನಡೆಸಲಾಯಿತು.



ಈ ಸಂದರ್ಭದಲ್ಲಿ ಹಾಲಪ್ಪ ಆಚಾರ್ ಮಾತನಾಡಿ, ರಾಜಕೀಯ ಕೈಗೊಂಬೆಯಂತೆ ವರ್ತಿಸಿರುವ ಚುನಾವಣೆ ಅಧಿಕಾರಿ ಫಲಿತಾಂಶ ಘೋ?ಣೆ ಮಾಡದೇ ಸಹಕಾರಿ ರಂಗಕ್ಕೆ ಮಸಿ ಬಳಿದಿದ್ದಾರೆ, ಇಲ್ಲಿಯ ಶಾಸಕ ರಾಯರಡ್ಡಿ ಅಧಿಕಾರಿ ವರ್ಗವನ್ನು ದುರುಪಯೋಗ ಮಾಡಿಕೊಂಡು ರೈತರಿಗೆ ಮೋಸ ಮಾಡುತ್ತಿದ್ದಾರೆ. ಇವರೊಬ್ಬ ನಾಚಿಕೆ ಇಲ್ಲದ ಶಾಸಕರು, ಇದೊಂದು ನಾಚಿಕೆ ಇಲ್ಲದ ಸರ್ಕಾರ ಎಂದು ಕಿಡಿ ಕಾರಿದರು.

ಈ ಹಿಂದೆ ನಬಾರ್ಡ್ ನಿಂದ ಆರ್ಥಿಕ ನೆರವನ್ನು ಪಡೆದುಕೊಂಡು ಜಿಲ್ಲೆಯಲ್ಲಿ ಸಹಕಾರ ಕ್ಷೇತ್ರವನ್ನು ಬಲಪಡಿಸಿ ರೈತರ ಉದ್ದಾರಕ್ಕೆ ಶ್ರಮಿಸಿದ್ದೇವೆ, ಆದರೆ ಕಾಂಗ್ರೆಸ್ ಪಕ್ಷದ ಶಾಸಕರಿಗೆ ಇದನ್ನು ಸಹಿಸಿಕೊಳ್ಳಲು ಆಗುತ್ತಿಲ್ಲ, ಸಹಕಾರ ಕ್ಷೇತ್ರಕ್ಕೆ ಬಂದು ಇದನ್ನೂ ಹಾಳು ಮಾಡುತ್ತಿದ್ದಾರೆ ಎಂದು ಶಾಸಕ ಬಸವರಾಜ್ ರಾಯರಡ್ಡಿ ವಿರುದ್ದ ಹಾಲಪ್ಪ ಆಚಾರ್ ವಾಗ್ದಾಳಿ ನಡೆಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ನವೀನ್ ಕುಮಾರ್ ಗುಳಗಣ್ಣನವರ್ ಮಾತನಾಡಿ, ಶಾಸಕ ರಾಯರಡ್ಡಿ ಅವರು ಕುತಂತ್ರ ರಾಜಕಾರಣ ಮಾಡುತ್ತಿದ್ದಾರೆ. ಅಧಿಕಾರಿಗಳಿಗೆ ಒತ್ತಡ ಹಾಕುತ್ತಿದ್ದಾರೆ. ರೈತರನ್ನು ರೊಚ್ಚಿಗೆಬ್ಬಿಸುವ ಕೆಲಸ ಮಾಡಬೇಡಿ ಎಂದು ಕಿಡಿ ಕಾರಿದರು.

ಭಾನುವಾರ ನಡೆದ ಚುನಾವಣೆಯಲ್ಲಿ 338 ಮತದಾರರ ಪಟ್ಟಿಯ ಜೊತೆ ಅರ್ಹ ಮತದಾರರ ಪಟ್ಟಿಯ ಹೆಚ್ಚುವರಿ 336 ಮತದಾರರು ಸೇರ್ಪಡೆಯಿಂದ ಪ್ರತ್ಯೇಕ ಭೂತ್ ಗಳಲ್ಲಿ ಮತದಾನ ನಡೆಸಲಾಗಿತ್ತು. ನಂತರ ಮತ ಏಣಿಕೆ ಮಾಡದೇ ಪೆಟ್ಟಿಗೆಗಳನ್ನು ಆರ್ ಡಿ ಸಿ ಸಿ ಬ್ಯಾಂಕ್ ನಲ್ಲಿ ಇರಿಸಲಾಗಿತ್ತು. ಫಲಿತಾಂಶ ಘೋ?ಣೆ ಮಾಡುವುದು ಚುನಾವಣೆ ಅಧಿಕಾರಿಯ ವಿವೇಚನೆಗೆ ಬಿಟ್ಟ ವಿ?ಯವಾಗಿದೆ ಎಂದು ಚುನಾವಣೆ ಅಧಿಕಾರಿ ಹನುಮಂತಪ್ಪ ನಾಮದಾರ್ ಹೇಳಿದರೆ ಇತ್ತ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು, ಮುಖಂಡರು ಫಲಿತಾಂಶಕ್ಕೆ ಒತ್ತಾಯಿಸಿ ರಾತ್ರಿಯಿಡಿ ಧರಣಿ ನಡೆಸಿದ್ದರು.

ಬಿಜೆಪಿ ಮಂಡಲ ಅಧ್ಯಕ್ಷ ಮಾರುತಿ ಗವರಾಳ್, ಜೆಡಿಎಸ್ ಅಧ್ಯಕ್ಷ ಬಸವರಾಜ್ ಗುಳುಗುಳಿ, ವಕ್ತಾರ ಮಲ್ಲನಗೌಡ ಕೋನನಗೌಡರ್, ಶರಣಪ್ಪ ರಾಂಪುರ, ಬಿಜೆಪಿ ಮುಖಂಡರಾದ ಸಿ ಎಸ್ ಪೊಲೀಸ್ ಪಾಟೀಲ್, ವೀರಣ್ಣ ಹುಬ್ಬಳ್ಳಿ, ಅಯ್ಯನಗೌಡ ಕೆಂಚಮ್ಮನವರ, ಶಂಭು ಜೋಳದ, ಬಸವರಾಜ್ ರಾಜೂರು ಸೇರಿದಂತೆ ಬಿಜೆಪಿ ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ರೈತರು ಉಪಸ್ಥಿತರಿದ್ದರು.

# ಬಿಜೆಪಿ ಪಕ್ಷ ಸಂಘಟನೆಗೆ ಶಕ್ತಿ ಕಂಡುಕೊಳ್ಳಲು: ಅರುಣ್ ಕರೆ

ಬೆಂಗಳೂರು: ರಾಜ್ಯಾದ್ಯಂತ ಭಾರತೀಯ ಜನತಾ ಪಕ್ಷದ ಸದಸ್ಯತಾ ಅಭಿಯಾನ ಕಾರ್ಯ ಮುಗಿದಿದ್ದು ಈಗ ಬೂತ್ ಮಟ್ಟದ ಸಮಿತಿಗಳನ್ನು ರಚನೆ ಮಾಡಬೇಕಿದೆ ಈ ನಿಟ್ಟಿನಲ್ಲಿ ರಾಯಚೂರು ಜಿಲ್ಲೆಯ ಎಲ್ಲಾ ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಬೂತ್ ಮಟ್ಟದಲ್ಲಿ ಹೆಜ್ಜೆ ಹಾಕಿ ಬೂತ್ ಅಧ್ಯಕ್ಷರನ್ನು ಸಂಪರ್ಕ ಮಾಡಲು ವಿಧಾನ ಪರಿಷತ್ತು ಶಾಸಕರು ಮತ್ತು ರಾಜ್ಯ ಬಿಜೆಪಿ ಕಾರ್ಯದರ್ಶಿಗಳಾದ ಡಿ.ಎಸ್.ಅರುಣ್ ರವರು ಕರೆ ನೀಡಿದರು.

ಅವರು ಇಂದು ರಾಯಚೂರು ನಗರ, ದೇವದುರ್ಗ ಮತ್ತು ರಾಯಚೂರು ಗ್ರಾಮಾಂತರ ಮಂಡಲ ಅಧ್ಯಕ್ಷರ ಮತ್ತು ಪ್ರಧಾನ ಕಾರ್ಯದರ್ಶಿಗಳ ಸಭೆಯಲ್ಲಿ ಮಾತನಾಡುತ್ತ ಬಿಜೆಪಿ ಶಿಸ್ತಿನ ಪಕ್ಷ ಅದನ್ನು ಸಂಘಟನಾತ್ಮಕವಾಗಿ ನಾವು ಬೆಳೆಸಬೇಕಿದೆ ರಾಜ್ಯದಲ್ಲಿ ಹಲವು ಜಿಲ್ಲೆಗಳಲ್ಲಿ ಬೂತ್ ಸಮಿತಿ ರಚನೆಗಳು ನಡೆಯುತ್ತಿದ್ದು ರಾಯಚೂರು ಜಿಲ್ಲೆಯೂ ಸಹ ಬೂತ್ ಸಮಿತಿಗಳನ್ನು ರಚಿಸಿಕೊಂಡು ತನ್ನ ಸ್ಥಾನವನ್ನು ಪ್ರಗತಿಗೊಳಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ರಾಯಚೂರು ನಗರ ಮಂಡಲ ಅಧ್ಯಕ್ಷರಾದ ಊಟ್ಕೂರು ರಾಘವೇಂದ್ರ, ದೇವದುರ್ಗ ಮಂಡಲ ಅಧ್ಯಕ್ಷರಾದ ಜಂಬಣ್ಣ ನಿಲೋಗಲ್, ರಾಯಚೂರು ಗ್ರಾಮಾಂತರ ಮಂಡಲ ಅಧ್ಯಕ್ಷರಾದ ಶಂಕರಗೌಡ ಮಿರ್ಜಾಪೂರು ಮತ್ತು ರಾಯಚೂರು ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಕಡಗೋಲು ರಾಮಚಂದ್ರ, ವಿಜಯಕುಮಾರ ಸಜ್ಜನ, ಪಲುಗುಲ ನಾಗರಾಜ , ರಾಯಚೂರು ಗ್ರಾಮಾಂತರ ಮಂಡಲ ಪ್ರಧಾನ ಕಾರ್ಯದರ್ಶಿ ಶಿವಕುಮಾರ ರವರು ಉಪಸ್ಥಿತಿ ಇದ್ದರು.

# ಎಲ್ಲ ಸರ್ಕಾರಗಳು ರೈತ ವಿರೋಧಿ, ಜನ ವಿರೋಧಿಯಾಗಿವೆ: ನಟ ಪ್ರಕಾಶ್ ರಾಜ್

**ದೇವನಹಳ್ಳಿ (ಬೆಂಗಳೂರು ಗ್ರಾಮಾಂತರ):** "ಎಲ್ಲ ಸರ್ಕಾರಗಳು ರೈತ ವಿರೋಧಿ, ಜನ ವಿರೋಧಿಯಾಗಿವೆ" ಎಂದು ಬಹುಭಾಷಾ ನಟ ಪ್ರಕಾಶ್ ರಾಜ್ ಆಕ್ರೋಶ ವ್ಯಕ್ತಪಡಿಸಿದರು.



ದೇವನಹಳ್ಳಿ ತಾಲೂಕು ಚನ್ನರಾಯಪಟ್ಟಣ ಹೋಬಳಿಯ ರೈತರು ಭೂಸ್ವಾಧೀನವನ್ನು ವಿರೋಧಿಸಿ ಹಮ್ಮಿಕೊಂಡಿದ್ದ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, "ಎಲ್ಲ ರಾಜಕಾರಣಿಗಳಿಗೂ ರೈತರು ಚುನಾವಣೆಯಲ್ಲಿ ವೋಟು ಹಾಕುವ ಬಟನ್‌ಗಳಷ್ಟೇ ಆಗಿದ್ದಾರೆ ಹೊರತು ಬೇರೆ ಏನೂ ಅಲ್ಲ. ಇದನ್ನು ಸಹಿಸಿಕೊಂಡಿರುವುದಕ್ಕೆ ಆಗುವುದಿಲ್ಲ, ಹೋರಾಟ ನಡೆಯಬೇಕು" ಎಂದರು.

"ಫಲವತ್ತಾದ ಭೂಮಿ ಮೇಲೆ ಕೈಗಾರಿಕೆಗಳನ್ನು ಕಟ್ಟುತ್ತಾ ಹೋದರೆ ಹೊಟ್ಟೆಗೆ ಏನು ತಿಂತಿರಾ. ರೈತನಿಗೆ ಭೂಮಿ ಆಸ್ತಿಯಲ್ಲ, ಅದು ಅವನ ಬದುಕು, ಸ್ವಾಭಿಮಾನ, ಗುರುತು ಮತ್ತು ಅವನ ಹೆಮ್ಮೆ. ಅದನ್ನು ನೀವು ಹೇಗೆ ಕಿತ್ತುಕೊಳ್ಳುತ್ತೀರಿ. ಬಂಡವಾಳಶಾಹಿಗಳಿಗೆ ರೈತನ ಮತ್ತು ಭೂಮಿ ನಡುವಿನ ಸಂಬಂಧ ಅರ್ಥವಾಗುವುದಿಲ್ಲ" ಎಂದು ಕಿಡಿಕಾರಿದರು.

"ಇಲ್ಲಿ ಹೋರಾಡುತ್ತಿರುವ ರೈತರು ನೂರಾರು ಎಕರೆ ಜಮೀನು ಇಟ್ಟುಕೊಂಡವರಲ್ಲ, ಅವರಿಗಿರುವುದು ಒಂದೆರಡು ಎಕರೆ ಮಾತ್ರ. ಅದರೊಳಗೆ ಈ ರೈತರು ಬದುಕುತ್ತಿದ್ದಾರೆ.

ಸರ್ಕಾರದವರು ಯಾರೂ ಅವರಿಗೆ ಕೆಲಸ ಕೊಡುತ್ತಿಲ್ಲ. ರೈತರು ಸ್ವಂತ ಕಾಲ ಮೇಲೆ ನಿಂತುಕೊಂಡು ಭೂಮಿ ಜೊತೆಗೆ ಮಾತನಾಡುತ್ತಾ, ತಲತಲಾಂತರದಿಂದ ಬದುಕನ್ನು ಕಟ್ಟಿಕೊಂಡು ಭವಿಷ್ಯ ನೋಡಿಕೊಳ್ಳುತ್ತಿರುವವರು" ಎಂದು ಪ್ರಕಾಶ್ ರಾಜ್ ರೈತರ ಪರ ಧ್ವನಿ ಎತ್ತಿದರು.

# 17 ಪರೀಕ್ಷೆ ನಡೆಸಿ, ಫಲಿತಾಂಶ ಪ್ರಕಟಿಸಿದ ಕೆಇಎ 20 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳ ಅರ್ಜಿ ನಿರ್ವಹಣೆ

**ಬೆಂಗಳೂರು:** ಕರ್ನಾಟಕ ಪರೀಕ್ಷಾ ಪ್ರಾಧಿಕಾರವು 2024ನೇ ಸಾಲಿನಲ್ಲಿ ಎರಡು ಪಿಎಸ್‌ಐ, ಕೆ–ಸೆಟ್ ಸೇರಿದಂತೆ ಒಟ್ಟು 17 ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ, 6,052 ಮಂದಿ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್ ಪ್ರಸನ್ನ ತಿಳಿಸಿದ್ದಾರೆ.

ವರ್ಷದ ಸಾಧನೆ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ಪ್ರಾಧಿಕಾರವು ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸುಗಳಿಗೆ ಪ್ರವೇಶ ಪರೀಕ್ಷೆ, ಸೀಟು ಹಂಚಿಕೆ, ಪ್ರವೇಶ ಪ್ರಕ್ರಿಯೆ ಇತ್ಯಾದಿಗಳನ್ನು ಎಂದಿನಂತೆ ನಿರ್ವಹಿಸುತ್ತಿದೆ. ಇವುಗಳ ಜತೆಗೆ ಸರ್ಕಾರದ ನಾನಾ ಇಲಾಖೆಗಳ ನೇಮಕಾತಿ ಪರೀಕ್ಷೆಗಳನ್ನು ಕೂಡ ನಿಭಾಯಿಸಲಾಗುತ್ತಿದೆ. ಈ ಮೂಲಕ ಕಳೆದೊಂದು ವರ್ಷದಲ್ಲಿ 20 ಲಕ್ಷಕ್ಕೂ ಅರ್ಜಿಗಳನ್ನು ನಿರ್ವಹಿಸಲಾಗಿದೆ. ಪ್ರಾಧಿಕಾರದ ಮೂರು ದಶಕಗಳಿಗೂ ಹೆಚ್ಚಿನ ಇತಿಹಾಸದಲ್ಲಿ ಇದೊಂದು ದಾಖಲೆಯಾಗಿದೆ" ಎಂದಿದ್ದಾರೆ.

ಒಂದೇ ವರ್ಷದಲ್ಲಿ ಇಷ್ಟೊಂದು ಪರೀಕ್ಷೆಗಳನ್ನು ನಡೆಸಿದ್ದು ಮತ್ತು ಅದೇ ವರ್ಷದಲ್ಲೇ ಅವುಗಳ ಫಲಿತಾಂಶ ಕೂಡ ಕೊಟ್ಟಿದ್ದು ಒಂದು ರೀತಿ ದಾಖಲೆ. ಅಕ್ರಮಗಳಿಗೆ ಅವಕಾಶ ಇಲ್ಲದಂತೆ ಅತ್ಯಂತ ಪಾರದರ್ಶಕವಾಗಿ ಪರೀಕ್ಷೆಗಳನ್ನು ನಡೆಸಿದ್ದು ಕೂಡ ಸಮಾಧಾನ ತಂದಿದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ತೀವ್ರ ಕುತೂಹಲ ಕೆರಳಿಸಿದ್ದ 947 ಹುದ್ದೆಗಳ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಪರೀಕ್ಷೆಯನ್ನು ಎರಡು ಹಂತದಲ್ಲಿ (ಒಮ್ಮೆ 545, ಮತ್ತೊಮ್ಮೆ 402 ಹುದ್ದೆ) ಮಾಡಲಾಯಿತು. ಬ್ಲೂ ಟೂತ್ ಸೇರಿದಂತೆ ಇತರ ಆಧುನಿಕ ಎಲೆಕ್ಟ್ರಾನಿಕ್ ಉಪಕರಣಗಳನ್ನು ಬಳಸಿ, ಪರೀಕ್ಷಾ ಅಕ್ರಮ ಎಸಗಲು ಪ್ರಯತ್ನಿಸುವ ಸುಳಿವು ಅರಿತು, ಕ್ಯಾಮರಾ ಕಣ್ಗಾವಲಿನಲ್ಲಿ ಪರೀಕ್ಷೆಗಳನ್ನು ನಡೆಸಿದ್ದು ಕೂಡ ಈ ವರ್ಷದ ವಿಶೇಷ ಎಂದು ಅವರು ವಿವರಿಸಿದ್ದಾರೆ.

ಇದರ ಒಂದು ಭಾಗವಾಗಿ ಪ್ರತಿಯೊಂದು ಪರೀಕ್ಷಾ ಕೊಠಡಿಗಳ ಮೇಲೆ ನಿಗಾ ಇಡಲು ವೆಬ್ ಕಾಸ್ಟಿಂಗ್ ಮಾಡಲಾಯಿತು. ಬೆಂಗಳೂರಿನ ಕೆಇಎ ಕಚೇರಿಯಲ್ಲಿ ಕುಳಿತು ಇಡೀ ರಾಜ್ಯದ ಪರೀಕ್ಷಾ ಕೇಂದ್ರಗಳ ಮೇಲೆ ನಿಯಂತ್ರಣ ಸಾಧಿಸಲಾಯಿತು. ಎಲ್ಲೇ ತಪ್ಪಾದರೂ ತಕ್ಷಣ ಎಚ್ಚರಿಸುವ ವ್ಯವಸ್ಥೆ ಇದಾಗಿದ್ದ ಕಾರಣ ಅಕ್ರಮಗಳಿಗೆ ಅವಕಾಶವೇ ಇಲ್ಲದಂತೆ ನೋಡಿಕೊಳ್ಳಲಾಯಿತು ಎಂದು ಅವರು ವಿವರಿಸಿದ್ದಾರೆ.

2024ರಲ್ಲಿ ಅಧಿಸೂಚನೆ ಹೊರಡಿಸಿದ್ದಲ್ಲದೆ, 2022 ಮತ್ತು 2023ರಲ್ಲಿ ಅಧಿಸೂಚನೆ ಹೊರಡಿಸಿದ್ದ ಪರೀಕ್ಷೆಗಳನ್ನೂ ಈ ವರ್ಷದಲ್ಲಿ ಪೂರ್ಣಗೊಳಿಸಿದ ತೃಪ್ತಿ ಇದೆ. ಈ ಮೂಲಕ ಕೆಇಎ ಮುಂದೆ ಇದ್ದ ಬಹುತೇಕ ಎಲ್ಲ ನೇಮಕಾತಿ ಪರೀಕ್ಷೆಗಳು ಮುಗಿದಿವೆ ಎಂದು ಅವರು ಹೇಳಿದರು.

# ತರಬೇತಿಗೆ ಅರ್ಜಿ ಆಹ್ವಾನ

ಚಾಮರಾಜನಗರ: ಕೊಳ್ಳೇಗಾಲ ತಾಲೂಕು ಪರಿಶಿ?ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಬುಟ್ಟಿ (ಬ್ಯಾಗ್) ತಯಾರಿಕಾ ತರಬೇತಿ, ಎಂಬ್ರೈಡಿಂಗ್, ಉಲ್ಲನ್, ಟೈಲರಿಂಗ್, ಲಘುವಾಹನ ತರಬೇತಿ, ಗಂಧದಕಡ್ಡಿ, ಮೇಣದ ಬತ್ತಿ ತಯಾರಿಕೆ ಮತ್ತು ಇತರೆ ತರಬೇತಿಗಾಗಿ ಪರಿಶಿ?ಟ ವರ್ಗದ ನಿರುದ್ಯೋಗಿ ಯುವಕ, ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು ಪರಿಶಿ?ಟ ವರ್ಗಕ್ಕೆ ಸೇರಿದವರಾಗಿರಬೇಕು. ಅಭ್ಯರ್ಥಿಯು 18 ರಿಂದ 40ರ ವಯೋಮಿತಿ ಒಳಗಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಕುಟುಂಬದ ಆದಾಯವು 2.50 ಲಕ್ಷ ರೂ. ಮೀರಿರಬಾರದು. ಯಾವುದೇ ವಿದ್ಯಾಸಂಸ್ಥೆಯಲ್ಲಿ ವ್ಯಾಸಂಗ ಅಥವಾ ತರಬೇತಿ ಪಡೆಯುತ್ತಿರಬಾರದು. ಲಘುವಾಹನ ಚಾಲನಾ ತರಬೇತಿಗೆ ಕನಿ?ಟ 7ನೇ ತರಗತಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಯ ಆಯ್ಕೆಯು ಸಾರಿಗೆ ಇಲಾಖೆಯ ನಿಯಮಕ್ಕೆ ಒಳಪಟ್ಟಿರುತ್ತದೆ.


ಎಲ್ಲಾ ಜೆರಾಕ್ಸ್ ಪ್ರತಿಗಳಿಗೆ ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು. ಒಬ್ಬ ಅಭ್ಯರ್ಥಿಯು ಒಂದು ತರಬೇತಿಗೆ ಮಾತ್ರ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜನವರಿ 6 ಕೊನೆಯದಿನವಾಗಿದೆ. ಒಂದು ತರಬೇತಿ ನೀಡಲು ಕನಿ? 10 ಅಭ್ಯರ್ಥಿಗಳಿಂದ ಅರ್ಜಿ ಸ್ವೀಕೃತವಾಗಿದ್ದರೆ ಮಾತ್ರ ತರಬೇತಿ ನೀಡಲಾಗುವುದು ಎಂದು ಕೊಳ್ಳೇಗಾಲ ತಾಲೂಕು ಪರಿಶಿ?ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಮಾಣು ವಿದ್ಯುತ್ ಸ್ಥಾವರಕ್ಕೆ ಭೂಮಿ ಹುಡುಕಾಟ

**ಕೊಪ್ಪಳ:** ರಾಜ್ಯದ ಎರಡನೇ ಪರಮಾಣು ವಿದ್ಯುತ್ ಸ್ಥಾವರ ನಿರ್ಮಾಣಕ್ಕೆ ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾಡಳಿತ ಭೂಮಿ ಹುಡುಕುವ ಪ್ರಕ್ರಿಯೆ ಪ್ರಾರಂಭ ಮಾಡಿದ್ದು ಸಾರ್ವಜನಿಕರಲ್ಲಿ ಆತಂಕ ಮನೆ ಮಾಡಿದೆ.

ಈಗಾಗಲೇ ಗಂಗಾವತಿ ಅವರು ತಹಸೀಲ್ದಾರ್ ತಾಲೂಕಿನ ಹಿರೇ ಬೇಣಕಲ್ ಗ್ರಾಮದ ಸುತ್ತಮುತ್ತಲಿನ ಸುಮಾರು 1200 ಎಕರೆ ಪ್ರದೇಶವನ್ನು ಗುರುತಿಸಿ ಪ್ರಾಥಮಿಕ ವರದಿ ನೀಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಗಂಗಾವತಿ ತಾಲೂಕಿನ ಹಿರೇ ಬೇಣಕಲ್ ಸುತ್ತಮುತ್ತಲಿನ ಪ್ರದೇಶವು ಫಲವತ್ತಾದ ಭೂಮಿ ಅಲ್ಲದೇ ಕೆಲವು ಪ್ರದೇಶಗಳು ಐತಿಹಾಸಿಕ ತಾಣವಾಗಿ ಗುರುತಿಸಲ್ಪಟ್ಟಿದ್ದು ಸಹಜವಾಗಿ ಪರಮಾಣು ಸ್ಥಾವರ ನಿರ್ಮಾಣ ಕುರಿತು ಸ್ಥಳೀಯರಲ್ಲಿ ತೀವ್ರ ಆತಂಕ ತಂದಿದೆ. ವಿರೋಧವೂ ವ್ಯಕ್ತವಾಗಿದೆ



ಎನ್ನಲಾಗಿದೆ.

ರಾಜ್ಯದಲ್ಲಿ ಪರಮಾಣು ವಿದ್ಯುತ್ ಸ್ಥಾವರ ನಿರ್ಮಾಣಕ್ಕಾಗಿ ಕೇಂದ್ರ ಸರ್ಕಾರವು ಕೊಪ್ಪಳ ಮತ್ತು ರಾಯಚೂರು ಜಿಲ್ಲೆಯ ಅಧಿಕಾರಿಗಳಿಗೆ 1200 ಎಕರೆ ಭೂಮಿ ಹುಡುಕಿಕೊಡುವಂತೆ ಪತ್ರ ಬರೆದಿದ್ದು ಅದರಂತೆ ಕೊಪ್ಪಳ ಮತ್ತು ರಾಯಚೂರು ಎರಡೂ ಜಿಲ್ಲೆಯಲ್ಲಿ ಭೂಮಿ ಗುರುತಿಸುವ ಪ್ರಕ್ರಿಯೆ ನಡೆದಿದೆ.

ಅದರಂತೆ ಗಂಗಾವತಿ ತಹಸೀಲ್ದಾರ್ ತಾಲೂಕಿನಲ್ಲಿ ಲಭ್ಯವಿರುವ ಭೂಮಿ ಗುರುತಿಸಿ ಈಗಾಗಲೇ ಜಿಲ್ಲಾಧಿಕಾರಿಗಳಿಗೆ ವರದಿ ನೀಡಿದ್ದಾರೆ. ಎಲ್ಲವೂ ಅಂತಿಮವಾದರೆ ರಾಜ್ಯದಲ್ಲಿ ಎರಡನೇ ಪರಮಾಣು ವಿದ್ಯುತ್ ಸ್ಥಾವರ ಘಟಕದ ನಿರ್ಮಾಣ ಕಾರ್ಯಕ್ಕೆ ಚಾಲನೆ ಸಿಗಲಿದೆ.

# 100ನೇ ಉಡಾವಣೆಗೆ ನಾವು ಸಜ್ಜಾಗಿದ್ದೇವೆ

**ನವದೆಹಲಿ:** ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಜನವರಿ 2025ರಲ್ಲಿ ಜಿಯೋಸಿಂಕ್ರೋನಸ್ ಸ್ಯಾಟಲೈಟ್ ಲಾಂಚ್ ವೆಹಿಕಲ್ (ಜಿಎಸ್ಎಲ್ವಿ) ನಲ್ಲಿ ಎನ್ವಿಎಸ್–02 ಉಪಗ್ರಹ ಉಡಾವಣೆ ಮಾಡಲು ತಯಾರಿ ನಡೆಸುತ್ತಿದೆ. ಇಸ್ರೋ ಮುಖ್ಯಸ್ಥ ಎಸ್ ಸೋಮನಾಥ್ ಅವರು ಮುಂದಿನ ವರ್ಷಕ್ಕೆ ಯೋಜಿಸಲಾದ ಹಲವಾರು ಕಾರ್ಯಾಚರಣೆಗಳಲ್ಲಿ ಈ ಮಿಷನ್ ಒಂದಾಗಿದೆ. ಸ್ಪಡೆಕ್ಸ್ ಮತ್ತು ಇತರ ಪೇಲೋಡ್‌ಗಳನ್ನು ಹೊತ್ತೊಯ್ದ ಪಿಎಸ್ಎಲ್ವಿ – ಸಿ60 ಯಶಸ್ವಿ ಉಡಾವಣೆ ಬಳಿಕ ಸೋಮನಾಥ್ ಈ ಘೋಷಣೆ ಮಾಡಿದ್ದಾರೆ.

ಮೇ 29, 2023 ರಂದು GSLV-F12 ರಾಕೆಟ್ ಓಗಿಖ–01 ಉಪಗ್ರಹವನ್ನು ಜಿಯೋಸಿಂಕ್ರೊನಸ್ ಟ್ರಾನ್ಸ್‌ಫರ್ ಆರ್ಬಿಟ್ (ಉಖಿಔ) ಯಶಸ್ವಿಯಾಗಿ ಉಡಾವಣೆ ಮಾಡಲಾಗಿದೆ. ಓಗಿಖ–01 ಉಪಗ್ರಹವು ಸ್ಥಳೀಯ ಪರಮಾಣು ಗಡಿಯಾರವನ್ನು ಹೊಂದಿದೆ. ಇದು ಭಾರತೀಯ ನಕ್ಷತ್ರಪುಂಜದೊಂದಿಗೆ (ಓಂಗಿಖಅ) ನ್ಯಾವಿಗೇಷನ್ ಸಾಮರ್ಥ್ಯ ಹೆಚ್ಚಿಸುತ್ತದೆ. ಇದು ವ್ಯಾಪಕ ಸೇವಾ ವ್ಯಾಪ್ತಿಗಾಗಿ ಐ1 ಬ್ಯಾಂಡ್ ಸಿಗ್ನಲ್ ಅನ್ನು ಒಳಗೊಂಡಿದೆ. ಓಗಿಖ–02 ಮಿಷನ್ ಈ ಪ್ರಗತಿಯನ್ನು ಮುಂದುವರೆಸುವ ನಿರೀಕ್ಷೆಯಿದೆ. ಸುಧಾರಿತ ವೈಶಿಷ್ಟ್ಯಗಳೊಂದಿಗೆ ಓಂಗಿಖಅ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಇಸ್ರೋ ಮುಖ್ಯಸ್ಥ ಸೋಮನಾಥ್ ಹೇಳಿದ್ದಾರೆ

**ಚಂದ್ರಯಾನ–4 ಮಿಷನ್:** ಈ ಸಂದರ್ಭದಲ್ಲಿ, ಇಸ್ರೋ ಮುಖ್ಯಸ್ಥರು ಚಂದ್ರಯಾನ – 4 ಮಿಷನ್ ಬಗ್ಗೆ ಮಾಹಿತಿ ನೀಡಿದರು. ಇದು ವಿವಿಧ ಮಾಡ್ಯೂಲ್‌ಗಳನ್ನು ಒಳಗೊಂಡಿದೆ. ಇದನ್ನು ವಿವಿಧ ಸಮಯಗಳಲ್ಲಿ ಉಡಾವಣೆ ಮಾಡಲಾಗುತ್ತದೆ ಮತ್ತು ಎರಡು ವಿಭಿನ್ನ ಮಾಡ್ಯೂಲ್‌ಗಳಾಗಿ ಸಂಯೋಜಿಸಲಾಗುತ್ತದೆ. ಈ ಮಾಡ್ಯೂಲ್‌ಗಳು ಕಕ್ಷೆಯನ್ನು ತಲುಪಬೇಕು ಮತ್ತು ನಂತರ ಭೂಮಿಯ ಕಕ್ಷೆ ಮತ್ತು ಚಂದ್ರನ ಕಕ್ಷೆ ಎರಡರಲ್ಲೂ ಡಾಕ್ ಮಾಡಬೇಕಾಗುತ್ತದೆ ಎಂದು ಅವರು ಹೇಳಿದರು.

**ಜನವರಿ 7 ರೊಳಗೆ ಡಾಕಿಂಗ್ ಪೂರ್ಣ:** ಚಂದ್ರಯಾನ–4ರ ಗುರಿ ಚಂದ್ರನ ಮೇಲೆ ಇಳಿದು ಯಶಸ್ವಿಯಾಗಿ ಮರಳುವುದು. ಅಂತಿಮ ಡಾಕಿಂಗ್ ಪ್ರಕ್ರಿಯೆಯು ಜ.7, 2025ರ ಸುಮಾರಿಗೆ ಪೂರ್ಣ ಗೊಳ್ಳುವ ನಿರೀಕ್ಷೆಯಿದೆ. ಇದು ಚಂದ್ರಯಾನ – 4 ರ ಪರೀಕ್ಷಾ ತಾಣವಾಗಿದೆ. ಡಾಕಿಂಗ್ ಪ್ರಕ್ರಿಯೆ ಮಂಗಳವಾರದಿಂದ ಪ್ರಾರಂಭವಾಗುತ್ತದೆ ಮತ್ತು ಹಲವಾರು ಕಾರ್ಯವಿಧಾನಗಳು ನಡೆಯುತ್ತವೆ. ಆದರೆ, ಅಂತಿಮ ಡಾಕಿಂಗ್ ಬಹುಶಃ ಜನವರಿ 7 ರೊಳಗೆ ಸಂಭವಿಸುತ್ತದೆ ಎಂದು ಇಸ್ರೋ ಮುಖ್ಯಸ್ಥರು ತಿಳಿಸಿದ್ದಾರೆ.

**100ನೇ ಉಡಾವಣೆಗೆ ಇಸ್ರೋ ಸಿದ್ಧತೆ:** ಇಸ್ರೋದ 99ನೇ ಉಡಾವಣೆ ಬಗ್ಗೆ ಹೆಮ್ಮೆಪಟ್ಟ ಸೋಮನಾಥ್, ಇದೊಂದು ಮಹತ್ವದ ಮೈಲಿಗಲ್ಲಾಗಿದ್ದು, ಮುಂದಿನ ವರ್ಷ 100ನೇ ಉಡಾವಣೆಗೆ ಸಿದ್ಧತೆ ನಡೆಸಲಾಗುತ್ತಿದೆ ಎಂದರು. ಸೋಮವಾರ ರಾತ್ರಿ ಕಖಐಗಿ – ಅ60 ಎರಡು ಸ್ಪಾಡೆಕ್ಸ್ ಉಪಗ್ರಹಗಳನ್ನು ಯಶಸ್ವಿಯಾಗಿ ಉಡಾವಣೆ ಮಾಡಿದೆ.

**ಮಿಷನ್‌ನ ಯಶಸ್ಸಿನ ಬಗ್ಗೆ ಡಾ.ಜಿತೇಂದ್ರ ಸಿಂಗ್ ಸಂತಸ :** ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಈ ಮಿಷನ್ ಯಶಸ್ವಿಯಾಗಿರುವ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾರೆ. ಬಾಹ್ಯಾಕಾಶ ಡಾಕಿಂಗ್ ಮಾಡುವ ಆಯ್ದ ದೇಶಗಳಿಗೆ ಭಾರತ ಈಗ ಸೇರ್ಪಡೆಯಾಗಿದೆ. ಈ ಸಾಧನೆಯು ಭಾರತದ ಗುರಿಯಾದ 'ಸ್ವಾವಲಂಬಿ ಭಾರತ'ದತ್ತ ಮಹತ್ವದ ಹೆಜ್ಜೆಯಾಗಿದೆ. ಖಿಆಚಿಜಚಿಥ ಮಿಷನ್ ಬಾಹ್ಯಾಕಾಶದಲ್ಲಿ ಎರಡು ಉಪಗ್ರಹಗಳನ್ನು ಡಾಕ್ ಮಾಡುವ ಗುರಿಯನ್ನು ಹೊಂದಿದೆ. ಇದು ಭವಿಷ್ಯದ ಬಾಹ್ಯಾಕಾಶ ಕಾರ್ಯಾಚರಣೆಗಳಿಗೆ ಪ್ರಮುಖ ತಂತ್ರಜ್ಞಾನವಾಗಿದೆ ಎಂದು ಅವರು ಹೇಳಿದರು.

# ಪಂಜಾಬ್ ಗಡಿಯಲ್ಲಿ ಪಾಕಿಸ್ತಾನದ ಡ್ರೋನ್ ವಶಕ್ಕೆ ಪಡೆದ ಬಿಎಸ್‌ಎಫ್



**ಅಮೃತಸರ:** ಪಂಜಾಬ್ ಗಡಿಯಲ್ಲಿ ಬಿಎಸ್‌ಎಫ್ ಯೋಧರು ಪಾಕಿಸ್ತಾನದ ಮೂರು ಸುಧಾರಿತ ತಂತ್ರಜ್ಞಾನದ ಡ್ರೋನ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ನಗರ ಸಮೀಪದ ರಜತಲ್ ಗ್ರಾಮದಲ್ಲಿ ಈ ಡ್ರೋನ್‌ಗಳನ್ನು ವಶಕ್ಕೆ ಪಡೆದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸುಧಾರಿತ ತಂತ್ರಜ್ಞಾನ ಬಳಕೆ ಮಾಡಿ ಈ ಡ್ರೋನ್‌ಗಳನ್ನು ಬಿಎಸ್‌ಎಫ್ ಪರಿಣಾಮಕಾರಿಯಾಗಿ ತಟಸ್ಥಗೊಳಿಸಿದೆ. ಹಾಗೇ ಮಾದಕವಸ್ತು ಕಳ್ಳಸಾಗಣೆಗೆ ಬಳಸದಂತೆ ತಡೆಯಲಾಗಿದೆ ಎಂದು ಬಿಎಸ್‌ಎಫ್ ತಿಳಿಸಿದೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಬಿಎಸ್‌ಎಫ್ ಪಂಜಾಬ್, ಇಂದಿನ ಮಹತ್ವದ ಕಾರ್ಯಾಚರಣೆಯಲ್ಲಿ ಬಿಎಸ್‌ಎಫ್ ಪಂಜಾಬ್ ಪಡೆ ಎರಡು ಡಿಜೆಐ ಮ್ಯಾಟ್ರಿಕ್ ಆರ್‌ಟಿಕೆ ಡ್ರೋನ್ ಮತ್ತು ಡಿಜೆಐ ಮ್ಯಾವಿಕ್ 3 ಕ್ಲಾಸಿಕ್ ಸೇರಿದಂತೆ 3 ಡ್ರೋನ್‌ಗಳನ್ನ ಪಂಜಾಬ್ ಗಡಿಯ ರಜತಲ್ ಗ್ರಾಮದಲ್ಲಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದೆ. ಗಡಿಯಲ್ಲಿ ಭದ್ರತೆ ಬಿಗಿಗೊಳಿಸುವಲ್ಲಿ, ಹಾಗೇ ಗಡಿದಾಟಿ ನಡೆಯುವ ಮಾದಕ ವಸ್ತು ಕಳ್ಳ ಸಾಗಣೆ ಚಟುವಟಿಕೆ ತಡೆಗೂ ಬಿಎಸ್‌ಎಫ್ ಪಂಜಾಬ್ ಬದ್ಧವಾಗಿದೆ ಎಂದು ಅದು ತಿಳಿಸಿದೆ.

ಈ ನಡುವೆ ಬಿಎಸ್‌ಎಫ್ ಪಂಜಾಬ್ ಪೊಲೀಸರೊಂದಿಗೆ ಕೂಡ ಸಂಯೋಜನೆ ಮಾಡಿಕೊಂಡು, ತರ್ನ್ ತರನ್ ಜಿಲ್ಲೆಯ ಗಡಿ ಪ್ರದೇಶದಲ್ಲಿ ಹೆರಾಯಿನ್ ಅನ್ನು ವಶಕ್ಕೆ ಪಡೆದಿದೆ ಎಂದು ಬಿಎಸ್‌ಎಫ್ ತಿಳಿಸಿದೆ. ಬಿಎಸ್‌ಎಫ್ ಗುಪ್ತಚರ ದಳಕ್ಕೆ ಲಭ್ಯವಾದ ಮಾಹಿತಿ ಆಧಾರದ ಮೇಲೆ ಬಿಎಸ್‌ಎಫ್ ಪಡೆ ಜೊತೆಗೆ ಪಂಜಾಬ್ ಪೊಲೀಸ್ ಜಂಟಿಯಾಗಿ ಕಾರ್ಯಾಚರಣೆ ನಡೆಸಿದ್ದು, 543 ಗ್ರಾಂನಷ್ಟು ಹೆರಾಯಿನ್ ವಶಕ್ಕೆ ಪಡೆದಿದೆ ಎಂದು ಬಿಎಸ್‌ಎಫ್ ಪಂಜಾಬ್ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿದೆ.

# ಡಾ.ಮನಮೋಹನ್ ಸಿಂಗ್‌ಗೆ 'ಭಾರತ ರತ್ನ' ನೀಡುವಂತೆ ತೆಲಂಗಾಣ ವಿಧಾನಸಭೆ ನಿರ್ಣಯ

**ಹೈದರಾಬಾದ್:** ಒಂದೆಡೆ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನ ಬಳಿಕ ರಾಷ್ಟ್ರ ಮಟ್ಟದಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ನಡುವೆ ರಾಜಕೀಯದ ಚರ್ಚೆ ಜೋರಾಗಿದೆ. ಸಿಂಗ್ ಅವರ ಸ್ಮಾರಕ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದೆ. ಆದರೆ, ಅಂತಿಮ ವಿಧಿವಿಧಾನ ಜರುಗಿದ ದೆಹಲಿಯ ನಿಗಮಬೋಧ್ ಘಾಟ್‌ನಲ್ಲೇ ಮೆಮೋರಿಯಲ್ ನಿರ್ಮಾಣ ಮಾಡಬೇಕು ಎಂದು ಕಾಂಗ್ರೆಸ್ ಒತ್ತಾಯಿಸುತ್ತಿದೆ. ಈ ಮಧ್ಯೆ ತೆಲಂಗಾಣ ವಿಧಾನಸಭೆಯಲ್ಲಿ ಸೋಮವಾರ ಸಂತಾಪ ಸೂಚಿಸಲಾಯಿತು. ಆರ್ಥಿಕ ತಜ್ಞನಿಗೆ 'ಭಾರತ ರತ್ನ' ನೀಡಲು ಒತ್ತಾಯಿಸಿ ಕಾಂಗ್ರೆಸ್ ಮಂಡಿಸಿದ ನಿಲುವಳಿಗೆ ಸರ್ವಪಕ್ಷಗಳು ಅವಿರೋಧವಾಗಿ ಒಪ್ಪಿಗೆ ಸೂಚಿಸಿವೆ.



ಮುಖ್ಯಮಂತ್ರಿ ರೇವಂತ್ ರೆಡ್ಡಿ ಅವರು, ಮಾಜಿ ಪ್ರಧಾನಿಯ ಸಾಧನೆಗೆ ದೇಶದ ಅತ್ಯುನ್ನತ ಗೌರವವಾದ ಭಾರತ ರತ್ನವನ್ನು ನೀಡಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ ಬಳಿಕ ನಿಲುವಳಿ ಮಂಡಿಸಿದರು. ಈ ನಿರ್ಣಯಕ್ಕೆ ಎಲ್ಲ ವಿಪಕ್ಷಗಳೂ ಒಪ್ಪಿಗೆ ಸೂಚಿಸಿದ್ದರಿಂದ ಅವಿರೋಧವಾಗಿ ಅಂಗೀಕರಿಸಲಾಯಿತು. ನಿಲುವಳಿ ಮಂಡಿಸಿ ಮಾತನಾಡಿದ ಸಿಎಂ ರೇವಂತ್ ರೆಡ್ಡಿ, ಮಾಜಿ ಪ್ರಧಾನಿಯವರ ನಿಧನ ದೇಶಕ್ಕೆ ತುಂಬಲಾರದ ನಷ್ಟ. ಮನಮೋಹನ್ ಸಿಂಗ್ ನೇತೃತ್ವದ ಯುಪಿಎ ಸರ್ಕಾರವು ಜಾರಿಗೆ ತಂದ ಉದ್ಯೋಗ ಖಾತ್ರಿ ಯೋಜನೆ, ಮಾಹಿತಿ ಹಕ್ಕು, ಭೂಸ್ವಾಧೀನ ಕಾಯ್ದೆಗಳು ಮಹತ್ತರ ಮೈಲುಗಲ್ಲಾಗಿವೆ ಎಂದು ಬಣ್ಣಿಸಿದರು. ಸಿಂಗ್ ಅವರು ಪ್ರಧಾನಿಯಾಗಿದ್ದಾಗ ತೆಲಂಗಾಣಕ್ಕೆ ರಾಜ್ಯ ಸ್ಥಾನಮಾನ ನೀಡಿ, ಇಲ್ಲಿನ ಜನತೆಯ ಆಶೋತ್ತರಗಳನ್ನು ಈಡೇರಿಸಿದ ಮಹಾನ್ ನಾಯಕ. ಇದರ ಗೌರವಾರ್ಥವಾಗಿ ಹೈದರಾಬಾದ್‌ನಲ್ಲಿ ಅವರ ಪ್ರತಿಮೆ ಸ್ಥಾಪಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು.

ವಿಪಕ್ಷ ಭಾರತ ರಾಷ್ಟ್ರ ಸಮಿತಿ ಪರವಾಗಿ ಕಾರ್ಯಾಧ್ಯಕ್ಷ ಕೆ.ಟಿ. ರಾಮರಾವ್ ಅವರು ನಿರ್ಣಯವನ್ನು ಬೆಂಬಲಿಸಿದರು. ಸಿಂಗ್ ಅವರು "ಆಧುನಿಕ ಭಾರತದ ವಾಸ್ತುಶಿಲ್ಪಿ" ಎಂದು ಹೊಗಳಿದರು. ಜೊತೆಗೆ, ಮಾಜಿ ಪ್ರಧಾನಿ ಪಿ. ವಿ. ನರಸಿಂಹರಾವ್ ಅವರ ಸ್ಮಾರಕವನ್ನು ರಾಜಧಾನಿಯಲ್ಲಿ ಸ್ಥಾಪಿಸುವ ನಿರ್ಣಯವನ್ನೂ ವಿಧಾನ ಸಭೆಯು ಅಂಗೀಕರಿಸಬೇಕು ಎಂದು ಅವರು ಇದೇ ವೇಳೆ ಸರ್ಕಾರಕ್ಕೆ ಮನವಿ ಮಾಡಿದರು. ಪ್ರತಿಪಕ್ಷದ ನಾಯಕ ಕೆ. ಚಂದ್ರಶೇಖರ್ ರಾವ್ ಅವರು ಕಲಾಪಕ್ಕೆ ಗೈರಾಗಿದ್ದರು.

ಭಾರತದ ಆರ್ಥಿಕ ಸುಧಾರಣೆಗಳ ಶಿಲ್ಪಿ ಮನಮೋಹನ್ ಸಿಂಗ್ (92) ಅವರು ಡಿಸೆಂಬರ್ 26 ರಂದು ನವದೆಹಲಿಯ ಏಮ್ಸ್‌ನಲ್ಲಿ ನಿಧನರಾದರು.

# ವಿಮಾನದಲ್ಲಿ ಕಳಪೆ ಪ್ರಯಾಣಿಕ ಸೇವೆ ಮೋಹನ್‌ದಾಸ್ ಪೈ ಅಸಮಾಧಾನ

**ಬೆಂಗಳೂರು:** ಪ್ರಯಾಣಿಕರಿಗೆ ಅಸಮರ್ಪಕ ಹವಾನಿಯಂತ್ರಣ ವ್ಯವಸ್ಥೆ ನೀಡಿದ್ದಕ್ಕೆ ಇಂಡಿಗೋ ಏರ್‌ಲೈನ್ಸ್ ವಿರುದ್ಧ ಇನ್ಫೋಸಿಸ್ ಮಾಜಿ ಸಿಎಫ್‌ಒ ಟಿ. ವಿ. ಮೋಹನ್‌ದಾಸ್ ಪೈ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಡಿಸೆಂಬರ್ 29 ರಂದು ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ 'ಎಕ್ಸ್' ನಲ್ಲಿ ಈ ಬಗ್ಗೆ ಪೋಸ್ಟ್ ಮಾಡಿರುವ ಪೈ ಅವರು, 6ಇ 7407 ವಿಮಾನದಲ್ಲಿ ತಮಗೆ ಆದ ಕಹಿ ಅನುಭವವನ್ನು ಹಂಚಿಕೊಂಡಿದ್ದಾರೆ.

ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ನಿಂತಿದ್ದ ಅಷ್ಟೂ ಸಮಯ 6ಇ 7407ರಲ್ಲಿ ಎಸಿ ಇಲ್ಲದೇ ಕಷ್ಟ ಆಯಿತು. ಆದರೆ ಯಾವುದೇ ಅನ್ಯ ಮಾರ್ಗವಿರಲಿಲ್ಲ. ಈ ಸಂಬಂಧ ಪ್ರತಿಭಟನೆ ಮಾಡಬೇಕಾಯಿತು. ಪ್ರತಿಭಟನೆ ನಂತರವೇ ನಮ್ಮ ಅಳಲು ಕೇಳಲಾಯಿತು. ಬಳಿಕ ಟಾರ್ಮ್ಯಾಕ್‌ನ ಜನರೇಟರ್ ಬಳಸಿ ಎಸಿ ಚಾಲನೆಗೊಳಿಸಲಾಯಿತು. ಈ ನಿಮ್ಮ ಸೇವಾ ಧೋರಣೆ ಬದಲಾಯಿಸಿಕೊಳ್ಳಿ ಎಂದು ಅವರು ಬರೆದು ಕೊಂಡಿದ್ದಾರೆ.

ಈ ಬಗ್ಗೆ ಇಂಡಿಗೋ ಏರ್‌ಲೈನ್ಸ್ ಸ್ಪಷ್ಟನೆ ನೀಡಿದೆ. ಎಟಿಆರ್, ಫ್ರಾಂಕೋ – ಇಟಾಲಿಯನ್ ಮಾದರಿಯದ್ದಾಗಿದ್ದು, ವಿಮಾನ ಹಾರಾಟದಲ್ಲಿರುವಾಗ ಮಾತ್ರ ಹವಾನಿಯಂತ್ರಣ ವ್ಯವಸ್ಥೆ ಕಾರ್ಯನಿರ್ವಹಿಸುತ್ತದೆ.

ವಿಮಾನದ ಇಂಜಿನ್‌ಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಿದ ಕಾರಣ, ವಿಮಾನ ನೆಲದ ಮೇಲಿದ್ದಾಗ ಎಸಿ ಕಾರ್ಯನಿರ್ವಹಿಸುವುದಿಲ್ಲ ಮತ್ತು ಹವಾನಿಯಂತ್ರಣ ವ್ಯವಸ್ಥೆಗಳು ಕೆಲಸ ಮಾಡಲು ಅಗತ್ಯವಾದ ಹೈಡ್ರಾಲಿಕ್ ಒತ್ತಡ ಲಭ್ಯವಿಲ್ಲದ ಕಾರಣ ಅದು ಕಾರ್ಯನಿರ್ವಹಿಸುವುದಿಲ್ಲ ಎಂದು ವಿವರಣೆ ನೀಡಲಾಗಿದೆ. ಅಷ್ಟೇ ಅಲ್ಲ ವ್ಯವಸ್ಥೆಯಲ್ಲಿ ಕೂಲಿಂಗ ಫ್ಯಾನ್‌ಗಳು ವಿಮಾನದ ಪ್ರೊಪೆಲ್ಲರ್ ಅನ್ನು ಅವಲಂಬಿಸಿವೆ. ಅದು ನಿಲುಗಡೆ ಆಗಿದ್ದಾಗ ತಿರುಗುವುದಿಲ್ಲ ಎಂದು ಏರ್‌ಲೈನ್ಸ್ ಹೇಳಿಕೊಂಡಿದೆ. ಪೈ ಅವರು ಎತ್ತಿರುವ ಪ್ರಶ್ನೆಗಳನ್ನು, ಇರುವ ಸಮಸ್ಯೆಗಳ ಬಗ್ಗೆ ಸಂಬಂಧಿತ ತಂಡದ ಗಮನಕ್ಕೆ ತರಲಾಗುವುದು ಎಂಬ ಭರವಸೆಯನ್ನೂ ನೀಡಿದೆ.

# ಇಥಿಯೋಪಿಯಾ: ರಸ್ತೆ ಅಪಘಾತಕ್ಕೆ 66 ಬಲಿ

**ಅಡಿಸ್ ಅಬಾಬಾ:** ಇಲ್ಲಿಗೆ ಸುಮಾರು 300 ಕಿಮೀ ದೂರದ ಬೋನಾ ಜುರಿಯಾ ಪ್ರದೇಶದಲ್ಲಿ ಸಂಭವಿಸಿದ ಎರಡು ಭೀಕರ ರಸ್ತೆ ಅಪಘಾತದಲ್ಲಿ 66 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಅಲ್ಲದೆ ಕೆಲವರು ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇಥಿಯೋಪಿಯಾದ ದಕ್ಷಿಣ ಭಾಗದಲ್ಲಿ ಸಂಭವಿಸಿದ ಅಪಘಾತದಲ್ಲಿ ಜನರು ತುಂಬಿದ್ದ ಕಾರು ಮತ್ತು ರೈಲು ಅಪಘಾತಕ್ಕೀಡಾಗಿದೆ. ಡಿಕ್ಕಿಯ ರಭಸಕ್ಕೆ ಕಾರು ಮತ್ತು ಬಸ್ ಕಾಲುವೆಗೆ ಬಿದ್ದಿವೆ.

ಗೆಲಾನಾ ಸೇತುವೆ ಬಳಿ ಪ್ರಯಾಣಿಕರು ತುಂಬಿದ್ದ ಕಾರು ಮತ್ತು ಬಸ್ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಎರಡೂ ವಾಹನಗಳು ಕಾಲುವೆಗೆ ಬಿದ್ದಿವೆ. ಸ್ಥಳೀಯ ಜನರು ತಕ್ಷಣ ರಕ್ಷಣಾ ಕಾರ್ಯಾಚರಣೆಯನ್ನು ಆರಂಭಿಸಿದ್ದಾರೆ. ನೀರಿನಲ್ಲಿ ಮುಳುಗಿದ ಜನರ ಪ್ರಾಣ ರಕ್ಷಣೆ



ಮಾಡಿದ್ದಾರೆ .ಆದರೆ ಅಷ್ಟರಲ್ಲಿ 66 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಘಟನೆಗಳಲ್ಲಿ ಗಾಯಗೊಂಡವರಿಗೆ ಬೋನ ಜನರಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತದೆ.

# ಪ್ರಶಾಂತ್ ಕಿಶೋರ್ ವಿರುದ್ಧ ಎಫ್‌ಐಆರ್

**ಪಾಟ್ನಾ:** ಹಿಂಸಾತ್ಮಕ ಪ್ರತಿಭಟನೆಗಿಳಿಯುವಂತೆ ವಿದ್ಯಾರ್ಥಿಗಳಿಗೆ ಪ್ರಚೋದನೆ ನೀಡಿದ ಆರೋಪದ ಮೇಲೆ ರಾಜಕೀಯ ತಂತ್ರಜ್ಞ ಹಾಗೂ ಜನ ಸುರಾಜ್ ಪಕ್ಷದ ಮುಖ್ಯಸ್ಥ ಪ್ರಶಾಂತ್ ಕಿಶೋರ್ ವಿರುದ್ಧ ಸೋಮವಾರ ಎಫ್‌ಐಆರ್ ದಾಖಲಿಸಲಾಗಿದೆ.

70ನೇ ಬಿಪಿಎಸ್‌ಸಿ ಪರೀಕ್ಷೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಪ್ರತಿಭಟನೆ ನಡೆಸುತ್ತಿದ್ದ ಅಭ್ಯರ್ಥಿಗಳ ಮೇಲೆ ಪೊಲೀಸರು ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿರುವ ಪ್ರಶಾಂತ್, ಪೊಲೀಸರ ವಿರುದ್ಧ ಪ್ರತಿ ಎಫ್‌ಐಆರ್ ದಾಖಲಿಸುವುದಾಗಿ ಹೇಳಿದ್ದಾರೆ.

ಪ್ರತಿಭಟನಾ ನಿರತ ಅಭ್ಯರ್ಥಿಗಳ ಮೇಲೆ ಪೊಲೀಸರು ನಡೆಸಿದ ಲಾಠಿ ಪ್ರಹಾರವನ್ನು ಪ್ರಶ್ನಿಸಿ ನ್ಯಾಯಾಲಯ ಮತ್ತು ಮಾನವ ಹಕ್ಕುಗಳ ಆಯೋಗವನ್ನು ಸಂಪರ್ಕಿಸುವುದಾಗಿ ಕಿಶೋರ್ ಘೋಷಿಸಿದ್ದಾರೆ. ಪ್ರತಿಭಟನಾಕಾರರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಕ್ಕಾಗಿ ಅವರು ಸರ್ಕಾರವನ್ನು ಟೀಕಿಸಿದರು. "ಲಾಠಿಚಾರ್ಜ್‌ಗೆ ಆದೇಶಿಸಿದ ನಗರ ಪೊಲೀಸ್ ವರಿಷ್ಠಾಧಿಕಾರಿ ವಿರುದ್ಧ ನ್ಯಾಯಾಲಯ ಮತ್ತು ಮಾನವ ಹಕ್ಕುಗಳ



ಆಯೋಗದಲ್ಲಿ ದೂರು ನೀಡಲಿದ್ದೇನೆ" ಎಂದು ಕಿಶೋರ್ ಹೇಳಿದ್ದಾರೆ. ಸಮವಸ್ತ್ರ ಅಥವಾ ಕುರ್ತಾ ಪೈಜಾಮಾ ಧರಿಸಿದ ಯಾರಿಗೂ ನಾನು ಹೆದರುವುದಿಲ್ಲವೆಂದು ಹೇಳಿದ ಕಿಶೋರ್, ಆಡಳಿತ ಮತ್ತು ರಾಜಕೀಯ ವ್ಯಕ್ತಿಗಳನ್ನು ಎದುರಿಸುವುದಾಗಿ ಸಂಕಲ್ಪ ಮಾಡಿರುವುದಾಗಿ ಹೇಳಿದ್ದಾರೆ.

ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಇತರ ಅಕ್ರಮಗಳ ಆರೋಪದ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸುವುದು ಸೇರಿದಂತೆ ಐದು ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿ ಬಿಹಾರ ಮುಖ್ಯ ಕಾರ್ಯದರ್ಶಿ ಅಮೃತ್ ಲಾಲ್ ಮೀನಾ ಅವರಿಗೆ ಐದು ವಿದ್ಯಾರ್ಥಿಗಳ ನಿಯೋಗ ಅರ್ಜಿ ಸಲ್ಲಿಸಿದೆ. ಪ್ರಶಾಂತ್ ಕಿಶೋರ್ ವಿದ್ಯಾರ್ಥಿಗಳ ಈ ನಿಯೋಗದ ನೇತೃತ್ವ ವಹಿಸಿದ್ದರು. ಬೇಡಿಕೆಗಳನ್ನು ಈಡೇರಿಸದಿದ್ದರೆ, ಸರ್ಕಾರದ ಮೇಲೆ ಒತ್ತಡ ಹೇರಲು ಪಾಟ್ನಾದಲ್ಲಿ ನಡೆಯಲಿರುವ ಅನಿರ್ದಿಷ್ಟ ಧರಣಿಯ ನೇತೃತ್ವ ವಹಿಸುವುದಾಗಿ ಕಿಶೋರ್ ಹೇಳಿದ್ದಾರೆ.

ವಿದ್ಯಾರ್ಥಿಗಳ ಮೇಲೆ ಪೊಲೀಸರು ನಡೆಸಿದ ಲಾಠಿಚಾರ್ಜ್ ಘಟನೆಯಲ್ಲಿ ತಾನು ಭಾಗಿಯಾಗಿದ್ದೇನೆ ಎಂಬ ಆರೋಪಗಳನ್ನು ಕಿಶೋರ್ ನಿರಾಕರಿಸಿದ್ದಾರೆ. ತಾವು ಪ್ರತಿಭಟನಾ ಸ್ಥಳದಿಂದ ಹೊರಟ 45 ನಿಮಿಷಗಳ ನಂತರ ಈ ಘಟನೆ ನಡೆದಿದೆ ಎಂದು ಅವರು ಪ್ರತಿಪಾದಿಸಿದ್ದಾರೆ. ತಾನು, ಆರತಿ ಮಿಶ್ರಾ ಮತ್ತು ಆನಂದ್ ಮಿಶ್ರಾ ಸೇರಿದಂತೆ 700 ವಿದ್ಯಾರ್ಥಿಗಳು ಹಾಗೂ ವ್ಯಕ್ತಿಗಳ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಹಿಂಪಡೆಯಬೇಕೆಂದು ಅವರು ಒತ್ತಾಯಿಸಿದ್ದಾರೆ. ಪರೀಕ್ಷಾ ಪ್ರಕ್ರಿಯೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ ಕಿಶೋರ್, ಪ್ರಶ್ನೆ ಪತ್ರಿಕೆ ಸೋರಿಕೆಯಾದ ಬಾಪು ಕೇಂದ್ರ ಮಾತ್ರವಲ್ಲದೆ ಎಲ್ಲಾ ಕೇಂದ್ರಗಳಲ್ಲಿ ಬಿಪಿಎಸ್‌ಸಿ ಪರೀಕ್ಷೆಯನ್ನು ರದ್ದುಗೊಳಿಸಬೇಕೆಂದು ಪುನರುಚ್ಚರಿಸಿದ್ದಾರೆ.

# ವಂಚನೆ: ದಂಪತಿ ಬಂಧನ

**ಭುವನೇಶ್ವರ:** ಪ್ರಧಾನಿ ಮೋದಿಯವರ ಪ್ರಧಾನ ಕಾರ್ಯದರ್ಶಿ ಪಿ.ಕೆ. ಮಿಶ್ರಾರ ಮಗಳು, ಅಳಿಯ ಎಂದು ಹೇಳಿಕೊಂಡು ಜನರಿಗೆ ವಂಚನೆ ಮಾಡುತ್ತಿದ್ದ ಇಬ್ಬರನ್ನು ಒಡಿಶಾ ಪೊಲೀಸರು ಬಂಧಿಸಿದ್ದಾರೆ.

ನಗರದಲ್ಲಿ ಹಲವು ಬಿಲ್ಡರ್‌ಗಳು, ಗಣಿ ಮಾಲೀಕರು ಮತ್ತು ಉದ್ಯಮಿಗಳಿಗೆ ಕೋಟ್ಯಂತರ ರೂಪಾಯಿ ವಂಚಿಸಿದ ಪ್ರಕರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಧಾನ ಕಾರ್ಯದರ್ಶಿ ಪಿ.ಕೆ. ಮಿಶ್ರಾ ಅವರ ಮಗಳು ಮತ್ತು ಅಳಿಯನಂತೆ ನಟಿಸಿದ್ದ ದಂಪತಿಯನ್ನು ಒಡಿಶಾ ಪೊಲೀಸರು ಬಂಧಿಸಿದ್ದಾರೆ.

ಹನ್ಸಿತಾ ಅಭಿಲಿಪ್ಸಾ ಮತ್ತು ಅನಿಲ್ ಮೊಹಾಂತಿ, ಒಡಿಶಾದ ಪ್ರಮುಖ ಅಧಿಕಾರಿಗಳು ಮತ್ತು ರಾಜಕಾರಣಿಗಳೊಂದಿಗೆ ನಿಕಟ ಸಂಬಂಧವನ್ನು ಹೊಂದಿರುವುದಾಗಿ ಹೇಳಿಕೊಂಡು ಜನರನ್ನು ವಂಚಿಸಿದ್ದಾರೆ. ಭುವನೇಶ್ವರದ ಇನ್ಫೋಸಿಟಿ–ನಂದಂಕನನ್ ರಸ್ತೆಯಲ್ಲಿರುವ ಐಷಾರಾಮಿ ಕಚೇರಿಯೊಂದರಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ಅಲ್ಲಿ ತಮ್ಮ ಪ್ರಭಾವಿ ಸಂಪರ್ಕಗಳನ್ನು ಬಳಸಿಕೊಂಡು ಟೆಂಡರ್ ಮತ್ತು ಒಪ್ಪಂದಗಳನ್ನು ಅಂತಿಮಗೊಳಿಸುವ ಹುಸಿ ಭರವಸೆ ನೀಡಿ ಹಣ ವಂಚಿಸುತ್ತಿದ್ದರು.ಗಣಿ ಮಾಲೀಕನೋರ್ವರ ದೂರನ್ನು ಆಧರಿಸಿ ಪೊಲೀಸರಿಗೆ ಮಾಹಿತಿ ನೀಡಲಾಗಿತ್ತು. ಮಾಜಿ ಕಂಟ್ರೋಲರ್ ಮತ್ತು ಆಡಿಟರ್ ಜನರಲ್ (ಸಿಎಜಿ) ಮತ್ತು ಒಡಿಶಾ ಮುಖ್ಯ ಕಾರ್ಯದರ್ಶಿ ಮನೋಜ್ ಅಹುಜಾ ಸೇರಿದಂತೆ ಉನ್ನತ ಅಧಿಕಾರಿಗಳೊಂದಿಗೆ ನಿಕಟ ಒಡನಾಟವನ್ನು ಹೊಂದಿರುವಂತೆ ಆರೋಪಿಗಳು ಬಿಂಬಿಸಿದ್ದರು. ದಂಪತಿಯನ್ನು ಪಾಟಿಯಾ ಪ್ರದೇಶದಲ್ಲಿ ಬಂಧಿಸಲಾಗಿದೆ ಮತ್ತು ವಂಚನೆಯಲ್ಲಿ ಭಾಗಿಯಾಗಿರುವ ಇತರ ಸಂಭಾವ್ಯ ಸಹಚರರು ಮತ್ತು ಬಲಿಪಶುಗಳನ್ನು ಗುರುತಿಸಲು ಹೆಚ್ಚಿನ ತನಿಖೆಗಳು ನಡೆಯುತ್ತಿವೆ.

# ಸೇನೆಯಿಂದ ಬಂಡುಕೋರರ ನಾಲ್ಕು ಬಂಕರ್ ನಾಶ


**ಇಂಫಾಲ್:** ನಗರದ ಪೂರ್ವ ಮತ್ತು ಕಾಂಗ್ಪೋಕ್ಪಿ ಜಿಲ್ಲೆಗಳಲ್ಲಿ ಭದ್ರತಾ ಪಡೆಗಳು ಬಂಡುಕೋರರ ನಾಲ್ಕು ಬಂಕರ್‌ಗಳನ್ನು ನಾಶಪಡಿಸಿವೆ ಎಂದು ಪೊಲೀಸರು ತಿಳಿಸಿದ್ದಾರೆ. ತಮ್ನಾಪೋಕ್ಪಿ ಮತ್ತು ಸನಸಾಬಿ ಗ್ರಾಮಗಳ ಗಡಿಯಲ್ಲಿರುವ ಹಲವಾರು ಪ್ರದೇಶಗಳಲ್ಲಿ ಕಳೆದ ಎರಡು ದಿನಗಳಲ್ಲಿ ಬೃಹತ್ ಕಾರ್ಯಾಚರಣೆ ನಡೆಸಿದ ನಂತರ ಬಂಕರ್ ಗಳನ್ನು ನಾಶಪಡಿಸಲಾಗಿದೆ ಎಂದು ತಿಳಿಸಿದ್ದಾರೆ

"ತಮ್ನಾಪೋಕ್ಪಿ ಮತ್ತು ಸನಸಾಬಿಯಲ್ಲಿ ಇತ್ತೀಚೆಗೆ ನಡೆದ ಗುಂಡಿನ ದಾಳಿ ಘಟನೆಗಳಲ್ಲಿ ಭಾಗಿಯಾಗಿದ್ದ ಎಲ್ಲಾ ಸಶಸ್ತ್ರ ದುಷ್ಕರ್ಮಿಗಳನ್ನು ಹೊರಹಾಕಲಾಗಿದೆ. ನಾಲ್ಕು ಅಕ್ರಮ ಬಂಕ್‌ಗಳನ್ನು ನಾಶಪಡಿಸಲಾಗಿದ್ದು, ಇತರ ಮೂರು ಬಂಕ್‌ಗಳನ್ನು ಭದ್ರತಾ ಪಡೆಗಳು ಕಣಿವೆ ಮತ್ತು ಪ್ರಾಬಲ್ಯದ ಬೆಟ್ಟ ಪ್ರದೇಶಗಳಲ್ಲಿ ಆಕ್ರಮಿಸಿಕೊಂಡಿವೆ" ಎಂದು ಪೊಲೀಸರು ಹೇಳಿದ್ದಾರೆ. ಸೇನೆ, ಬಿಎಸ್‌ಎಫ್ ಮತ್ತು ಸಿಆರ್‌ಪಿಎಫ್ ಸಂಯೋಜಿತ ತಂಡ ಕಾಂಗ್ಪೋಕ್ಪಿ ಜಿಲ್ಲೆಯ ಉಯೋಕ್ ಚಿಂಗ್ನ ಪ್ರಾಬಲ್ಯದ ಪ್ರದೇಶಗಳನ್ನು ಆಕ್ರಮಿಸಿಕೊಂಡಿದೆ. ತಮ್ನಾಪೋಕ್ಪಿ ಮತ್ತು ಸನಸಾಬಿ ಗ್ರಾಮಗಳಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಪೊಲೀಸ್ ಸಿಬ್ಬಂದಿ ಮತ್ತು ಮಹಿಳೆ ಸೇರಿದಂತೆ ನಾಲ್ವರು ಗಾಯಗೊಂಡಿದ್ದಾರೆ.

ಕಾಂಗ್ಪೋಕ್ಪಿ ಜಿಲ್ಲೆಯ ಪಕ್ಕದ ಬೆಟ್ಟಗಳಿಂದ ಬಂದ ಶಸ್ತ್ರಸಜ್ಜಿತ ಬಂದೂಕುಧಾರಿಗಳು ತಮ್ನಾಪೋಕ್ಪಿ ಮತ್ತು ಸನಸಾಬಿ ಗ್ರಾಮಗಳ ಮೇಲೆ ಬಂದೂಕು ದಾಳಿ ನಡೆಸಲಾಗಿದೆ. ಇದರ ಪರಿಣಾಮವಾಗಿ ಭದ್ರತಾ ಪಡೆಗಳು ಮತ್ತು ಗ್ರಾಮದ ಸ್ವಯಂಸೇವಕರೊಂದಿಗೆ ಗುಂಡಿನ ಚಕಮಕಿ ನಡೆದಿದೆ ಎಂದು ಹೇಳಲಾಗಿದೆ.

# ಆರ್.ಜಿ.ಕರ್ ಹತ್ಯೆ; ಮಹಿಳೆಯ ಡಿಎನ್‌ಎ ಪತ್ತೆ

**ಕೊಲ್ಕತ್ತಾ:** ನಗರದ ಆರ್.ಜಿ. ಕರ್ ಆಸ್ಪತ್ರೆಯ ಟ್ರೈನಿ ವೈದ್ಯೆ ತಿಲೋತ್ತಮ ಪ್ರಕರಣದಲ್ಲಿ ಕೇಂದ್ರ ವಿಧಿವಿಜ್ಞಾನ ವರದಿಯಲ್ಲಿ ಅಚ್ಚರಿಯ ವಿಷಯ ಹೊರಬಿದ್ದಿದೆ. ವಿಧಿವಿಜ್ಞಾನ ತಜ್ಞ ಅಜಯ್ ಗುಪ್ತಾ ಅವರ ಪ್ರಕಾರ, ಶವಪರೀಕ್ಷೆ ವರದಿ ಆ ಮಹಿಳೆಯ ಯೋನಿಯಲ್ಲಿ ಬಿಳಿ, ದಪ್ಪ, ಜಿಗುಟಾದ ದ್ರವ ಕಂಡುಬಂದಿದೆ




ಎಂದು ಉಲ್ಲೇಖಿಸಿದೆ. ತಿಲೋತ್ತಮ ಅವರ ಸ್ತನತೊಟ್ಟುಗಳ ಮೇಲೆ ಕಚ್ಚಿದ ಗುರುತುಗಳು ಕಂಡುಬಂದಿದೆ. ಹಾಗೇ, ವೈ ಕ್ರೋಮೋಸೋಮ್ಸ್ ಕೂಡ ಪತ್ತೆಯಾಗಿದೆ. ಅಂದು ಕೊಲೆ ನಡೆದ ದಿನ ಆ ಜಾಗದಲ್ಲಿ ಇನ್ನೋರ್ವ ಮಹಿಳೆಯೂ ಇದ್ದರು ಎಂಬುದು ಕೂಡ ದೃಢಪಟ್ಟಿದೆ. ಈ ಮೂಲಕ ತಿಲೋತ್ತಮ ಅವರ ಮೇಲೆ ಸಂಜಯ್ ಅತ್ಯಾಚಾರ ನಡೆಸಿದ್ದಾನೆ ಎಂಬ ಆರೋಪದ ಬೆನ್ನಲ್ಲೇ ಇನ್ನೋರ್ವ ಮಹಿಳೆಯ ಸಂಚು ಕೂಡ ಇರುವುದು ದೃಢಪಟ್ಟಿದೆ.

ಈ ಬಗ್ಗೆ ವಿವರಣೆ ನೀಡಿರುವ ಫೋರೆನ್ಸಿಕ್ ತಜ್ಞ ಅಜಯ್ ಗುಪ್ತಾ, ಶವಪರೀಕ್ಷೆ ವರದಿಯ ಪ್ರಕಾರ ಮೃತ ಮಹಿಳೆಯ ಯೋನಿಯಲ್ಲಿ ಬಿಳಿ, ದಪ್ಪ, ಜಿಗುಟಾದ ದ್ರವ ಪತ್ತೆಯಾಗಿದೆ, ಸ್ತನದ ಮೇಲೆ ಕಚ್ಚಿದ ಗುರುತುಗಳು ಇವೆ, ವೈ ಕ್ರೋಮೋಸೋಮ್ ಕೂಡ ಪತ್ತೆಯಾಗಿದೆ ಎಂದಿದ್ದಾರೆ.

ಡಿಎನ್‌ಎ ತಜ್ಞ ಪಾರ್ಥ ಪ್ರತಿಮ್ ಮಜುಂದಾರ್, ಸ್ತನದ ಮೇಲಿನ ಗಾಯ ಬಂಧಿತ ಸಂಜಯ್‌ನ ಡಿಎನ್‌ಎಗೆ ಹೊಂದಿಕೆಯಾಗಿದೆ. ಆದರೆ, 4 ಆಟೋಸೋಮಲ್ ಮಾರ್ಕರ್‌ಗಳು ಇನ್ನೊಬ್ಬ ವ್ಯಕ್ತಿಯ ಡಿಎನ್‌ಎ ಕೂಡ ಇದೆ ಎಂದು ಹೇಳುತ್ತದೆ. ಬಂಧಿತ ವ್ಯಕ್ತಿಯ ವೈ ಕ್ರೋಮೋಸೋಮ್ ಜೊತೆಗೆ ಮತ್ತೊಂದು ಮಹಿಳೆಯ ಡಿಎನ್‌ಎ ಮೃತ ಮಹಿಳೆಯ ಯೋನಿ ಮಾದರಿಯಲ್ಲಿ ಕಂಡುಬಂದಿದೆ ಎಂದಿದ್ದಾರೆ

ಆಗಸ್ಟ್ 9ರಂದು ಆರ್. ಜಿ. ಕರ್ ತುರ್ತು ವಿಭಾಗದ 4ನೇ ಮಹಡಿಯ ಸೆಮಿನಾರ್ ಹಾಲ್‌ನಿಂದ ತಿಲೋತ್ತಮ ಅವರ ಮೃತದೇಹ ಪತ್ತೆಯಾಗಿತ್ತು. ಪ್ರಕರಣದ ತನಿಖೆಯನ್ನು ಸಿಬಿಐ ವಹಿಸಿಕೊಂಡಿದೆ.

# ಹಿಂದೂ ಮಹಾಸಾಗರದಲ್ಲಿ ಹೆಚ್ಚಿದ ಭದ್ರತೆ

**ನವದೆಹಲಿ:** ಹಿಂದೂ ಮಹಾಸಾಗರ ಪ್ರದೇಶ ಮತ್ತು ಅದರಾಚೆಗೆ ನಿರಂತರವಾಗಿ ವಿಸ್ತರಿಸುತ್ತಿರುವ ಚೀನಾದ ಪಾರಮ್ಯವನ್ನು ಎದುರಿಸಲು ದೇಶದ ನೌಕಾಪಡೆಯ ಯುದ್ಧ ಸಾಮರ್ಥ್ಯಗಳಿಗೆ ಆದ್ಯತೆ ಹೆಚ್ಚಿಸಲಾಗುತ್ತಿದೆ.

ನೌಕಾಪಡೆಯು ಮುಂದಿನ ತಿಂಗಳು ಎರಡು ಸ್ವದೇಶಿ ಮುಂಚೂಣಿ ಯುದ್ಧನೌಕೆಗಳು ಮತ್ತು ಡೀಸೆಲ್–ವಿದ್ಯುತ್ ಜಲಾಂತರ್ಗಾಮಿ ನೌಕೆ ನಿಯೋಜಿಸಲು ಸಿದ್ಧವಾಗಿದೆ. ಅದರಲ್ಲಿ ರಷ್ಯಾ ನಿರ್ಮಿತ ಫ್ರಿಗೇಟ್ ಐಎನ್‌ಎಸ್ ತುಶಿಲ್ ಕೂಡ ಹೊಸ ಸೇರ್ಪಡೆಯಾಗಲಿದೆ

ಹೊಸ ಯುದ್ಧನೌಕೆಗಳ ಕ್ಷಿಪಣಗಳು 7,400–ಟನ್ ಸಾಮರ್ಥ್ಯ ಹೊಂದಿವೆ. ಸ್ಟೆಲ್ತ್ ಫ್ರಿಗೇಟ್ ನೀಲಗಿರಿ: 6,670–ಟನ್ ಮತ್ತು ಜಲಾಂತರ್ಗಾಮಿ ವಾಗ್‌ಶೀರ್: 1,600–ಟನ್ ತೂಕ ಹೊಂದಿದ್ದು ಈ ಯುದ್ಧ ನೌಕೆಗಳು ನೌಕಾಪಡೆಯ ಮತ್ತಷ್ಟು ಬಲ ಹೆಚ್ಚಿಸಲು ಸಹಕಾರಿಯಾಗಲಿವೆ.

ಸೂರತ್‌ನಂತಹ 164–ಮೀಟರ್ ಉದ್ದದ



ಮೊದಲ ಮೂರು ಯುದ್ಧನೌಕೆಗಳಾದ ಐಎನ್‌ಎಸ್ ವಿಶಾಖಪಟ್ಟಣಂ, ಐಎನ್‌ಎಸ್ ಮೊರ್ಮುಗೋ ಮತ್ತು ಐಎನ್‌ಎಸ್ ಇಂಫಾಲ್ ಅನ್ನು 35,000 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಿದ್ದು ರಕ್ಷಣಾ ಬಲವರ್ಧನೆಗೆ ಸಹಕಾರಿಯಾಗಿದೆ.

ಸೂರತ್ ನೌಕಾಪಡೆಯ ಮೊದಲ ಎಐ ಸೌಲಭ್ಯ ಹೊಂದಿದ ಯುದ್ಧನೌಕೆಯಾಗಿದೆ. ಕಾರ್ಯಾಚರಣೆಯ ದಕ್ಷತೆಯ ಬಹುಮಾದರಿಯ ಸಮಯ ಹೆಚ್ಚಿಸಲು ಸಹಕಾರಿಯಾಗಲಿದೆ. ವಿಧ್ವಂಸಕ ಕೃತ್ಯಗಳನ್ನು ತಡೆಯಲು ಸಹಕಾರಿಯಾಗಲಿದೆ.

ಬ್ರಹ್ಮೋಸ್ ಸೂಪರ್ಸಾನಿಕ್ ಕ್ರೂಸ್ ಕ್ಷಿಪಣಿಗಳು, ಬರಾಕ್–8 ಮಧ್ಯಮ–ಶ್ರೇಣಿಯ ಮೇಲ್ಮೈಯಿಂದ ಗಾಳಿಗೆ ಕ್ಷಿಪಣಿಗಳು, 76 ಎಂಎಂ ಸೂಪರ್ ರಾಪಿಡ್ ಗನ್ಗಳು ಮತ್ತು ರಾಕೆಟ್ಗಳು ಮತ್ತು ಟಾರ್ಪಿಡೊಗಳಂತಹ ಜಲಾಂತರ್ಗಾಮಿ ವಿರೋಧಿ ಶಸ್ತ್ರಾಸ್ತ್ರಗಳೊಂದಿಗೆ ಶಸ್ತ್ರಸಜ್ಜಿತವಾಗಿವೆ. .

ನೀಲಗಿರಿಯು ಪ್ರಾಜೆಕ್ಟ್–17 ಎ ಅಡಿಯಲ್ಲಿ ನಿರ್ಮಿಸಲಾಗುತ್ತಿರುವ ಏಳು ಬಹು–ಪಾತ್ರ ಯುದ್ಧನೌಕೆಗಳಲ್ಲಿ ಮೊದಲನೆಯದಾಗಿದೆ. ಈ ಎಲ್ಲಾ ಏಳು ಯುದ್ಧನೌಕೆಗಳು, ಅಗತ್ಯವಾದ ಹಲ್–ಶೇಪಿಂಗ್, ರಾಡಾರ್–ಪಾರದರ್ಶಕ ಡೆಕ್ ಫಿಟ್ಟಿಂಗ್‌ಗಳು ಮತ್ತು ಶತ್ರುಗಳಿಂದ ತಮ್ಮ ಪತ್ತೆಯನ್ನು ಕಷ್ಟಕರವಾಗಿಸುವ ಇತರ ಕ್ರಮಗಳೊಂದಿಗೆ, 2026 ರ ಅಂತ್ಯದ ವೇಳೆಗೆ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ.

ಕಾಲಚಕ್ರದಲ್ಲಿ ಮತ್ತೊಂದು ಹೊಸವರ್ಷವನ್ನು ಸ್ವಾಗತಕ್ಕೆ ಇಂಡಿಯಾ ಸಜ್ಜಾಗಿದೆ. ಇದರ ನಡುವೆ 2024ಚಿರಲ್ಲಿ ರಾಜಕೀಯ ವಲಯದಲ್ಲಿ ಎದುರಾದ ಏಳು-ಬೀಳುಗಳವನ್ನು ರಿವೈಂಡ್ ಮಾಡುತ್ತಿದ್ದಂತೆ ಕಣ್ಮುಂದೆ ಬರುವುದು ಲೋಕಸಭೆ ಚುನಾವಣೆಗಳು, ಮಹಾರಾಷ್ಟ್ರ, ಜಮ್ಮು ಮತ್ತು ಕಾಶ್ಮೀರ, ಕರ್ನಾಟಕದಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಗಳು. ಉತ್ತರಪ್ರದೇಶದಲ್ಲಿ ಬಾಲ ರಾಮಚಂದ್ರನ ವಿಗ್ರಹ ಪ್ರತಿಷ್ಠಾಪನೆ, ದಿಲ್ಲಿಯ ಸಿಎಂ ಅರವಿಂದ್ ಕೇಜ್ರಿವಾಲ್ ಅವರ ರಾಜೀನಾಮೆ ಹಾಗೂ ಜೈಲುವಾಸ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್, ಕರ್ನಾಟಕದ ಮಾಜಿ ಸಿಎಂ ಎಸ್.ಎಂ.ಕೃಷ್ಣ ನಿಧನ.

## ಮತ್ತೆ ಮೋದಿಗೆ ಪಿಎಂ ಪಟ್ಟ

ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ವಿಪಕ್ಷಗಳ ಗ್ಯಾರಂಟಿ ಮಂತ್ರಗಳ ಸದ್ದಿನ ನಡುವೆಯೂ ಸಹ ಮತ್ತೊಮ್ಮೆ ನರೇಂದ್ರ ಮೋದಿ ದೇಶದ ಪ್ರಧಾನಿಯಾಗಿದ್ದಾರೆ. ಈ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ 400ರ ಗಡಿ ದಾಟಲು ಸಾಧ್ಯವಾಗದಿದ್ದರೂ, ಅದು ಅಧಿಕಾರವನ್ನು ಉಳಿಸಿಕೊಂಡಿದೆ. ಬಿಹಾರ ಹಾಗೂ ಆಂಧ್ರಪ್ರದೇಶ ಸಿಎಂಗಳ ಬೆಂಬಲದಿಂದಾಗಿ ನರೇಂದ್ರ ಮೋದಿ ಅವರು ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದರು.



## ಜಮ್ಮು-ಕಾಶ್ಮೀರನಲ್ಲಿ ಒಮರ್ ದರ್ಬಾರ್



ಇಡೀ ದೇಶದಚಿತ್ತ ಜಮ್ಮು-ಕಾಶ್ಮೀರ ವಿಧಾನಸಭೆಯತ್ತ ನೆಟ್ಟಿತ್ತು. ಏಕೆಂದರೆ ಒಂದು ದಶಕದ ನಂತರ ರಾಜ್ಯಕ್ಕೆ ವಿಶೇಷ ಸ್ಥಾನಮಾನದ ಅನುಪಸ್ಥಿತಿಯಲ್ಲಿ 370ನೇ ವಿಧಿಯ ಅಡಿಯಲ್ಲಿ ಬಂದಿತ್ತು. ಇದನ್ನು 2019ರಲ್ಲಿ ರದ್ದುಗೊಳಿಸಲಾಯಿತು. ಚುನಾವಣೆಯಲ್ಲಿ ಒಮರ್ ಅಬ್ದುಲ್ಲಾ ನೇತೃತ್ವದ ನ್ಯಾಷನಲ್ ಕಾನ್ಫರೆನ್ಸ್ 42 ಸ್ಥಾನಗಳನ್ನು ಗೆದ್ದು, ಅದ್ಭುತ ಪುನರಾಗಮನವನ್ನು ಮಾಡಿತು. ಬಿಜೆಪಿ 29 ಸ್ಥಾನಗಳನ್ನು ಗೆದ್ದರೆ, ಮೆಹಬೂಬಾ ಮುಫ್ತಿ ಅವರ ಪಿಡಿಪಿ 3ಕ್ಕೆ ಇಳಿದಿದೆ.

## ಹರಿಯಾಣದಲ್ಲಿ ಮತ್ತೆ ಅರಳಿದ ಕಮಲ



ಹರಿಯಾಣದಲ್ಲಿ ಮತ್ತೆ ಬಿಜೆಪಿ ಅಧಿಕಾರಿ ಉಳಿಸಿಕೊಂಡಿದೆ. ಎಲ್ಲಾ ಸಮೀಕ್ಷೆಯ ಭವಿಷ್ಯವಾಣಿಗಳನ್ನು ಧಿಕ್ಕರಿಸಿದೆ. ಮನೋಹರ್ ಲಾಲ್ ಖಟ್ಟರ್ ಬದಲಿಗೆ ನಯಾಬ್ ಸಿಂಗ್ ಸೈನಿಗೆ ಮುಖ್ಯಮಂತ್ರಿ ಪಟ್ಟ ಸಿಕ್ಕಿದೆ.

## ಹೇಮಂತ್ ಸೊರೆನ್ ಜೈಲು



ಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ) ನಾಯಕ ಮತ್ತು ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್‌ಗೆ 2024 ಅಭೂತ ಪೂರ್ವವಾಗಿದೆ. ಜನವರಿಯಲ್ಲಿ ಆಪಾದಿತ ಭೂ ದೃಶ್ಯಕ್ಕಾಗಿ ಜೈಲು ಪಾಲಾದ ಕಾರಣ ಹೊಸ ವರ್ಷವು ಅವರಿಗೆ ಅಸಭ್ಯ ಆಘಾತವನ್ನು ತಂದಿತು. ಆದಾಗ್ಯೂ, ಅವರು ನಂತರ ಪುಟಿದೇಳಿದರು. ಜಾಮೀನು ಪಡೆದು ಚುನಾವಣೆ ಎದುರಿಸಿ ಪ್ರತಿಪಕ್ಷ ಬಿಜೆಪಿಯನ್ನು ಸೋಲಿಸಿದರು. 2024ರ ಜಾರ್ಖಂಡ್ ಅಸೆಂಬ್ಲಿ ಚುನಾವಣೆಯಲ್ಲಿ ಅವರ ಪಕ್ಷವು 34 ಸ್ಥಾನಗಳನ್ನು ಗೆದ್ದ ಕಾರಣ ಅವರು ಮುಖ್ಯಮಂತ್ರಿಯಾಗಿ ಮರಳಿದರು.




## ಮಣಿಪುರದಲ್ಲಿ ಜನಾಂಗೀಯ ಹಿಂಸಾಚಾರ

ಮೇ 2023ರಲ್ಲಿ ಮೈತೆಯಿ ಮತ್ತು ಕುಕಿ-ಜೊ ನಡುವಿನ ಘರ್ಷಣೆಯ ನಂತರ ಪ್ರಾರಂಭವಾದ ಜನಾಂಗೀಯ ಹಿಂಸಾಚಾರದ ಸಮಸ್ಯೆಯು 2024ರಲ್ಲಿ ಬಗೆಹರಿಯದೆ ಉಳಿದಿದೆ. ಈ ವರ್ಷವೂ ಈಶಾನ್ಯ ರಾಜ್ಯದಲ್ಲಿ ಪರಿಸ್ಥಿತಿಯನ್ನು ಹದಗೆಡಿಸುವ ಹಲವಾರು ಹಿಂಸಾಚಾರಗಳಿಗೆ ಸಾಕ್ಷಿಯಾಗಿದೆ ಹಾಗೂ ಹಿಂಸಾಚಾರಕ್ಕೆ ಹಲವರು ಜೀವ ಕಳೆದುಕೊಂಡಿದ್ದಾರೆ. ಜನಾಂಗೀಯ ಹಿಂಸಾಚಾರ ಇನ್ನೂ ಬೂದಿಮುಚ್ಚಿದ ಕೆಂಡದ ಸ್ಥಿತಿಯಂತೆ ಇದೆ.



## ಮನಮೋಹನ ಚಿರಮೌನ

ಭಾರತದ ಆರ್ಥಿಕತೆಗೆ ಹೊಸ ದಿಕ್ಕು ತೋರಿದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು ಗುರುವಾರ ರಾತ್ರಿ (ಡಿ.26) ನವದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ನಿಧನರಾದರು. ನಿಗಮ್‌ಬೋಧ್ ಘಾಟ್



## ದಲಿತರ ಆಕ್ರೋಶ

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ರಾಜ್ಯಸಭೆಯಲ್ಲಿ ಅವಹೇಳನಕಾರಿ ಹೇಳಿಕೆ ನೀಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜೀನಾಮೆಗೆ ಒತ್ತಾಯಿಸಿ ಅಹಿಂದ, ದಲಿತ ಸಂಘಟನೆಗಳ ಒಕ್ಕೂಟ ಸಿಡಿಕಿಡಿಗೊಂಡು ಅಲ್ಲಲ್ಲಿ ಪ್ರತಿಭಟನೆ, ಬಂದ್ ಸಹ ನಡೆಸುತ್ತಿವೆ.

## 'ಮಹಾ' ದೇವೇಂದ್ರ



ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯ ಫಲಿತಾಂಶ ರಾಜಕೀಯ ತಜ್ಞರ ಲೆಕ್ಕಾಚಾರ ಉಲ್ಟಾ-ಪಲ್ಟಾ ಮಾಡಿದೆ. ಏಕೆಂದರೆ ಆಡಳಿತಾರೂಢ ಮಹಾಯುತಿಯು ಅಗಾಧ ಗೆಲುವು ಪಡೆಯುತ್ತದೆ ಎಂದು ಯಾರೂ ನಿರೀಕ್ಷಿಸಿರಲಿಲ್ಲ.

ಬಿಜೆಪಿ 132 ಸ್ಥಾನ ಗೆದ್ದುಕೊಂಡಿತು. ಏಕನಾಥ್ ಶಿಂಧೆ ಅವರ ಶಿವಸೇನೆ ಮತ್ತು ಅಜಿತ್ ಪವಾರ್ ಅವರ ಎನ್‌ಸಿಪಿ ಕ್ರಮವಾಗಿ 57 ಸ್ಥಾನ ಮತ್ತು 41 ಸ್ಥಾನ ಗೆದ್ದುಕೊಂಡಿತ್ತು. ಈ ಮೂಲಕ ಕಾಂಗ್ರೆಸ್ ನೇತೃತ್ವದ ಮಹಾ ವಿಕಾಸ್ ಅಘಾಡಿ (ಎಂವಿಎ) ಭಾರಿ ಹಿನ್ನಡೆಯಾಗಿದೆ

ಮಹಾರಾಷ್ಟ್ರದ ಸಿಎಂ ಆಗಿ ದೇವೇಂದ್ರ ಫಡ್ನವೀಸ್ ಅಧಿಕಾರ ವಹಿಸಿಕೊಂಡಿದ್ದಾರೆ. ಮತ್ತೆ ಮಹಾರಾಷ್ಟ್ರದಲ್ಲಿ ಬಿಜೆಪಿ ಕಿಲಕಿಲ ಎಂದಿದೆ.

## ದಿಲ್ಲಿ ಸಿಎಂ ಜೈಲಿಗೆ

ಅಬಕಾರಿ ನೀತಿ ಹಗರಣದ ಆರೋಪದ ಮೇಲೆ ದಿಲ್ಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಜೈಲು ಸೇರಬೇಕಾಯಿತು ಹಾಗೂ ಜೈಲಿನಿಂದಲೇ ಲೋಕಸಭೆ ಚುನಾವಣೆಗೆ ಎಎಪಿ ಅಭ್ಯರ್ಥಿಗಳ ಪರ ಪ್ರಚಾರ ಮಾಡಿದರು. ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ ಎಂದು ಹಠ ಹಿಡಿದಿದ್ದ ಅರವಿಂದ್ ಕೇಜ್ರಿವಾಲ್ ಅವರು ಅಚ್ಚರಿಯ ನಡೆಯಲ್ಲಿ ಸೆ.17ರಂದು ಅಧಿಕಾರದಿಂದ ಕೆಳಗಿಳಿದಿದ್ದು, ಪಕ್ಷದ ಸಹೋದ್ಯೋಗಿ ಅತಿಶಿ ಅಧಿಕಾರ ವಹಿಸಿಕೊಳ್ಳಲು ದಾರಿ ಮಾಡಿಕೊಟ್ಟಿದ್ದಾರೆ. ಅಬಕಾರಿ ನೀತಿ ಹಗರಣದಲ್ಲಿ ಜಾಮೀನಿನ ಮೇಲೆ ಜೈಲಿನಿಂದ ಹೊರಬಂದ ನಂತರ ಕೇಜ್ರಿವಾಲ್, ದೆಹಲಿಯ ಜನರು ತನಗೆ ಕ್ಲೀನ್‌ಚಿಟ್ ನೀಡಿದ ಬಳಿಕ ನಾನು ಸಿಎಂ ಹುದ್ದೆ ಸ್ವೀಕರಿಸುತ್ತೇನೆ ಎಂದು ಪ್ರತಿಜ್ಞೆ ಮಾಡಿದರು.



## ಸಂಸತ್‌ಗೆ ಪ್ರಿಯಾಂಕಾ ಗಾಂಧಿ



ನೆಹರು-ಗಾಂಧಿ ಕುಟುಂಬದ ಮತ್ತೊಬ್ಬ ಸದಸ್ಯೆ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ವಯನಾಡ್ ಲೋಕಸಭಾ ಉಪಚುನಾವಣೆಯಲ್ಲಿ ಜಯಗಳಿಸಿ ಸಂಸತ್ ಪ್ರವೇಶ ಮಾಡಿದ್ದಾರೆ. ರಾಹುಲ್‌ಗಾಂಧಿ ರಾಜೀನಾಮೆಯಿಂದ ತೆರವಾಗಿದ್ದ ವಯನಾಡು ಕ್ಷೇತ್ರದಿಂದ ಉಪಚುನಾವಣೆಯಲ್ಲಿ ಸ್ಪರ್ಧಿಸಿ ಪ್ರಿಯಾಂಕ ಗಾಂಧಿ ವಾದ್ರಾ ಜಯಗಳಿಸಿದ್ದಾರೆ.

## ಯುಪಿಗೆ ಮರಳಿದ ರಾಹುಲ್ ಗಾಂಧಿ



ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಯನಾಡ್ ಮತ್ತು ರಾಯ್ ಬರೇಲಿ ಈ ಎರಡು ಸ್ಥಾನಗಳಿಂದ ಸ್ಪರ್ಧಿಸಿದ್ದರು. ಎರಡೂ ಸ್ಥಾನಗಳಲ್ಲಿ ಗೆಲುವು ದಾಖಲಿಸಿದರು. ಗಾಂಧಿಯವರು ತಮ್ಮ ಕುಟುಂಬದ ಭದ್ರಕೋಟೆಯಾಗಿದ್ದ ರಾಯ್ ಬರೇಲಿ ಕ್ಷೇತ್ರವನ್ನು ಉಳಿಸಿಕೊಂಡಿದ್ದಾರೆ. ಇದು ದಕ್ಷಿಣದಿಂದ ಉತ್ತರಕ್ಕೆ ಗಾಂಧಿಯವರ ದೊಡ್ಡ ಬದಲಾವಣೆಯಾಗಿತ್ತು.

## ನವೀನ್ ಪಟ್ನಾಯಕ್ ಸೋಲು



ಈ ವರ್ಷ ಒಡಿಶಾದ ನವೀನ್ ಪಟ್ನಾಯಕ್ ಅವರಿಗೆ ದೊಡ್ಡ ಆಘಾತವ ತಂದಿದೆ. ಪಟ್ನಾಯಕ್ ಅವರು ಬಿಜೆಪಿಯ ಕೈಯಲ್ಲಿ ಅನಿರೀಕ್ಷಿತ ಸೋಲನ್ನು ಪಡೆದರು. ಒಡಿಶಾ ಅಸೆಂಬ್ಲಿ ಚುನಾವಣೆಯಲ್ಲಿ ಆಡಳಿತ ಪಕ್ಷವು 51 ಸ್ಥಾನಗಳಿಗೆ ಇಳಿಯಿತು, ಆದರೆ ಕೇಸರಿ ಪಕ್ಷವು 78 ಸ್ಥಾನಗಳನ್ನು ಗೆದ್ದು ಪಟ್ನಾಯಕ್ ಅವರ 24 ವರ್ಷಗಳ ಆಡಳಿತವನ್ನು ಕೊನೆಗೊಳಿಸಿತು.

# 2024ರಲ್ಲಿ ಯಶಸ್ಸಿನ ಶಿಖರವೇರಿದ ಜೈಸ್ವಾಲ್



2023 ರಲ್ಲಿ ಟೆಸ್ಟ್ ಕೆರಿಯರ್ ಆರಂಭಿಸಿದ ಯಶಸ್ವಿ ಜೈಸ್ವಾಲ್ ಈವರೆಗೆ 18 ಪಂದ್ಯಗಳಲ್ಲಿ 34 ಇನಿಂಗ್ಸ್ ಆಡಿದ್ದಾರೆ. ಈ ವೇಳೆ 2 ದ್ವಿಶತಕ, 4 ಶತಕಗಳನ್ನು ಬಾರಿಸಿದ್ದಾರೆ. ಹಾಗೆಯೇ ಯಶಸ್ವಿ ಬ್ಯಾಟ್‌ನಿಂದ 10 ಅರ್ಧಶತಕಗಳು ಸಹ ಮೂಡಿಬಂದಿವೆ. ಈ ಮೂಲಕ ಕೇವಲ 34 ಇನಿಂಗ್ಸ್‌ಗಳಲ್ಲಿ ಯುವ ಎಡಗೈ ದಾಂಡಿಗ ಒಟ್ಟು 1766 ರನ್ ಕಲೆಹಾಕಿದ್ದಾರೆ.

2024 ಟೀಮ್ ಇಂಡಿಯಾ ಪಾಲಿಗೆ ಗೆಲುವು-ಸೋಲುಗಳ ವರ್ಷ. ಏಕೆಂದರೆ ಈ ವರ್ಷ ಭಾರತ ತಂಡ ಆಡಿದ 15 ಟೆಸ್ಟ್ ಪಂದ್ಯಗಳಲ್ಲಿ 8 ಜಯ ಸಾಧಿಸಿದರೆ, 6 ಸೋಲು ಕಂಡಿದೆ. ಈ ಸಿಹಿ-ಕಹಿ ನಡುವೆ ಯಶಸ್ಸಿನ ಶಿಖರವೇರಿದ್ದು ಯುವ ದಾಂಡಿಗ ಯಶಸ್ವಿ ಜೈಸ್ವಾಲ್. ಏಕೆಂದರೆ ಈ ವರ್ಷ ಟೆಸ್ಟ್‌ನಲ್ಲಿ ಟೀಮ್ ಇಂಡಿಯಾ ಪರ ಅತ್ಯಧಿಕ ರನ್ ಕಲೆಹಾಕಿದ ಬ್ಯಾಟರ್ ಯಶಸ್ವಿ ಜೈಸ್ವಾಲ್. ಟೀಮ್ ಇಂಡಿಯಾ ಪರ ಈ ವರ್ಷ ಟೆಸ್ಟ್‌ನಲ್ಲಿ 29 ಇನಿಂಗ್ಸ್ ಆಡಿರುವ ಯಶಸ್ವಿ ಒಟ್ಟು 1478 ರನ್ ಕಲೆಹಾಕಿದ್ದಾರೆ.

ಈ ವರ್ಷ ಭಾರತ ಪರ ಅತ್ಯಧಿಕ ಟೆಸ್ಟ್ ಶತಕ ಸಿಡಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲೂ ಯಶಸ್ವಿ ಜೈಸ್ವಾಲ್ (3 ಸೆಂಚುರಿ) ಅಗ್ರಸ್ಥಾನದಲ್ಲಿದ್ದಾರೆ. ಟೆಸ್ಟ್‌ನಲ್ಲಿ ಟೀಮ್ ಇಂಡಿಯಾ ಪರ 2024 ರಲ್ಲಿ ಅತೀ ಹೆಚ್ಚು ಅರ್ಧಶತಕ ಬಾರಿಸಿದ ಬ್ಯಾಟರ್ ಕೂಡ ಯಶಸ್ವಿ ಜೈಸ್ವಾಲ್. ಒಟ್ಟು 9 ಹಾಫ್ ಸೆಂಚುರಿ ಸಿಡಿಸಿ ಮಿಂಚಿದ್ದಾರೆ.

2024 ಟೆಸ್ಟ್‌ನಲ್ಲಿ ಅತೀ ಹೆಚ್ಚು ಫೋರ್ ಬಾರಿಸಿದ ದಾಖಲೆ ಕೂಡ ಯಶಸ್ವಿ ಜೈಸ್ವಾಲ್ ಹೆಸರಿನಲ್ಲಿದೆ. ಈ ವರ್ಷ 29 ಇನಿಂಗ್ಸ್‌ಗಳಲ್ಲಿ ಜೈಸ್ವಾಲ್ 168 ಫೋರ್‌ಗಳನ್ನು ಬಾರಿಸಿದ್ದಾರೆ. ಈ ವರ್ಷದ ಟೆಸ್ಟ್ ಕ್ರಿಕೆಟ್‌ನ ಸಿಕ್ಸರ್ ಕಿಂಗ್ ಕೂಡ ಜೈಸ್ವಾಲ್. 15 ಟೆಸ್ಟ್ ಪಂದ್ಯಗಳಲ್ಲಿ 36 ಸಿಕ್ಸ್ ಸಿಡಿಸಿ ಯಶಸ್ವಿ ಜೈಸ್ವಾಲ್ ಈ ದಾಖಲೆ ಬರೆದಿದ್ದಾರೆ. ಟೀಮ್ ಇಂಡಿಯಾ ಪರ ಟೆಸ್ಟ್‌ನಲ್ಲಿ ಈ ವರ್ಷ ಅತ್ಯುತ್ತಮ ಬ್ಯಾಟಿಂಗ್ ಸರಾಸರಿ ಹೊಂದಿದ್ದ ಆಟಗಾರ ಯಶಸ್ವಿ ಜೈಸ್ವಾಲ್. 29 ಇನಿಂಗ್ಸ್‌ಗಳಲ್ಲಿ ಜೈಸ್ವಾಲ್ 54.74ರ ಸರಾಸರಿಯಲ್ಲಿ ರನ್ ಕಲೆಹಾಕಿದ್ದಾರೆ. 2024 ರಲ್ಲಿ ಟೀಮ್ ಇಂಡಿಯಾ ಪರ ಟೆಸ್ಟ್‌ನಲ್ಲಿ ಗರಿಷ್ಠ ಸ್ಕೋರ್ ಬಾರಿಸಿದ್ದು ಕೂಡ ಯಶಸ್ವಿ. ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ ಜೈಸ್ವಾಲ್ ಅಜೇಯ 214* ರನ್ ಬಾರಿಸಿದ್ದರು.

ಈ ಬಾರಿಯ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಟೀಮ್ ಇಂಡಿಯಾ ಪರ ಅತ್ಯಧಿಕ ರನ್ ಕಲೆಹಾಕಿರುವುದು ಕೂಡ ಯಶಸ್ವಿ ಜೈಸ್ವಾಲ್. 4 ಪಂದ್ಯಗಳಲ್ಲಿ 8 ಇನಿಂಗ್ಸ್ ಆಡಿರುವ ಜೈಸ್ವಾಲ್ ಒಟ್ಟು 359 ರನ್ ಕಲೆಹಾಕಿದ್ದಾರೆ. ಇನ್ನು ಈ ವರ್ಷ ಟೆಸ್ಟ್ ಕ್ರಿಕೆಟ್‌ನಲ್ಲಿ 1400+ ರನ್ ಗಳಿಸಿದ ವಿಶ್ವದ 2ನೇ ಬ್ಯಾಟರ್ ಯಶಸ್ವಿ ಜೈಸ್ವಾಲ್. ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಇಂಗ್ಲೆಂಡ್‌ನ ಜೋ ರೂಟ್ (1556 ರನ್ಸ್). ಹಾಗೆಯೇ ಈ ವರ್ಷ ಭಾರತದ ಪರ ಟೆಸ್ಟ್‌ನಲ್ಲಿ 1000+ ರನ್ ಕಲೆಹಾಕಿದ ಏಕೈಕ ಬ್ಯಾಟರ್ ಯಶಸ್ವಿ ಜೈಸ್ವಾಲ್. ಯಶಸ್ವಿ ಜೈಸ್ವಾಲ್ ಅವರನ್ನು ಹೊರತುಪಡಿಸಿ ಭಾರತದ ಯಾವುದೇ ಬ್ಯಾಟರ್ 900 ರನ್‌ಗಳ ಗಡಿದಾಟಿಲ್ಲ ಎಂಬುದು ವಿಶೇಷ.

ಅಂದರೆ ಯಶಸ್ವಿ ಜೈಸ್ವಾಲ್ 2024 ರಲ್ಲಿ ಹೊಸ ಭರವಸೆ ಮೂಡಿಸಿರುವುದು ಸ್ಪಷ್ಟ. ಅದು ಕೂಡ ತಮ್ಮ 23ನೇ ವಯಸ್ಸಿನಲ್ಲಿ. ಹೀಗಾಗಿ 2024 ಯಶಸ್ವಿ ಜೈಸ್ವಾಲ್ ಪಾಲಿನ ಯಶಸ್ವಿ ವರ್ಷ ಎನ್ನಬಹುದು.

# 'ಟಾಕ್ಸಿಕ್' ಚಿತ್ರದ ದೃಶ್ಯ ಲೀಕ್



ಯಶ್ ಅಭಿನಯದ 'ಟಾಕ್ಸಿಕ್' ಸಿನಿಮಾದ ಪ್ರಮುಖ ದೃಶ್ಯವೊಂದು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಚಿತ್ರದ ಅದ್ದೂರಿ ಸೆಟ್ ಮತ್ತು ಯಶ್ ಅವರ ಗೆಟಪ್ ಗಮನ ಸೆಳೆದಿದೆ. ಈ ಲೀಕ್ ಚಿತ್ರತಂಡಕ್ಕೆ ತಲೆಬಿಸಿ ತಂದಿದೆ. ಸೆಟ್‌ನಲ್ಲಿ ಮೊಬೈಲ್ ಬಳಕೆ ನಿಷೇಧದ ಬಗ್ಗೆ ಚರ್ಚೆ ನಡೆಯುತ್ತಿದೆ.

ಯಾವುದೇ ಬಿಗ್ ಬಜೆಟ್ ಸಿನಿಮಾ ಶೂಟ್ ಮಾಡಬೇಕಿದ್ದರೂ ತಂಡದವರು ಹೆಚ್ಚು ಎಚ್ಚರಿಕೆ ವಹಿಸುತ್ತಾರೆ. ದೃಶ್ಯಗಳು ಲೀಕ್ ಆಗದಂತೆ ನೋಡಿಕೊಳ್ಳಲು ಮೊದಲ ಆದ್ಯತೆ ನೀಡುತ್ತಾರೆ. ಆದರೆ, ಯಶ್ ನಟನೆಯ 'ಟಾಕ್ಸಿಕ್' ತಂಡದವರು ಈ ವಿಚಾರದಲ್ಲಿ ಎಡವಿದಂತೆ ಕಾಣುತ್ತಿದೆ. ಈ ಸಿನಿಮಾದ ಪ್ರಮುಖ ದೃಶ್ಯವೇ ಲೀಕ್ ಆಗಿ ಹೋಯಿತೇ ಎಂಬ ಪ್ರಶ್ನೆ ಮೂಡುವಂತೆ ಆಗಿದೆ.

'ಟಾಕ್ಸಿಕ್' ಚಿತ್ರಕ್ಕೆ ಕೆವಿಎನ್ ಪ್ರೊಡಕ್ಷನ್ಸ್ ಬಂಡವಾಳ ಹೂಡುತ್ತಿದೆ. ಮಲಯಾಳಂನ ಗೀತು ಮೋಹನ್‌ದಾಸ್ ಅವರು ಈ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ಅದ್ದೂರಿ ಸೆಟ್‌ಗಳನ್ನು ಹಾಕಿ ಸಿನಿಮಾ ಶೂಟಿಂಗ್ ಮಾಡಲಾಗುತ್ತಿದೆ. ಆದರೆ, ಈಗ ಚಿತ್ರದ ದೃಶ್ಯ ಒಂದು ಲೀಕ್ ಆಗಿರೋದು ತಂಡದ ತಲೆಬಿಸಿ ಹೆಚ್ಚಿಸಿದೆ. ಇದರಿಂದ ಮುಂದೇನು ಎನ್ನುವ ಪ್ರಶ್ನೆ ಮೂಡಿದೆ.

ಯಶ್ ಅವರು ಯಾವುದೋ ಪ್ರಮುಖ ವ್ಯಕ್ತಿಯನ್ನು ಮೀಟ್ ಮಾಡುತ್ತಿರುವ ದೃಶ್ಯ ಇದಾಗಿದೆ. ಇಲ್ಲಿ ಸಿನಿಮಾದ ಅದ್ದೂರಿ ಸೆಟ್ ಗಮನ ಸೆಳೆದಿದೆ. ಯಶ್ ಅವರ ಗೆಟಪ್ ಕೂಡ ಗಮನ ಸೆಳೆದಿದೆ. ಈ ದೃಶ್ಯವನ್ನು ಸೆರೆ ಹಿಡಿದಿದ್ದು ಸೆಟ್‌ನಲ್ಲಿ ಇದ್ದವರಲ್ಲೇ ಒಬ್ಬರು. ಹೀಗಾಗಿ, ಇದು ಚಿತ್ರತಂಡಕ್ಕೆ ತಲೆಬಿಸಿ ತಂದಿದೆ.

ಈಗಾಗಲೇ ಹಲವು ಸಿನಿಮಾ ಸೆಟ್‌ಗಳಲ್ಲಿ ಮೊಬೈಲ್ ಬಳಕೆ ನಿಷೇಧಿಸಲಾಗಿದೆ. ಸಿನಿಮಾದ ಸೆಟ್ ಹಾಗೂ ದೃಶ್ಯಗಳು ಲೀಕ್ ಆಗಬಾರದು ಎನ್ನುವ ಕಾರಣಕ್ಕೆ ಈ ರೀತಿಯ ಕಠಿಣ ನಿಯಮ ತಂದ ಉದಾಹರಣೆ ಇದೆ. 'ಟಾಕ್ಸಿಕ್' ದೃಶ್ಯಗಳು ಇದೇ ರೀತಿ ಲೀಕ್ ಆಗುತ್ತಾ ಹೋದರೆ ಮುಂದೆ ತಂಡದವರು ಕೂಡ ಇದೇ ನಿಯಮವನ್ನು ತರಬೇಕಾಗುತ್ತದೆ.

ಜ.8 ಯಶ್ ಅವರ ಜನ್ಮದಿನ. ಈ ದಿನದಂದು ಅವರು ಅಭಿಮಾನಿಗಳಿಗೆ ಸಿಗುತ್ತಿಲ್ಲ. ಆ ಸಂದರ್ಭದಲ್ಲಿ ಯಶ್ ಅವರು ವಿದೇಶದಲ್ಲಿ ಶೂಟಿಂಗ್ ನಡೆಸಲಿದ್ದು, ಇದಕ್ಕಾಗಿ ಅವರು ವಿದೇಶಕ್ಕೆ ತೆರಳಲಿದ್ದಾರೆ. ಈ ಕಾರಣದಿಂದ ಅವರು ಈ ವರ್ಷ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲ. 2025ರ ಏಪ್ರಿಲ್‌ನಲ್ಲಿ 'ಟಾಕ್ಸಿಕ್' ರಿಲೀಸ್ ಆಗಲಿದೆ ಎನ್ನಲಾಗಿತ್ತು. ಆದರೆ, ಸಿನಿಮಾ ಶೂಟಿಂಗ್ ವಿಳಂಬ ಆದ ಕಾರಣ ರಿಲೀಸ್ ಮತ್ತಷ್ಟು ಮುಂದಕ್ಕೆ ಹೋಗಲಿದೆ.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-**38** Email-mussanje2010@gmail.com, Phone: **9448074878**